

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ವೇಣು ಸಾರಥ್ಯದಲ್ಲಿ...
ಸಂಪುಟ: 21, ಸಂಚಿಕೆ: 316, ಪುಟಗಳು: 8, ಶುಕ್ರವಾರ, 23 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

**ಸುಭಾಷಿತ**

ಸ್ಥಿರವಾದ ಮನಸ್ಸು ಗಾಳಿಯ ನಡುಭಾಗ ಇದ್ದಂತೆ. ಇಡೀ ಪ್ರಪಂಚ ನಿಮ್ಮ ಸುತ್ತ ಗಿರಕಿ ಹೊಡೆದರೂ ನಿಮ್ಮ ಮನಸ್ಸು ಮಾತ್ರ ಕದಲುವುದಿಲ್ಲ.
। ಬಿ.ಕೆ.ಎಸ್.ಅಯ್ಯಂಗಾರ್

## ಪಂಚಾಂಗ

(ಶುಕ್ರವಾರ 23, ಆಗಸ್ಟ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು,
- ಶ್ರಾವಣ ಮಾಸ, ಕೃಷ್ಣ ಪಕ್ಷ, ಚತುರ್ಥಿ / ಪಂಚಮಿ, ಶುಕ್ರವಾರ, ರೇವತಿ ನಕ್ಷತ್ರ
- ರಾಹುಕಾಲ: 10:52 ರಿಂದ 12:25
- ಗುಳಿಕಕಾಲ: 07:46 ರಿಂದ 09:19
- ಯಮಗಂಡಕಾಲ: 03:32 ರಿಂದ 05:05

# ದಸರಾ ಸಿದ್ಧತೆ ಹೊತ್ತಲ್ಲೇ ನಾಡ ಬಾಂಬ್ ಸೇರಿ ಭಾರಿ ಸ್ಫೋಟಕಗಳು ಪತ್ತೆ



**ಮೈಸೂರು:** ಟಿ.ನರಸೀಪುರ ತಾಲೂಕಿನ ಕೆಂಪಯ್ಯನಹುಂಡಿ ಗೇಟ್ ಬಳಿಯ ಹೋಟೆಲ್ ವೊಂದರಲ್ಲಿ ಸ್ಫೋಟಕಗಳು ಪತ್ತೆಯಾಗಿವೆ. ಅಪರಿಚಿತರು ನೀಲಿ ಬಣ್ಣದ ಪ್ಲಾಸ್ಟಿಕ್ ನಲ್ಲಿ ಸ್ಫೋಟಕ ವಸ್ತುಗಳನ್ನು ಇಟ್ಟು ಪರಾರಿಯಾಗಿದ್ದಾರೆ. ಈ ಸ್ಫೋಟಕ ವಸ್ತುಗಳನ್ನು ನೋಡಿದ ಹೋಟೆಲ್ ಸಿಬ್ಬಂದಿ ಕೂಡಲೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಬಾಂಬ್ ನಿಷ್ಕ್ರಿಯ ದಳದ ಸಿಬ್ಬಂದಿ ಪರಿಶೀಲನೆ ನಡೆಸಿ, ಸ್ಫೋಟಕಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಟ್ಯೂಬ್ ಆಕಾರದಲ್ಲಿರುವ 9 ಸ್ಫೋಟಕ ವಸ್ತುಗಳು ಮತ್ತು ಒಂದು ನಾಡ ಬಾಂಬ್ ಆಕಾರದ ವಸ್ತು ಪತ್ತೆಯಾಗಿದೆ.

ಕಲ್ಲು ಗಣಿಗಾರಿಕೆಗೆ ಮತ್ತು ಪ್ರಾಣಿಗಳ ಬೇಟೆಗೆ ಸ್ಫೋಟಕಗಳನ್ನು ಬಳಸಲು ತೆಗೆದುಕೊಂಡು ಹೋಗುತ್ತಿದ್ದರು ಎಂದು ಸಂಶಯ ವ್ಯಕ್ತವಾಗಿದೆ. ಪೊಲೀಸರು ಹಾಗೂ ಬಾಂಬ್ ನಿಷ್ಕ್ರಿಯ ದಳದವರು ಸ್ಫೋಟಕ ವಸ್ತುಗಳನ್ನು ವಶಕ್ಕೆ ಪಡೆದು, ಹೋಟೆಲ್ ಸಿಬ್ಬಂದಿಯಿಂದ ಮಾಹಿತಿ ಕಲೆ ಹಾಕಿದ್ದಾರೆ.

ಟಿ. ನರಸಿಪುರ ತಾಲೂಕಿನಲ್ಲಿ ಮಾನವ-ಪ್ರಾಣಿ ಸಂಘರ್ಷ ಆಗಾಗ ನಡೆಯುತ್ತಿರುತ್ತದೆ. ಚಿರತೆ, ಹುಲಿ ದಾಳಿಯಿಂದ ಅನೇಕರು ಗಾಯಗೊಂಡಿದ್ದರೆ, ಕೆಲವರ ಪ್ರಾಣ ಪಕ್ಷಿ ಹಾರಿಹೋಗಿದೆ. ಇನ್ನು ಕೆಲವರು ಸಾಕು ಪ್ರಾಣಿಗಳನ್ನು ಕಳೆದುಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರಾಣಿಗಳನ್ನು ಬೇಟೆಯಾಡಲು ಅಪರಿಚಿತರು ಸ್ಫೋಟಕಗಳನ್ನು ತೆಗೆದುಕೊಂಡು ಹೋಗುತ್ತಿದ್ದರು ಎಂಬ ಅನುಮಾನ ವ್ಯಕ್ತವಾಗಿದೆ.

ಕಳೆದ ವರ್ಷ ಮೈಸೂರು ದಸರಾ ಮೇಲೆ ಉಗ್ರರ ಕರಿ ನೆರಳು ಬಿದ್ದಿತ್ತು ಎಂಬ ಮಾಹಿತಿ ಗುಪ್ತಚರ ಇಲಾಖೆಗೆ ರವಾನೆಯಾಗಿತ್ತು. ಈ ಹಿನ್ನೆಲೆಯಲ್ಲಿ ಬಿಗಿ ಭದ್ರತೆ ಮಾಡಲಾಗಿತ್ತು. ಶಂಕಿತರನ್ನು ವಶಕ್ಕೆ ಪಡೆಯಲಾಗಿತ್ತು.

## ಸಂಕ್ಷಿಪ್ತ ಸುದ್ದಿ

### ಜಮೀನಿಗೆ ಮಾರುಕಟ್ಟೆ ದರ ಒಪ್ಪದೇ ಸೈಟ್ ಪಡೆದಿದ್ದ ಸಿಎಂ ಪತ್ನಿ

**ಮೈಸೂರು:** ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿಯವರಿಗೆ ಕಳೆದುಕೊಂಡ ಜಮೀನಿಗೆ ಮಾರುಕಟ್ಟೆ ದರ ನೀಡಲು ಮುಡಾ ಮುಂದಾಗಿತ್ತು. ಆದರೆ ಮುಡಾದ ಪ್ರಸ್ತಾಪವನ್ನು ಪಾರ್ವತಿ ಒಪ್ಪಿರಲಿಲ್ಲ ಎಂದು ತಿಳಿದುಬಂದಿದೆ. ಹೌದು, ಈ ವಿಚಾರವಾಗಿ ದೂರುದಾರ



ಸ್ನೇಹಮಯಿ ಕೃಷ್ಣ ಅವರು ದಾಖಲೆ ಬಿಡುಗಡೆ ಮಾಡಿದ್ದಾರೆ. 2014ರಲ್ಲಿ ಸಿಎಂ ಪತ್ನಿ ಪಾರ್ವತಿಯವರು ಮುಡಾಗೆ ಮನವಿ ಪತ್ರ ಬರೆದಿದ್ದರು. ನನ್ನ ಜಮೀನಿನಲ್ಲಿ ಮುಡಾ ನಿವೇಶನ ಮಾಡಿ ಹಂಚಿದೆ. ಇದಕ್ಕೆ ಪರಿಹಾರ ನೀಡುವಂತೆ ಪಾರ್ವತಿಯವರು ಮನವಿ ಮಾಡಿದ್ದಾರೆ.

ಪುಟ 2

### ಬೆಂಗಳೂರಿನಲ್ಲೊಂದು ವಿಲಕ್ಷಣ ಕೊಲೆ

**ಬೆಂಗಳೂರು:** ಬೆಂಗಳೂರಿನಲ್ಲಿ ಒಂದು ವಿಲಕ್ಷಣ ಕೊಲೆ ಪ್ರಕರಣ ನಡೆದಿದೆ. ಸಾವು ಸಂಭವಿಸಿದ ಮನೆಗೆ ಭೇಟಿ ನೀಡಿ ತೆರಳಿದ ವ್ಯಕ್ತಿಯನ್ನು ಮೃತ್ಯು ಹಿಂಬಾಲಿಸಿದೆ. ಅದರಲ್ಲೂ, ತನ್ನದೇ ಹೆಸರಿನ ಇನ್ನೊಬ್ಬ ವ್ಯಕ್ತಿಯಿಂದ ಆತ ಕೊಲೆ ಆಗಿದ್ದಾನೆ.



ಶರತ್ ಎಂಬಾತ ಸಾವನ್ನಪ್ಪಿದ ವ್ಯಕ್ತಿ. ಇನ್ನೊಬ್ಬ ಶರತ್ ಎಂಬ ಹೆಸರಿನ ಆಟೋ ಚಾಲಕನಿಂದಲೇ ಈ ಕೃತ್ಯ ನಡೆದಿದೆ. ಕಾಟನ್ ಪೇಟೆಯ ಅಂಜನಪ್ಪ ಗಾರ್ಡನ್‌ನಲ್ಲಿ ಕೊಲೆ ನಡೆದಿದೆ. ಅದೂ ವಿಚಿತ್ರ ಸಂದರ್ಭದಲ್ಲಿ. ಅಂಜನಪ್ಪ ಗಾರ್ಡನ್‌ನಲ್ಲಿ ಒಬ್ಬ ವ್ಯಕ್ತಿ ಮೃತಪಟ್ಟಿದ್ದು, ಅವರ ಶವದ ಅಂತಿಮ ದರ್ಶನ ಪಡೆಯಲು ಈ ಇಬ್ಬರೂ ಆಗಮಿಸಿದ್ದರು. ಮೃತ ಶರತ್, ಕೆ.ಪಿ ಅಗ್ರಹಾರ ಮಾರ್ಕಂಡೇಶ್ವರ ನಗರದ ನಿವಾಸಿ. ಈತ ನಿನ್ನೆ ಬೆಳಗ್ಗೆ ಅಂಜನಪ್ಪ ಗಾರ್ಡನ್‌ನಲ್ಲಿರುವ ತನ್ನ ಅಣ್ಣನ ಮನೆಗೆ ಬಂದಿದ್ದ. ಬೆಳಿಗ್ಗೆ 6:30ರ ಸುಮಾರಿಗೆ ಸಾವಿನ ಮನೆಯಿಂದ ವಾಪಸು ತೆರಳುವ ವೇಳೆ ಗಲಾಟೆ ಸೃಷ್ಟಿಯಾಗಿದೆ. ಈತ ಮೂರ್ನಾಲ್ಕು ಜನರೊಂದಿಗೆ ಜಗಳ ಮಾಡಿಕೊಂಡಿದ್ದಾನೆ. ಈ ವೇಳೆ ಆರೋಪಿಗಳು ಮಾರಕಾಸ್ತ್ರದಿಂದ ಶರತ್ ಮೇಲೆ ಹಲ್ಲೆ ಮಾಡಿದ್ದಾರೆ. ಈ ವೇಳೆ ಶರತ್‌ಗೆ ಮತ್ತೊರ್ವ ಶರತ್ ಎಂಬಾತ ಚಾಕುವಿನಿಂದ ಇರಿದಿದ್ದಾನೆ.

ಪುಟ 2

# ಮೋದಿ ಉತ್ತರಾಧಿಕಾರಿ ಯಾರು? ಅಮಿತ್ ಶಾ, ಗಡ್ಕರಿ, ಯೋಗಿ..
# ಯಾರಿಗೆ ಹೆಚ್ಚು ಜನರ ಒಲವು?



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರ ಉತ್ತರಾಧಿಕಾರಿ ಯಾರು? ಬಿಜೆಪಿ ಪಾಳೆಯದ ಈ ಪ್ರಶ್ನೆಗೆ ಸದ್ಯ ಕಮಲ ನಾಯಕರಲ್ಲಿ ಉತ್ತರ ಇಲ್ಲ. ಅಮಿತ್ ಶಾ, ಯೋಗಿ ಆದಿತ್ಯನಾಥ್ ಹೆಸರು ಮುಂಚೂಣಿಯಲ್ಲಿರುವುದು ಎಲ್ಲರಿಗೂ ತಿಳಿದಿರುವ ವಿಚಾರ. ಈ ನಿಟ್ಟಿನಲ್ಲಿ ವಾಹಿನಿಯೊಂದು ಸಮೀಕ್ಷೆ ನಡೆಸಿ ಉತ್ತರ ಕಂಡುಕೊಳ್ಳುವ ಕೆಲಸ ಮಾಡಿದೆ.

ಇಂಡಿಯಾ ಟುಡೇ ಟುಡೇ 543 ಲೋಕಸಭಾ ಕ್ಷೇತ್ರಗಳಲ್ಲಿ 40,591 ಜನರನ್ನು ಸಂದರ್ಶಿಸಿ ಮೂಡ್ ಆಫ್ ನೇಷನ್ ಸಮೀಕ್ಷೆ ಕೈಗೊಂಡಿದೆ. ಸದ್ಯ ಮೋದಿ ಕ್ಯಾಬಿನೆಟ್‌ನಲ್ಲಿ ನಂಬರ್ 2 ಆಗಿರುವ ಗೃಹ ಸಚಿವ ಅಮಿತ್ ಶಾ ಅವರು ಉತ್ತರಾಧಿಕಾರಿಯಾಗಲು ಸೂಕ್ತ ವ್ಯಕ್ತಿ ಎಂದು ಹೆಚ್ಚಿನ ಜನ ಅಭಿಪ್ರಾಯಪಟ್ಟಿದ್ದಾರೆ.

ಎರಡನೇ ಸ್ಥಾನದಲ್ಲಿ ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಇದ್ದರೆ, ಮೂರನೇ ಸ್ಥಾನದಲ್ಲಿ ಭೂ ಮತ್ತು ರಸ್ತೆ ಸಾರಿಗೆ ಸಚಿವ ನಿತಿನ್ ಗಡ್ಕರಿ ಇದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅನುಕ್ರಮವಾಗಿ ನಾಲ್ಕು ಮತ್ತು ಐದನೇ ಸ್ಥಾನ ಪಡೆದಿದ್ದಾರೆ.

**ಯಾರಿಗೆ ಎಷ್ಟು ಒಲವು?:** ಅಮಿತ್ ಶಾ 25%, ಯೋಗಿ ಆದಿತ್ಯನಾಥ್ 19%, ಗಡ್ಕರಿ 13% ಜನ ಬೆಂಬಲಿಸಿದ್ದಾರೆ. ರಾಜನಾಥ್ ಸಿಂಗ್ ಮತ್ತು ಶಿವರಾಜ್ ಚೌಹಾಣ್ ಅವರಿಗೆ 5% ಜನ ಬೆಂಬಲ ನೀಡಿದ್ದಾರೆ.

ಪ್ರಧಾನಿ ಮೋದಿ ಅವರಿಗೆ ಮುಂದಿನ ಸೆಪ್ಟೆಂಬರ್‌ನಲ್ಲೂ 75 ವರ್ಷ ತುಂಬುತ್ತದೆ. 75 ವರ್ಷ ಮೀರಿದವರು ಅಧಿಕಾರದಲ್ಲಿ ಇರಬಾರದು. ಅವರು ಕಿರಿಯರಿಗೆ ಅವಕಾಶ ನೀಡಬೇಕು. 75 ವರ್ಷ ಮೀರಿದವರಿಗೆ ಟಿಕೆಟ್ ನೀಡುವುದಿಲ್ಲ ಎಂಬ ಮಾನದಂಡವನ್ನು ಬಿಜೆಪಿ ಹಿಂದೆ ಹಾಕಿಕೊಂಡಿತ್ತು. ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಈ ಮಾನದಂಡ ವಿಫಲವಾದ ಬೆನ್ನಲ್ಲೇ ನಂತರದ ಚುನಾವಣೆಯಲ್ಲಿ ಬಿಜೆಪಿಯ ಟಿಕೆಟ್ ಹಂಚಿಕೆಗೆ ಈ ನಿಯಮಗಳು ಅನ್ವಯವಾಗಲಿಲ್ಲ.

ಪುಟ 2

### ಜಲಮಂಡಳಿಯಲ್ಲಿ ರಾತ್ರೋರಾತ್ರಿ 200ಕ್ಕೂ ಹೆಚ್ಚು ಮಂದಿಯ ವರ್ಗಾವಣೆ
# ಒಬ್ಬೊಬ್ಬರಿಗೆ ಎರಡೆರಡು ಪೋಸ್ಟಿಂಗ್!

**ಬೆಂಗಳೂರು:** ಬೆಂಗಳೂರು ಜಲಮಂಡಳಿಯಲ್ಲಿ ಒಂದೇ ದಿನ 200 ಕ್ಕೂ ಹೆಚ್ಚು ಮಂದಿಯನ್ನು ವರ್ಗಾವಣೆ ಮಾಡಲಾಗಿದ್ದು, ಹಲವರಿಗೆ ಮುಂಬಡ್ತಿ ನೀಡಲಾಗಿದೆ. ಕೆಲವರಿಗೆ ಡಬಲ್ ಪೋಸ್ಟಿಂಗ್ ಕೊಟ್ಟು ಯಡವಟ್ಟು ಮಾಡಲಾಗಿದೆ. ಬೆಂಗಳೂರು ಉಸ್ತುವಾರಿ ಸಚಿವರ ಗಮನಕ್ಕೂ ತರದೇ ಈ ವರ್ಗಾವಣೆ ನಡೆದಿದೆ. ಹೀಗಾಗಿ, ಇದರ ಹಿಂದೆ ಲಕ್ಷ ಲಕ್ಷ ಡೀಲಿಂಗ್ ನಡೆದಿದೆಯಾ ಎಂಬ ಅನುಮಾನವೂ ವ್ಯಕ್ತವಾಗಿದೆ.

ಪುಟ 2




# ಇಸ್ರೋದ ವಿಜ್ಞಾನಿ, ಇಂಜಿನಿಯರ್ಸ್‌ಗೆ ಶುಭಕೋರಿದ ಕುಮಾರಸ್ವಾಮಿ

**ಬೆಂಗಳೂರು:** ದೇಶಾದ್ಯಂತ ಶುಕ್ರವಾರ ರಾಷ್ಟ್ರೀಯ ಬಾಹ್ಯಾಕಾಶ ದಿನಾಚಾರಣೆ ಆಚರಿಸಲಾಗುತ್ತಿದೆ. ಕಳೆದ ವರ್ಷ ಆಗಸ್ಟ್ 23ರಂದು ಭಾರತ ಮಹತ್ವಾಕಾಂಕ್ಷಿ ಚಂದ್ರಯಾನ-3 ಯೋಜನೆಯ ವಿಕ್ರಂ ಲ್ಯಾಂಡರ್ ಅನ್ನು ಚಂದ್ರನ ದಕ್ಷಿಣ ಧ್ರುವದಲ್ಲಿನ ''ಶಿವ ಶಕ್ತಿ'' ಬಿಂದುವಿನಲ್ಲಿ ಇಳಿದ ದಿನವನ್ನು ಸ್ಮರಿಸಲೆಂದು ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಆಚರಿಸಲಾಗುತ್ತಿದೆ. ಬ್ಯಾಹಾಕಾಶ ಕ್ಷೇತ್ರದಲ್ಲಿ ಭಾರತದ ಹೆಸರನ್ನು ಅಜರಾಮರವಾಗಿಸಲು ಹಗಲಿರುಳು ಶ್ರಮಿಸುತ್ತಿರಿವ ಇಸ್ರೋದ ವಿಜ್ಞಾನಿಗಳಿಗೆ ಮತ್ತು ಅಭಿಯಂತ್ರರಿಗೆ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರು ಶುಭಾಶಯ ತಿಳಿಸಿದ್ದಾರೆ.



ಮೊದಲ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆಯಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿ, ಪ್ರಧಾನಿ ನರೇಂದ್ರ ಮೋದಿಯವರಕರೆ ಮೇರೆಗೆ ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಆಚರಿಸಲಾಗುತ್ತಿದೆ. ಚಂದ್ರಯಾನ-3 ಯೋಜನೆಯ ವಿಕ್ರಂ ಲ್ಯಾಂಡರ್ ಅನ್ನು ಚಂದ್ರನ ದಕ್ಷಿಣ ಧ್ರುವದಲ್ಲಿನ ಯಶಸ್ವಿಯಾಗಿ ಇಳಿಸಿದ ನೆನಪಿಗಾಗಿ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಆಚರಿಸಲಾಗುತ್ತಿದೆ. ಈ ಮೂಲಕ ಭಾರತ ಬಾಹ್ಯಾಕಾಶ ಕ್ಷೇತ್ರದಲ್ಲಿ ಬಹುದೊಡ್ಡ ಸಾಧನೆ ಮಾಡಿದ್ದು, ನಾಯಕನಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಪುಟ 2

### ಪ್ರಧಾನಿ ಮೋದಿ, ಸಿದ್ದರಾಮಯ್ಯ ಕುರ್ಚಿಗೆ ಕಂಟಕ
# ಮಹಾದೇವಪ್ಪ ಪೂಜಾರಿ ಭವಿಷ್ಯ

**ಬೆಂಗಳೂರು:** ಕೇಂದ್ರದ ಎನ್ ಡಿಎ ಸರ್ಕಾರವೂ ಪತನವಾಗಲಿದೆ. ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಕೂಡ ಮುಖ್ಯಮಂತ್ರಿ ಸ್ಥಾನ ಕಳೆದುಕೊಳ್ಳಲಿದ್ದಾರೆ ಎಂದು ಯಾದಗಿರಿ ಜಿಲ್ಲೆಯ ವಡಗೇರ ತಾಲೂಕಿನ ಗೋನಾಲ ಗ್ರಾಮದ ಗಡೇ ದುರ್ಗಾದೇವಿ ದೇವಸ್ಥಾನದ ಅರ್ಚಕ ಮಹಾದೇವಪ್ಪ ಪೂಜಾರಿ ಭವಿಷ್ಯ ನುಡಿದಿದ್ದಾರೆ. ಇದು ಮುಡಾ ಹಗರಣದಿಂದ ಸಿಎಂ ಸಿದ್ದರಾಮಯ್ಯಗೆ ಕುರ್ಚಿ ಕಂಟಕ ಎದುರಾಗಲಿದೆಯೇ ಎಂಬ ಅನುಮಾನ ಹುಟ್ಟುಹಾಕಿದೆ.

ಕೆಪಿಸಿಸಿ ಅಧ್ಯಕ್ಷ, ಡಿಸಿಎಂ ಹಾಗೂ ಕಾಂಗ್ರೆಸ್‌ನ ಟ್ರಬಲ್ ಶೂಟರ್ ಎಂದೇ ಖ್ಯಾತರಾದ ಡಿಕೆ ಶಿವಕುಮಾರ್ ಮುಂದಿನ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಪೂಜಾರಿ ಭವಿಷ್ಯವಾಣಿ ನುಡಿದಿದ್ದಾರೆ.

ಈ ಹಿಂದೆ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ



ಬರಲಿದೆ ಎಂದು ಮಹಾದೇವಪ್ಪ ಪೂಜಾರಿ ಭವಿಷ್ಯ ನುಡಿದಿದ್ದರು. ಅದು ನಿಜವಾಗಿತ್ತು.

ಅಮ್ಮ (ದೇವಿ) ಕನಸಿನಲ್ಲಿ ಬಂದು 9 ಜನ ಸಿಎಂ ಸ್ಥಾನದ ಆಕಾಂಕ್ಷಿ ಎಂದು ಹೇಳಿದ್ದಳು. ಕೊನೆಗೆ ಇಬ್ಬರಿಗೆ ಸಿಎಂ ಸ್ಥಾನ ನೀಡಲು ಪ್ರೇರಣೆ ನೀಡಿದಳು. ಆಗ ನಾನು ಡಿಕೆ ಶಿವಕುಮಾರ್‌ಗೆ ಹೂವಿನ ಹಾರ ಹಾಕು ಅಂದೆ. ಆದರೆ ಸಿದ್ದರಾಮಯ್ಯಗೆ ಹೂವಿನ ಹಾರ ಹಾಕಿದ್ದಳು.

ಪುಟ 2

# ಭಾರತ ಸೇರಿ 35 ರಾಷ್ಟ್ರಗಳಿಗೆ ವೀಸಾ ಮುಕ್ತ ಪ್ರವೇಶ ಘೋಷಿಸಿದ ಶ್ರೀಲಂಕಾ

**ನವದೆಹಲಿ:** ಭಾರತೀಯರಿಗೆ ಸಿಹಿಸುದ್ದಿ ಇನ್ನುಮುಂದೆ ಭಾರತೀಯರು ಶ್ರೀಲಂಕಾಗೆ ವೀಸಾವಿಲ್ಲದೆ ಪ್ರಯಾಣಿಸಬಹುದಾಗಿದೆ. ಈ ಉಚಿತ ವೀಸಾಗಳು ಅಕ್ಟೋಬರ್ 1 ರಿಂದ ಲಭ್ಯವಿರುತ್ತವೆ. ಭಾರತವಲ್ಲದೆ, ಯುನೈಟೆಡ್ ಸ್ಟೇಟ್ಸ್, ಯುನೈಟೆಡ್ ಕಿಂಗ್‌ಡಮ್, ನೇಪಾಳ, ಇಂಡೋನೇಷ್ಯಾ, ಮಲೇಷ್ಯಾ, ಥೈಲ್ಯಾಂಡ್, ಚೀನಾ, ಇಸ್ರೇಲ್, ನ್ಯೂಜಿಲೆಂಡ್, ಆಸ್ಟ್ರೇಲಿಯಾ ಮತ್ತು ಜಪಾನ್ ಸೇರಿದಂತೆ ಪ್ರಮುಖ ದೇಶಗಳು ಪಟ್ಟಿಯಲ್ಲಿವೆ.

ಕೋವಿಡ್ ಪೂರ್ವ ಪ್ರವಾಸೋದ್ಯಮವು 2018 ರಲ್ಲಿ 2,333,796 ಮತ್ತು 2019 ರಲ್ಲಿ 1,913,702 ರಷ್ಟಿತ್ತು, ಇದು ಸಾಂಕ್ರಾಮಿಕ ವರ್ಷಗಳಲ್ಲಿ ಕುಸಿಯಿತು. ಶ್ರೀಲಂಕಾದಲ್ಲಿ ಪ್ರವಾಸೋದ್ಯಮವು 2023 ರಲ್ಲಿ 1,487,303 ಮತ್ತು 2024 ರಲ್ಲಿ 1,315,884ಕ್ಕೆ ಪುನರುಜ್ಜೀವನಗೊಂಡಿದೆ ಎಂದು ಇತ್ತೀಚಿನ ಡೇಟಾ ತೋರಿಸುತ್ತದೆ.




ಇದನ್ನು 6 ತಿಂಗಳ ಕಾಲ ಅನುಷ್ಠಾನಗೊಳಿಸಲಾಗುತ್ತಿದೆ. ಈ ಬದಲಾವಣೆಯನ್ನು ಶ್ರೀಲಂಕಾ ಸರ್ಕಾರದ ಕ್ಯಾಬಿನೆಟ್ ಅನುಮೋದಿಸಿದೆ. ಅಕ್ಟೋಬರ್ 1 ರಿಂದ 35 ದೇಶಗಳ ಪ್ರಯಾಣಿಕರಿಗೆ ಶ್ರೀಲಂಕಾಕ್ಕೆ ಪ್ರಯಾಣಿಸಲು ವೀಸಾ ಅಗತ್ಯವಿಲ್ಲ ಎಂದು ಶ್ರೀಲಂಕಾ ಪ್ರವಾಸೋದ್ಯಮ ಸಚಿವ ಹರಿನ್ ಫರ್ನಾಂಡೋ ಹೇಳಿದ್ದಾರೆಂದು ವರದಿ ಉಲ್ಲೇಖಿಸಲಾಗಿದೆ. ಭಾರತ, ಅಮೆರಿಕ ಮತ್ತು ಬ್ರಿಟನ್ ಹೊರತುಪಡಿಸಿ, ಚೀನಾ, ಜರ್ಮನಿ, ನೆದರ್‌ಲೆಂಡ್, ಬೆಲ್ಜಿಯಂ, ಸ್ಪೇನ್, ಆಸ್ಟ್ರೇಲಿಯಾ, ಡೆನ್ಮಾರ್ಕ್, ಪೋಲೆಂಡ್, ಕಝಕಿಸ್ತಾನ್, ಸೌದಿ ಅರೇಬಿಯಾ, ಯುನೈಟೆಡ್ ಅರಬ್ ಎಮಿರೇಟ್ಸ್, ನೇಪಾಳ, ಈ ಸೌಲಭ್ಯದ ಪ್ರಯೋಜನವನ್ನು ಪಡೆಯುವ ದೇಶಗಳು ಸೇರಿವೆ. ಇಂಡೋನೇಷ್ಯಾ, ರಷ್ಯಾ ಮತ್ತು ಥೈಲ್ಯಾಂಡ್ ಹೆಸರುಗಳನ್ನು ಸೇರಿಸಲಾಗಿದೆ.

**ಈ ದೇಶಗಳ ಪಾಸ್‌ಪೋರ್ಟ್ ಹೊಂದಿರುವವರಿಗೂ ಸೌಲಭ್ಯ:** ಮಲೇಷ್ಯಾ, ಜಪಾನ್, ಫ್ರಾನ್ಸ್, ಕೆನಡಾ, ಜೆಕ್ ರಿಪಬ್ಲಿಕ್, ಇಟಲಿ, ಸ್ವಿಟ್ಜರ್ಲೆಂಡ್, ಆಸ್ಟ್ರಿಯಾ, ಇಸ್ರೇಲ್, ಬೆಲಾರಸ್, ಇರಾನ್, ಸ್ವೀಡನ್, ದಕ್ಷಿಣ ಕೊರಿಯಾ, ಕತಾರ್, ಓಮನ್, ಬಹ್ರೇನ್ ಮತ್ತು ನ್ಯೂಜಿಲೆಂಡ್‌ನಂತಹ ದೇಶಗಳ ಪಾಸ್‌ಪೋರ್ಟ್ ಹೊಂದಿರುವವರು ಸಹ 6 ತಿಂಗಳ ವೀಸಾಕ್ಕೆ ಅರ್ಹರಾಗಿರುತ್ತಾರೆ.

ಪುಟ 2

# ವಂದೇ ಭಾರತ್ ರೈಲು ತುಮಕೂರಲ್ಲೂ ನಿಲ್ಲುತ್ತೆ

**ತುಮಕೂರು:** ನೈಋತ್ಯ ರೈಲ್ವೆ ವಲಯ ತಮಕೂರು ಜನರಿಗೆ ಸಿಹಿ ಸುದ್ದಿ ನೀಡಿದೆ. ಕೆಎಸ್ ಆರ್ ಬೆಂಗಳೂರುನಿಂದ ಧಾರವಾಡ ಮಧ್ಯೆ ಸಂಚರಿಸುವ ವಂದೇ ಭಾರತ್ ರೈಲು ಇಂದಿನಿಂದ ತಮಕೂರು ನಿಲ್ದಾಣದಲ್ಲೂ ನಿಲುಗಡೆಯಾಗುತ್ತದೆ. ಈ ಕುರಿತು ಟ್ವೀಟ್ ಮಾಡಿರುವ ನೈಋತ್ಯ ರೈಲ್ವೆ ವಲಯ, ವಂದೇ ಭಾರತ್ ತುಮಕೂರು ರೈಲು ನಿಲ್ದಾಣದಲ್ಲಿ ನಿಲುಗಡೆಯಾಗಲಿದೆ. ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ ಸೋಮಣ್ಣ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದೆ.

ವಂದೇ ಭಾರತ್ ರೈಲು ತುಮಕೂರಿನಲ್ಲಿ ಇಂದು ಸಂಜೆ 6.18ಕ್ಕೆ ಮೊದಲ ಸ್ಟಾಪ್ ನೀಡಲಿದೆ. ಆ ಬಳಿಕ ಆಗಸ್ಟ್ 24 ರಿಂದ ಧಾರವಾಡಕ್ಕೆ ತೆರಳುವಾಗ ಹಾಗೂ ಧಾರವಾಡದಿಂದ ಹಿಂದಿರುಗುವಾಗ ಬೆಳಗ್ಗೆ ಹಾಗೂ ಸಂಜೆ ನಿಲುಗಡೆಯಾಗಲಿದೆ.



**ರೈಲಿನ ವೇಳಾಪಟ್ಟಿ:** ರೈಲು ಸಂಖ್ಯೆ 20662 ಧಾರವಾಡ-ಕೆ.ಎಸ್.ಆರ್ ಬೆಂಗಳೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ತುಮಕೂರು ನಿಲ್ದಾಣಕ್ಕೆ ಸಂಜೆ 6.18/6.20 ಘಂಟೆಗೆ ಆಗಮಿಸಿ/ನಿರ್ಗಮಿಸಲಿದೆ.

ರೈಲು ಸಂಖ್ಯೆ 20661 ಕೆ.ಎಸ್. ಆರ್ ಬೆಂಗಳೂರು-ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ತುಮಕೂರು ನಿಲ್ದಾಣಕ್ಕೆ ಬೆಳಿಗ್ಗೆ 6:32/6:34 ಘಂಟೆಗೆ ಆಗಮಿಸಿ/ ನಿರ್ಗಮಿಸಲಿದೆ. ಉಳಿದಂತೆ ಎಲ್ಲಾ ನಿಲ್ದಾಣಗಳ ಸಮಯ ಈ ಹಿಂದಿನಂತೆ ಇರಲಿದೆ.

### ತಿರುಮಲದಲ್ಲಿ ತಿಮ್ಮಪ್ಪನ ವಿಶೇಷ ದರ್ಶನ ಕ್ಯಾನ್ಸಲ್
# ಟಿಟಿಡಿ ನಿರ್ಧಾರ!

**ತಿರುಮಲ:** ಆಂಧ್ರ ರಾಜ್ಯದಲ್ಲಿ ನವ ಸರ್ಕಾರ ಬಂದು ತಿರುಮಲ ತಿರುಪತಿ ದೇವಸ್ಥಾನ ಆಡಳಿತ ಮಂಡಳಿಯ (ಟಿಟಿಡಿ) ಚುಕ್ಕಾಣಿ ಹಿಡಿದಿರುವ ಸಿಇಒ ಶ್ಯಾಮಲಾ ರಾವ್ ಅವರು ತಿರುಮಲ ತಿರುಪತಿ ದೇವಸ್ಥಾನದ ದೈನಂದಿನ ವ್ಯವಹಾರಗಳಲ್ಲಿ ತಮ್ಮ ಛಾಪು ತೋರಿಸುತ್ತಿದ್ದಾರೆ. ಸಿಎಂ ಆದೇಶದ ಮೇರೆಗೆ ತಿರುಮಲ ಬೆಟ್ಟದಲ್ಲಿ ತಿಮ್ಮಪ್ಪನ ಸೇವೆಯನ್ನು ಸುಗಮಗೊಳಿಸಿ, ಭಕ್ತರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಅವರು ನಿರಂತರವಾಗಿ ಪರಿಶೀಲನೆ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ.



## ಪತ್ನಿ ಪತ್ರ ಬರೆದಿದ್ರೂ ಬರೆದಿಲ್ಲ ಎಂದು ಸಿಎಂ ಸುಳ್ಳು ಹೇಳಿದ್ರಾ?



**ಮೈಸೂರು:** ಸಿಎಂ ಸಿದ್ದರಾಮಯ್ಯನವರು ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸುಳ್ಳು ಹೇಳಿದ್ರಾ ಎಂಬ ಗಂಭೀರವಾದ ಪ್ರಶ್ನೆ ಎದ್ದಿದೆ. ಬುಧವಾರ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರು ಮುಡಾಕ್ಕೆ ಬರೆದ ಪತ್ರಗಳು ಮಾಧ್ಯಮಗಳಿಗೆ ಲಭ್ಯವಾಗಿದ್ದವು. ಈ ಪತ್ರ ಬೆಳಕಿಗೆ ಬಂದ ಬೆನ್ನಲ್ಲೇ ಮಾಧ್ಯಮಗಳು ಪ್ರಶ್ನೆ ಕೇಳಿದ್ದಕ್ಕೆ ಸಿದ್ದರಾಮಯ್ಯ, ನನ್ನ ಪತ್ನಿ ಯಾವುದೇ ಪತ್ರ ಬರೆದಿಲ್ಲ ಎಂದು ಬಹಿರಂಗವಾಗಿಯೇ ಹೇಳಿಕೆ ನೀಡಿದ್ದರು. ಆದರೆ ಪಾರ್ವತಿ ಅವರು ಪತ್ರ ಬರೆದ ಬಗ್ಗೆ ಸಿಎಂ ಸಿದ್ದರಾಮಯ್ಯನವರೇ ಉಲ್ಲೇಖ ಮಾಡಿರುವ ವಿಚಾರ ಈಗ ಬೆಳಕಿಗೆ ಬಂದಿದೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ಸಿದ್ದರಾಮಯ್ಯನವರಿಗೆ ಶೋಕಾಸ್ ನೋಟಿಸ್ ನೀಡಿದ್ದರು. ಈ ನೋಟಿಸ್‌ಗೆ ಸಿದ್ದರಾಮಯ್ಯನವರು ಉತ್ತರ ನೀಡಿದ್ದರು. ಈ ಉತ್ತರದಲ್ಲಿ ಪತ್ನಿ ಪಾರ್ವತಿ ಅವರು ಮುಡಾಗೆ ಬರೆದ ಪತ್ರದ ಬಗ್ಗೆ ಉಲ್ಲೇಖ ಮಾಡಿದ್ದಾರೆ. 30ನೇ ಖಂಡಿಕೆ 15ನೇ ಅನೆಕ್ಸರ್ ನಲ್ಲಿ ತಮ್ಮ ಪತ್ನಿ ಮುಡಾಗೆ ಪತ್ರ ಬರೆದಿರುವ ಬಗ್ಗೆ ಮಾಹಿತಿ ನೀಡಿದ್ದಾರೆ.

## 300 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿದ ಸಿಐಡಿ ಅಧಿಕಾರಿಗಳು

**ಶಿವಮೊಗ್ಗ:** ವಾಲ್ಮೀಕಿ ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಪ್ರಕರಣ ಸಂಬಂಧ ಸಿಐಡಿ ಅಧಿಕಾರಿಗಳಿಂದ ಚಾರ್ಜ್‌ಶೀಟ್ ಸಲ್ಲಿಸಲಾಗಿದೆ. ಅಧಿಕಾರಿಗಳಾದ ಪದ್ಮನಾಭ, ಪರುಶುರಾಮ್ ಅವರು ಒತ್ತಡದಿಂದ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಉಲ್ಲೇಖಿಸಿ ಸಿಐಡಿ ಅಧಿಕಾರಿಗಳ ತಂಡ 300 ಪುಟಗಳ ಚಾರ್ಜ್‌ಶೀಟ್ ಅನ್ನು ಶಿವಮೊಗ್ಗ ಕೋರ್ಟ್‌ಗೆ ಸಲ್ಲಿಸಿದೆ. ಘಟನೆ ಸಂಬಂಧ ಶಿವಮೊಗ್ಗ ವಿನೋಭಾನಗರ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ಚಂದ್ರಶೇಖರ್ ಪತ್ನಿ ನೀಡಿದ್ದ ದೂರು ಆಧರಿಸಿ ಸಿಐಡಿ ತನಿಖೆ ನಡೆಸಿತ್ತು. ಡೆತ್‌ನೋಟ್ ಆಧರಿಸಿ ತನಿಖೆ ಮಾಡಿರುವ ಸಿಐಡಿ ಅಧಿಕಾರಿಗಳ ಟೀಂ ಇದೀಗ ಕೇವಲ ಪದ್ಮನಾಭ, ಪರುಶುರಾಮ್ ಆರೋಪಿಗಳಾಗಿ ಮಾಡಿ ಚಾರ್ಜ್‌ಶೀಟ್ ಸಲ್ಲಿಸಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಬ್ಯಾಂಕ್ ಖಾತೆಯಿಂದ 89.63 ಕೋಟಿ ಅಕ್ರಮ ವರ್ಗಾವಣೆ ಹಗರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ), ನಗರದ 3ನೇ ಎಸಿಎಂಎಂ ನ್ಯಾಯಾಲಯಕ್ಕೆ ಪ್ರಾಥಮಿಕ ಆರೋಪ ಪಟ್ಟಿಯನ್ನು ಸಲ್ಲಿಸಿದೆ. ಅದರಲ್ಲಿ ಮಾಜಿ ಸಚಿವ ಬಿ. ನಾಗೇಂದ್ರ ಮತ್ತು ನಿಗಮದ ಅಧ್ಯಕ್ಷ, ಕಾಂಗ್ರೆಸ್ ಶಾಸಕ ಬಸನಗೌಡ ದದ್ದಲ್ ಅವರ ಹೆಸರು ಇಲ್ಲ.



» ವಾಲ್ಮೀಕಿ ನಿಗಮದ ಅಧಿಕಾರಿ ಆತ್ಮಹತ್ಯೆ ಪ್ರಕರಣ

# 'ಡಿ' ಗ್ಯಾಂಗ್‌ನಲ್ಲಿ ಬಿರುಕು
# ಒಬ್ಬೊಬ್ಬರೇ ಜೈಲು ತೊರೆಯಲು ಪ್ಲ್ಯಾನ್

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಒಟ್ಟಿಗೆ ಜೈಲು ಸೇರಿದ್ದ ದರ್ಶನ್ ಗ್ಯಾಂಗ್‌ನಲ್ಲಿ ಬಿರುಕು ಮೂಡಿದೆ. ಗ್ಯಾಂಗ್‌ನ ಒಬ್ಬೊಬ್ಬರೇ ಸದಸ್ಯರು ದರ್ಶನ್ ಮಾತು ಕೇಳಿ ನಾವು ತಪ್ಪು ಮಾಡಿದ್ದೇವೆ ಎಂದು ಕಣ್ಣೀರು ಹಾಕ್ತಿದ್ದಾರಂತೆ. ದರ್ಶನ್‌ರನ್ನ ಇನ್ನೂ ನಂಬಿದ್ರೆ ತಮಗೆ ಪರ್ಮನೆಂಟ್ ಜೈಲೇ ಗತಿ ಎಂದು ಅರಿತು, ದರ್ಶನ್‌ಗೂ ಮೊದಲು ಒಬ್ಬೊಬ್ಬರೇ ಜಾಮೀನಿಗೆ ಅರ್ಜಿ ಸಲ್ಲಿಸುತ್ತಿದ್ದಾರೆ.

ಸದಾ ಒಗ್ಗಟ್ಟಿನ ಮಂತ್ರ ಜಪಿಸುತ್ತಿದ್ದ 'ಡಿ' ಗ್ಯಾಂಗ್, ಚಾರ್ಜ್‌ಶೀಟ್ ಸಲ್ಲಿಕೆ ಆಗುವವರೆಗೂ ಜಾಮೀನಿನ ಮೊರೆ ಹೋಗದಿರಲು ಯೋಚಿಸಿತ್ತು. ಆದರೆ ಈಗ ಒಬ್ಬೊಬ್ಬರೇ ಜಾಮೀನಿನ ಮೊರೆ ಹೋಗಿದ್ದಾರೆ. ಇಷ್ಟು ದಿನ ಸುಮ್ಮನಿದ್ದ ಪವಿತ್ರಾ ಗೌಡ ಈಗ ಏಕಾಏಕಿ ಜಾಮೀನಿಗೆ ಅರ್ಜಿ ಸಲ್ಲಿಸಿದ್ದಾಳೆ. ಪವಿತ್ರಾ ಗೌಡ ಜಾಮೀನಿಗೆ ಅರ್ಜಿ ಸಲ್ಲಿಸುತ್ತಿದ್ದಂತೆ ಇತರ ಸದಸ್ಯರೂ ಕೂಡ ಪವಿತ್ರಾಳ ಹಾದಿಯನ್ನೇ ಹಿಡಿದಿದ್ದಾರೆ. ಈ ನಡೆ ಭಾರೀ ಕುತೂಹಲಕ್ಕೆ ಕಾರಣವಾಗಿದೆ. ರೇಣುಕಾಸ್ವಾಮಿ ಹತ್ಯೆಯ ಆರೋಪವನ್ನು ಒಟ್ಟಿಗೆ ಹೊತ್ತು ಜೈಲಿಗೆ ಬಂದವರು, ಈಗ ಒಬ್ಬೊಬ್ಬರಾಗಿ ಜಾಮೀನು ಅರ್ಜಿ ಸಲ್ಲಿಸ್ತಾ ಇರೋದು ಹಲವು ಚರ್ಚೆಗಳಿಗೆ ಕಾರಣವಾಗಿದೆ. ಯಾರನ್ನು ನಂಬಿ ಈ ಕೃತ್ಯದಲ್ಲಿ ಭಾಗಿಯಾಗಿದ್ದರೋ, ಅವರ ಮೇಲೆ ನಂಬಿಕೆ ಕಳೆದುಕೊಂಡು ಈ ನಿರ್ಧಾರಕ್ಕೆ ಬಂದಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ.



ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿರುವ 17 ಆರೋಪಿಗಳಲ್ಲಿ ಯಾರದ್ದು ಯಾವ ಪಾತ್ರ ಎಂದು ಇನ್ನಷ್ಟೇ ತಿಳಿಯಬೇಕಿದೆ. 17 ಜನರ ಪೈಕಿ ಹೆಚ್ಚಿನ ಸಂಖ್ಯೆ ಆರೋಪಿಗಳು ದರ್ಶನ್ ಕಾರಣಕ್ಕೆ ಅದರಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳಲಾಗ್ತಿದೆ. ಇನ್ನೂ ಆರೋಪಿಗಳಿಗೂ ದರ್ಶನ್‌ಗೂ ಸಂಬಂಧವೇ ಇಲ್ಲ ಎನ್ನುವ ಮಾತೂ ಇದೆ. ಹಣಕ್ಕಾಗಿಯೋ ಅಥವಾ ಅಭಿಮಾನಕ್ಕಾಗಿ ಆರೋಪ ಹೊತ್ತು ಜೈಲಿಗೆ ಹೋದವರು ಈಗ ಪಶ್ಚಾತ್ತಾಪದ ಮಾತುಗಳನ್ನು ಆಡುತ್ತಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ. ದರ್ಶನ್ ಮತ್ತು ಪವಿತ್ರಾ ತಮ್ಮ ಪಾಡಿಗೆ ತಾವು ಆರಾಮಾಗಿ ಇದ್ದಾರೆ ಎಂಬ ಕಾರಣಕ್ಕೆ ಗ್ಯಾಂಗ್‌ನ ಬಹುತೇಕರು ಸಿಟ್ಟು ಮಾಡಿಕೊಂಡಿದ್ದಾರೆ. ಇದೇ ಕಾರಣಕ್ಕೆ ಅವರ ಹಾದಿ ಅವರಿಗೆ, ತಮ್ಮ ಹಾದಿ ತಮಗೆ ಎಂಬ ನಿರ್ಧಾರಕ್ಕೆ ಬಂದಿದ್ದಾರೆ ಎಂದು ಹೇಳಲಾಗುತ್ತಿದೆ.

ಪ್ರಕರಣದಲ್ಲಿ ಬಹುತೇಕರು ಬಡವರು, ದರ್ಶನ್ ಕುಟುಂಬ ತಮ್ಮ ಸಹಾಯಕ್ಕೆ ನಿಲ್ಲಲಿದೆ ಎಂದುಕೊಂಡವರಿಗೆ ಬಹುಶಃ ನಿರಾಸೆ ಆಗಿರಬಹುದು. ಹಾಗಾಗಿ ತಮ್ಮ ದಾರಿಯನ್ನು ತಾವು ನೋಡಿಕೊಂಡಿದ್ದಾರೆ. ಯಾರನ್ನೋ ನಂಬಿ ಜೈಲಲ್ಲಿ ಕೊಳೆಯೋದು ಬೇಡ ಎಂದು ನಿರ್ಧಾರ ಮಾಡಿ ಜಾಮೀನು ಅರ್ಜಿ ಸಲ್ಲಿಸಿದ್ದಾರೆ. ಪವಿತ್ರಾ ಗೌಡ ಜಾಮೀನು ಅರ್ಜಿ ಸಲ್ಲಿಸಿದ ಬೆನ್ನಲ್ಲೇ ಅನುಕುಮಾರ್ ಕೂಡ ಅರ್ಜಿ ಸಲ್ಲಿಸಿದ್ದಾನೆ. ಈ ಅರ್ಜಿಗಳು ಇಂದು ಕೋರ್ಟ್ ಮುಂದೆ ಬರಲಿವೆ. ಇದನ್ನು ನೋಡಿಕೊಂಡು ಮತ್ತೆ ಇಬ್ಬರು ಅರ್ಜಿ ಸಲ್ಲಿಸಲು ತಯಾರಿ ಮಾಡಿಕೊಳ್ಳುತ್ತಿದ್ದಾರೆ.

## ಕಿಡ್ನ್ಯಾಪ್ ಕೇಸ್: ರೇವಣ್ಣ, ಭವಾನಿ ಸೇರಿ 9 ಆರೋಪಿಗಳಿಗೆ ಸಮನ್ಸ್
## ಖುದ್ದು ಹಾಜರಿಗೆ ಸೂಚನೆ



**ಬೆಂಗಳೂರು:** ಮೈಸೂರು ಜಿಲ್ಲೆಯ ಕೆಆರ್ ನಗರ ಮಹಿಳೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್‌ಡಿ ರೇವಣ್ಣ ಮತ್ತು ಭವಾನಿ ರೇವಣ್ಣ ಸೇರಿ 9 ಆರೋಪಿಗಳಿಗೆ ಸಮನ್ಸ್ ಜಾರಿ ಮಾಡಲಾಗಿದೆ. ಆಗಸ್ಟ್ 28 ರಂದು ಖುದ್ದು ಹಾಜರಾಗುವಂತೆ ಬೆಂಗಳೂರಿನ 42ನೇ ಎಸಿಎಂಎಂ ಕೋರ್ಟ್‌ನಿಂದ ಸಮನ್ಸ್ ಜಾರಿ ಮಾಡಲಾಗಿದೆ.

ಸತೀಶ್ ಬಾಬು, ಮನುಗೌಡ, ಕೆ.ಎ.ರಾಜಗೋಪಾಲ್, ಹೆಚ್.ಕೆ.ಸುಜಯ್, ಹೆಚ್.ಎನ್.ಮಧು, ಎಸ್.ಟಿ.ಕೀರ್ತಿ ಮತ್ತು ಅಜಿತ್ ಕುಮಾರ್‌ಗೆ ಐಪಿಸಿ ಸೆಕ್ಷನ್ 364 ಎ ಕೈಬಿಟ್ಟು ಉಳಿದ ಆರೋಪಗಳಿಗೆ ಸಂಬಂಧಿಸಿದಂತೆ ಸಮನ್ಸ್ ನೀಡಲಾಗಿದೆ.

ಆರೋಪಿ ಭವಾನಿ ರೇವಣ್ಣಗೆ ಹೈಕೋರ್ಟ್ ನೀಡಿದ್ದ ನಿರೀಕ್ಷಣಾ ಜಾಮೀನನ್ನು ಪ್ರಶ್ನಿಸಿ ಎಸ್‌ಐಟಿ ಅಧಿಕಾರಿಗಳು, ಸುಪ್ರೀಂಕೋರ್ಟ್‌ಗೆ ಇತ್ತೀಚೆಗೆ ಮೇಲ್ಮನವಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ್ದ ಸುಪ್ರೀಂಕೋರ್ಟ್‌ನ ದ್ವಿಸದಸ್ಯ ಪೀಠ ಭವಾನಿ ರೇವಣ್ಣಾಗೆ ನೋಟೀಸ್ ಜಾರಿ ಮಾಡಿದ್ದರು. ಅರ್ಜಿ ವಿಚಾರಣೆಯನ್ನು ಮುಂದೂಡಲಾಗಿದೆ.

ಭವಾನಿ ರೇವಣ್ಣ ನಿರೀಕ್ಷಣಾ ಜಾಮೀನು ಅರ್ಜಿ ಪ್ರಶ್ನಿಸಿ ಎಸ್‌ಐಟಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ್ದ ಸುಪ್ರೀಂ ಕೋರ್ಟ್ ವಿಚಾರಣೆ ಎದುರಿಸಬೇಕು ಎಂದು ಹೇಳಿತ್ತು. ಮಗನ ಮೇಲೆ ಗಂಭೀರವಾದ ಆರೋಪಗಳಿವೆ, ಮಗ ಮಾಡಿದ ತಪ್ಪಿಗೆ ತಾಯಿಯ ಪಾತ್ರವೇನು ಅಂತಾ ಎಸ್‌ಐಟಿ ಪರ ವಕೀಲ ಕಪಿಲ್ ಸಿಬಲ್‌ಗೆ ನ್ಯಾಯಪೀಠ ಪ್ರಶ್ನೆ ಮಾಡಿದ್ದರು.ನ್ಯಾಯಮೂರ್ತಿಗಳ ಪ್ರಶ್ನೆಗೆ ಉತ್ತರಿಸಿದ ಕಪಿಲ್ ಸಿಬಲ್ ಸಂತ್ರಸ್ತೆಯನ್ನ ಕಿಡ್ನ್ಯಾಪ್ ಮಾಡಿದ ಆರೋಪ ಭವಾನಿ ಮೇಲಿದೆ ಎಂದು ವಾದಿಸಿದ್ದರು. ವಾದ ಆಲಿಸಿದ ನ್ಯಾಯಮೂರ್ತಿಗಳು ಆಕೆ ಆರೋಪದಿಂದ ಮುಕ್ತ ಎನ್ನುವಂತಿಲ್ಲ. ವಿಚಾರಣೆ ಎದುರಿಸಬೇಕು ಎಂದ ಕೋರ್ಟ್, ಭವಾನಿಗೆ ನೋಟಿಸ್ ಜಾರಿ ಮಾಡಿತ್ತು. ಇನ್ನು ಕಿಡ್ನ್ಯಾಪ್ ಕೇಸ್‌ನಲ್ಲಿ ಭವಾನಿ ರೇವಣ್ಣರ ಕಾರು ಚಾಲಕ ಅಜಿತ್‌ನನ್ನು ಎಸ್‌ಐಟಿ ಅಧಿಕಾರಿಗಳು ಬಂಧಿಸಿದ್ದಾರೆ. ಆತನ ವಿರುದ್ಧ ಸಂತ್ರಸ್ತೆ ವಿಡಿಯೋ ರೆಕಾರ್ಡ್ ಮಾಡಿ ವೈರಲ್ ಮಾಡಿರುವ ಆರೋಪವಿದೆ. ಭವಾನಿ ಸೂಚನೆ ಮೇರೆಗೆ ಮನೆಯಿಂದ ಕಾರಿನಲ್ಲಿ ಸಂತ್ರಸ್ತೆಯನ್ನು ಕರೆದೊಯ್ದ ಆರೋಪ ಕೂಡ ಇದೆ.

## ಬೆಳಗಾವಿ ಎಸಿ ಕಚೇರಿಯನ್ನೇ ಜಪ್ತಿ ಮಾಡಿ ವಸ್ತುಗಳನ್ನು ಹೊತ್ತೊಯ್ದ ರೈತರು!



**ಬೆಳಗಾವಿ:** ಪರಿಹಾರ ನೀಡಲು ವಿಳಂಬ ಮಾಡಿರುವ ಹಿನ್ನಲೆ ರೈತರು ಎಸಿ ಕಚೇರಿ ವಸ್ತುಗಳನ್ನು ಜಪ್ತಿ ಮಾಡಿರುವ ಘಟನೆ ಬೆಳಗಾವಿ ತಾಲೂಕಿನಲ್ಲಿ ನಡೆದಿದೆ.

ಡಿಸಿ ಕಚೇರಿ ಆವರಣದಲ್ಲಿರುವ ಉಪವಿಭಾಗಾಧಿಕಾರಿ ಕಚೇರಿಯಲ್ಲಿನ ಪೀಠೋಪಕರಣಗಳನ್ನು ಜಪ್ತಿ ಮಾಡಿದ್ದಾರೆ. ಕಂಪ್ಯೂಟರ್, ಕುರ್ಚಿಗಳು, ಪ್ರಿಂಟರ್ ಸೇರಿದಂತೆ ವಿವಿಧ ವಸ್ತುಗಳನ್ನು ರೈತರು ಹೊತ್ತೊಯ್ದಿದ್ದಾರೆ. 2008ರಲ್ಲಿ ಬೆಳಗಾವಿ ತಾಲೂಕಿನ ಸಾಂಬ್ರಾ ವಿಮಾನ ನಿಲ್ದಾಣ ವಿಸ್ತರಣೆ ಕಾಮಗಾರಿಗಾಗಿ ರೈತರು ತಮ್ಮ 270 ಎಕರೆ ಜಮೀನುಗಳನ್ನು ಕೊಟ್ಟಿದ್ದರು. ನ್ಯಾಯಾಲಯದ ಆದೇಶದ ಮೇರೆಗೆ ಜಮೀನುಗಳನ್ನು ಕೊಟ್ಟಿದ್ದ ರೈತರಿಗೆ ಪ್ರತಿ ಎಕರೆಗೆ ಕೇವಲ 2 ಲಕ್ಷ ರೂ. ಪರಿಹಾರ ನೀಡುವಂತೆ ಸರ್ಕಾರ ಆದೇಶಿಸಿತ್ತು.

2011ರಲ್ಲಿ ರೈತರು ಹೆಚ್ಚಿನ ಪರಿಹಾರ ಕೋರಿ ಕೋರ್ಟ್ ಮೊರೆಹೋಗಿದ್ದರು. ಬೆಳಗಾವಿಯ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಹೂಡಿದ ನಂತರ ವಿಚಾರಣೆ ನಡೆಸಿ 2018 ರಲ್ಲಿಯೇ ಪ್ರತಿ ಗುಂಟೆಗೆ 40 ಸಾವಿರ ರೂ. ಹೆಚ್ಚುವರಿ ಪರಿಹಾರ ನೀಡುವಂತೆ ಆದೇಶಿಸಲಾಗಿತ್ತು. ಇದಾದ ಬಳಿಕ 2021ರಲ್ಲಿ ಸಕಾಲಕ್ಕೆ ಪರಿಹಾರ ಕೊಡದೇ ಇದ್ದಿದ್ದರಿಂದ ರೈತರು ಮತ್ತೆ ನ್ಯಾಯಾಲಯದ ಮೊರೆಹೋಗಿದ್ದಾರೆ. ಆಗ ರೈತರಿಗೆ ತಕ್ಷಣವೇ ನ್ಯಾಯಯುತ ಪರಿಹಾರ ನೀಡುವಂತೆ ಮತ್ತೊಮ್ಮೆ ಕೋರ್ಟ್ ಆದೇಶಿಸಿದೆ. ಆಗಲೂ ಪರಿಹಾರ ನೀಡದಿದ್ದರಿಂದ ಬೆಳಗಾವಿ ಉಪವಿಭಾಗಾಧಿಕಾರಿ ಕಚೇರಿಯಲ್ಲಿನ ವಸ್ತು ಜಪ್ತಿ ಮಾಡುವಂತೆ ಕೋರ್ಟ್ ಸೂಚನೆ ನೀಡಿತ್ತು.

ಜಮೀನು ಕೊಟ್ಟಿದ್ದ 20 ರೈತರ 8 ಕೋಟಿ ರೂ. ಪರಿಹಾರ ಇನ್ನೂ ಬಾಕಿಯಿದ್ದು, ನ್ಯಾಯಾಲಯದ ಸೂಚನೆ ಮೇರೆಗೆ ಎಸಿ ಕಚೇರಿ ಪೀಠೋಪಕರಣಗಳನ್ನು ರೈತರು ಜಪ್ತಿ ಮಾಡಿ ಬಿಸಿ ಮುಟ್ಟಿಸಿದ್ದಾರೆ.

## ಐವನ್ ಒಬ್ಬ ಮೆಂಟಲ್ ಗಿರಾಕಿ, ಅವನ ಹುಡುಗರೇ ಕಲ್ಲು ತೂರಿರಬಹುದು

**ಮಂಗಳೂರು:** ಐವನ್ ಡಿಸೋಜ ಒಬ್ಬ ಮೆಂಟಲ್ ಗಿರಾಕಿ. ಬಾಯಿಗೆ ಬಂದ ಹಾಗೆ ಮಾತನಾಡುತ್ತಾನೆ ಎಂದು ಮಂಗಳೂರು ಉತ್ತರ ಶಾಸಕ ಡಾ.ವೈ.ಭರತ್ ಶೆಟ್ಟಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯಪಾಲರ ವಿರುದ್ಧ ಕಾಂಗ್ರೆಸ್ ನಾಯಕರು ಆಡಿದ ಕೆಟ್ಟ ಮಾತು ಮತ್ತು ಮುಡಾ, ವಾಲ್ಮೀಕಿ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ರಾಜೀನಾಮೆಗೆ ಆಗ್ರಹಿಸಿ ನಡೆದ ಬಿಜೆಪಿ ಪ್ರತಿಭಟನಾ ಸಭೆಯಲ್ಲಿ ಮಾತನಾಡಿದ ಅವರು, ಐವನ್ ನನ್ನನ್ನು ಏನು ಮಾಡುತ್ತಾನೋ ಗೊತ್ತಿಲ್ಲ. ಹೆಲ್ಮೆಟ್ ಹಾಕಿದ ಇಬ್ಬರು ಐವನ್ ಮನೆ ಮೇಲೆ ಕಲ್ಲೂ ತೂರಾಟ ನಡೆಸಿದ್ದಾರೆ. ಇದನ್ನೂ ಇವನ ಹುಡುಗರಿಂದಲೇ ಮಾಡಿಸಿರಬಹುದು. ಇದಕ್ಕೂ ಆ ಇಬ್ಬರು ನಾನು ಹಾಗೂ ವೇದವ್ಯಾಸ್ ಕಾಮತ್‌ಎಂದು ಕೇಸ್ ಹಾಕುತ್ತಾರೋ ಗೊತ್ತಿಲ್ಲ. ನಮ್ಮ ಮೇಲೆ ಸಾಕಷ್ಟು ಕೇಸ್ ಹಾಕಿದ್ದಾರೆ. ಇನ್ನೂ ರೌಡಿ ಶೀಟರ್ ಆಗಬಹುದೇನೋ ಗೊತ್ತಿಲ್ಲ ಎಂದರು.

ಐವನ್ ರಾಜ್ಯಪಾಲರ ಮನೆಗೆ ನುಗ್ಗಿ ಹೊಡೆಯುತ್ತೇವೆ, ಓಡಿಸುತ್ತೇವೆ ಎಂದು ಹೇಳಿದರು. ಅವರ ಮೇಲೆ ಕೇಸ್ ಹಾಕಲು ಪೊಲೀಸರು ಹಿಂದೆ ಮುಂದೆ ನೋಡುತ್ತಾರೆ. ಸರ್ಕಾರ ಇದೆ ಎಂಬ ಕಾರಣಕ್ಕೆ ಪೊಲೀಸರು ನಿಮ್ಮ ಆತ್ಮ ಸಾಕ್ಷಿಯಾಗಿ ಸರಿಯಾಗಿ ಕೆಲಸ ಮಾಡಿ. ಐವನ್ ಸ್ವಲ್ಪ ಮೆಂಟಲ್ ಆಗಿ ಬಾಯಿ ಬಂದಾಗೆ ಒದರುತ್ತಾನೆ ಎಂದು ಏಕವಚನದಲ್ಲೇ ವಾಗ್ದಾಳಿ ನಡೆಸಿದರು.

ನಮಗೆ ಕಲ್ಲು ಹೊಡೆಯೋದಕ್ಕೆ ಟಯರ್ ಹಚ್ಚೋದಕ್ಕೆ 5 ನಿಮಿಷ ಸಾಕು. ನಮ್ಮ ಯುವ ಮೋರ್ಚಾ ಕಾರ್ಯಕರ್ತರು ತಯಾರಿದ್ದಾರೆ. ನಮಗೂ 10 ಟಯರ್‌ಗಳನ್ನು ಇಲ್ಲಿ ಸುಡಲು ಬರುತ್ತದೆ. ಆ ರೀತಿಯ ಅರಾಜಾಕತೆಯ ಪರಿಸ್ಥಿತಿ ತರುವ ಅವಶ್ಯಕತೆ ನಮಗಿಲ್ಲ ಎಂದು ಕಿಡಿಕಾರಿದರು.

## ಕಂಠಪೂರ್ತಿ ಕುಡಿದು ಕಿರಿಕ್ ಊಟ ನೀಡದ್ದಕ್ಕೆ ಡಾಬಾ ಮಾಲೀಕನಿಗೆ ಚಾಕು ಇರಿತ

**ತುಮಕೂರು:** ಊಟ ಕೊಟ್ಟಿಲ್ಲ ಎಂದು ಮಾಲೀಕನಿಗೆ ಡಾಬಾದಲ್ಲಿ ಕುಡುಕರ ಗ್ಯಾಂಗ್ ಚಾಕುವಿನಿಂದ ಹಲ್ಲೆ ನಡೆಸಿದ ಘಟನೆ ಕುಣಿಗಲ್ ತಾಲ್ಲೂಕಿನಲ್ಲಿರುವ ಭಕ್ತರಹಳ್ಳಿಯಲ್ಲಿ ನಡೆದಿದೆ.



ರಾಜ್ಯ ಹೆದ್ದಾರಿ 33ರ ಭಕ್ತರಹಳ್ಳಿ ಬಳಿಯಿರುವ ಹೈವೇ ಟೂರಿಸ್ಟ್ ಡಾಬಾದಲ್ಲಿ ಈ ಘಟನೆ ನಡೆದಿದ್ದು, ಬುಧವಾರ ತಡರಾತ್ರಿ 12 ಗಂಟೆಯ ವೇಳೆ 8 ಜನ ಪುಂಡರ ಗ್ಯಾಂಗ್ ಕಂಠ ಪೂರ್ತಿ ಕುಡಿದು ಡಾಬಾಗೆ ಬಂದಿದ್ದರು. ಈ ವೇಳೆ ಸರಿಯಾಗಿ ಊಟ ಕೊಟ್ಟಿಲ್ಲ ಎಂದು ಅಡುಗೆ ಭಟ್ಟ ಶರತ್‌ಗೆ ಚಾಕುವಿನಿಂದ ಇರಿದಿದ್ದಾರೆ. ಮಾಲೀಕನಿಗೆ ಮನಬಂದಂತೆ ಥಳಿಸಿ ಪುಂಡಾಟ ನಡೆಸಿದ್ದಾರೆ. ಹಲ್ಲೆ ನಡೆಸುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಘಟನೆ ಸಂಬಂಧ ಪಟ್ಟಂತೆ ಕುಣಿಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹಲ್ಲೆ ನಡೆಸಿ ಪುಂಡಾಟ ಮೆರೆದಿದ್ದ ನಾಲ್ವರು ಕುಡುಕರನ್ನು ಅರೆಸ್ಟ್ ಮಾಡಲಾಗಿದೆ. ಇನ್ನುಳಿದ ಆರೋಪಿಗಳಿಗೆ ಹುಡುಕಾಟ ಮುಂದುವರಿದಿದೆ. ಗಾಯಾಳು ಶರತ್ ತುಮಕೂರು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಜನರ ಒಲವು?

ಮೋದಿ ಅವರು ಗುಜರಾತ್‌ನಲ್ಲಿ 2001 ರಿಂದ 2014 ರವರೆಗೆ ಮುಖ್ಯಮಂತ್ರಿ ಹುದ್ದೆ ಅಲಂಕರಿಸಿದ್ದರು. 2012ರ ವಿಧಾನಸಭಾ ಚುನಾವಣೆ ಮೋದಿ ಅವರಿಗೆ ನಿರ್ಣಯಕವಾಗಿತ್ತು. ಈ ಚುನಾವಣೆ ಗೆದ್ದ ಬಳಿಕ ಮೋದಿ ಅವರ ಹೆಸರು ರಾಷ್ಟ್ರ ರಾಜಕಾರಣಕ್ಕೆ ಬಂದಿತ್ತು.

ಯೋಗಿ ಆದಿತ್ಯನಾಥ್ ಅವರು ಸತತ ಎರಡು ಬಾರಿ ಉತ್ತರ ಪ್ರದೇಶ ಚುನಾವಣೆ ಗೆದ್ದಿದ್ದಾರೆ. 2027 ರಲ್ಲಿ ಉತ್ತರ ಪ್ರದೇಶದಲ್ಲಿ ಚುನಾವಣೆ ನಡೆಯಲಿದೆ. ಈ ಬಾರಿಯ ಲೋಕಸಭಾ ಚುನಾವಣೆ ಉತ್ತರ ಪ್ರದೇಶದಲ್ಲಿ ಬಿಜೆಪಿಗೆ ಹಿನ್ನಡೆಯಾಗಿದೆ. 2027ರ ಚುನಾವಣೆಯಲ್ಲಿ ಬಿಜೆಪಿ ಜಯಗಳಿಸಿದರೆ ಯೋಗಿ ಆದಿತ್ಯನಾಥ್ ಅವರು ವರ್ಚಸ್ಸು ವೃದ್ಧಿಯಾಗುವ ಸಾಧ್ಯತೆಯಿದೆ.

## ಪೋಸ್ಟಿಂಗ್!

ಒಂದೇ ದಿನ 200ಕ್ಕೂ ಹೆಚ್ಚು ನೌಕರರ ಟ್ರಾನ್ಸ್ ಫರ್, ಪೋಸ್ಟಿಂಗ್ ಮಾಡಲಾಗಿದೆ. ನೂರಕ್ಕೂ ಹೆಚ್ಚು ನೌಕರರಿಗೆ ಮುಂಬಡ್ತಿ ನೀಡಿ ಸ್ಥಳ ನಿಯೋಜನೆ ಮಾಡಲಾಗಿದೆ. ಹಲವು ನೌಕರರಿಗೆ ಮಾಪನ ಹುದ್ದೆಯಿಂದ ಜಲಪರೀಕ್ಷಕ ಹುದ್ದೆಗೆ ಮುಂಬಡ್ತಿ ನೀಡಲಾಗಿದೆ. ಜಲಮಂಡಳಿ ಇತಿಹಾಸದಲ್ಲೇ ಈ ರೀತಿ ರಾತ್ರೋರಾತ್ರಿ ವರ್ಗಾವಣೆ ಮಾಡಿರುವುದು ಮೊದಲು ಎನ್ನಲಾಗುತ್ತಿದೆ.

ವಾಟರ್ ಇನ್ಸ್‌ಪೆಕ್ಟರ್, ಕ್ಲರ್ಕ್, ಹೆಲ್ಪರ್ ಗಳಿಗೆ ವರ್ಗಾವಣೆ ಭಾಗ್ಯ ದೊರೆತಿದೆ. ಪೋಸ್ಟಿಂಗ್, ಟ್ರಾನ್ಸ್ ಫರ್ ನಲ್ಲಿ ಭ್ರಷ್ಟಾಚಾರದ ಆರೋಪ ಕೇಳಿಬಂದಿದೆ. ದುಡ್ಡು ಕೊಟ್ಟು ಪೋಸ್ಟಿಂಗ್ ಮಾಡಿಸಿಕೊಳ್ಳಲಾಗಿದೆ ಎನ್ನಲಾಗುತ್ತಿದೆ.

ಆಡಳಿತಾಧಿಕಾರಿ ಹಾಗೂ ನೌಕರರ ಸಂಘದ ಅಧ್ಯಕ್ಷರಿಂದ ವರ್ಗಾವಣೆ ದಂಧೆ ನಡೆಯುತ್ತಿದೆ. ಮುಂಬಡ್ತಿಯಿಂದ ಜಲಮಂಡಳಿಗೆ ಹೆಚ್ಚು ಸಂಬಳ ಪಾವತಿಸಬೇಕಾದ ಪರಿಸ್ಥಿತಿ ಎದುರಾಗಿದೆ. ಸಾಲದ ಸುಳಿಯಲ್ಲಿರುವ ಜಲಮಂಡಳಿಗೆ ಮುಂಬಡ್ತಿಯ ಹೊರೆ ಉಂಟಾಗಲಿದೆ. ಒಬ್ಬೊಬ್ಬರಿಗೆ ಎರಡೆರಡು ಪೋಸ್ಟಿಂಗ್ ನೀಡಿ ಯಡವಟ್ಟು ಮಾಡಿರುವುದು ಇನ್ನಷ್ಟು ಹೊರೆಯಾಗಲಿದೆ.

**ಸಂಕಷ್ಟದಲ್ಲಿ ಜಲ ಮಂಡಳಿ:** ಮಂಡಳಿ ನಷ್ಟದಲ್ಲಿದ್ದು, ಸಂಬಳ ಕೊಡುವುದಕ್ಕೂ ಆಗದ ಪರಿಸ್ಥಿತಿ ಇದೆ ಎಂದು ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿರುವ ಡಿಸಿಎಂ ಡಿಕೆ ಶಿವಕುಮಾರ್ ಗುರುವಾರ ಹೇಳಿದ್ದರು. ಅಲ್ಲದೆ, ನೀರಿನ ದರ ಹೆಚ್ಚಳ ಮಾಡಬೇಕಾದ ಅನಿವಾರ್ಯತೆ ಇದೆ. ಕಳೆದ 8–9 ವರ್ಷದಿಂದ ದರ ಏರಿಕೆ ಮಾಡಿಲ್ಲ. ಹೀಗಾಗಿ ಈ ಬಾರಿ ಮಾಡಿಯೇ ಮಾಡುತ್ತೇವೆ ಎಂದು ಅವರು ಹೇಳಿದ್ದರು.

ಪರಿಸ್ಥಿತಿ ಇಷ್ಟೊಂದು ಹದಗೆಟ್ಟಿರುವಾಗ ಸಚಿವರ ಗಮನಕ್ಕೂ ತಾರದೇ ರಾತ್ರೋರಾತ್ರಿ ವರ್ಗಾವಣೆ, ಮುಂಬಡ್ತಿ ನೀಡಿರುವುದು ಸಾಕಷ್ಟು ಅನುಮಾನಗಳಿಗೆ ಕಾರಣವಾಗಿದೆ. ಒಬ್ಬೊಬ್ಬರಿಗೆ ಎರಡೆರಡು ಪೋಸ್ಟಿಂಗ್ ನೀಡಿರುವುದು ಮತ್ತಷ್ಟು ಸಮಸ್ಯೆಗೆ ಕಾರಣವಾಗಿದೆ.

## ಶುಭಕೋರಿದ ಕುಮಾರಸ್ವಾಮಿ

ಚಂದ್ರಯಾನ–3 ಯೋಜನೆ ಯಶಸ್ವಿ ಹಿಂದೆ ಬೃಹತ್ ಕೈಗಾರಿಕಾ ಸಚಿವಾಲಯದ ಬಹು ದೊಡ್ಡ ಕೊಡುಗೆಯೂ ಇದೆ. ಐಉಖ-ಇನ್ ಸ್ಟ್ರುಮೆಂಟೇಶನ್ ಲಿಮಿಟೆಡ್, ಈಅಖಃ, ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್, ಮತ್ತು ಹಿಂದೂಸ್ತಾನ್ ಮೆಷಿನ್ ಟೂಲ್ಸ್ ಅಡಿಯಲ್ಲಿ ನಾಲ್ಕು ಅಕಖಇ ಗಳು ಚಂದ್ರಯಾನ–3 ರ ಯಶಸ್ಸಿಗೆ ಉತ್ಪನ್ನಗಳನ್ನು ಪೂರೈಸಿದವು ಎಂದು ತಿಳಿಸಿದರು.

ಈ ಆಚರಣೆಯು ಇಸ್ರೋದ ವಿಜ್ಞಾನಿಗಳು ಮತ್ತು ಎಂಜಿನಿಯರ್ ಗಳಿಗೆ ಸಮರ್ಪಣೆ. ಮತ್ತು ನಮ್ಮ ರಾಷ್ಟ್ರದ ಕೈಗಾರಿಕೆಗಳ ಸಹಯೋಗದ ಪ್ರಯತ್ನಗಳಿಗೆ ಚಂದ್ರಯಾನ–3 ಸಾಕ್ಷಿಯಾಗಿದೆ ಎಂದರು.

ಮೊದಲನೇ ಪುಟದಿಂದ...

## ಪೂಜಾರಿ ಭವಿಷ್ಯ

ಮೊದಲನೇ ಅವಧಿಗೆ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ಎರಡನೇ ಅವಧಿಗೆ ಡಿಕೆ ಶಿವಕುಮಾರ್ ಸಿಎಂ ಆಗುವ ಕಾಲ ಬಂದಿದೆ ಎಂದು ಪೂಜಾರಿ ಹೇಳಿದ್ದಾರೆ.

ನನ್ನ ಕನಸಿನಲ್ಲಿ ಸಚಿವ ಎಂಬಿ ಪಾಟೀಲ್ ಬಂದಿದ್ದರು. ಕಾಂಗ್ರೆಸ್ ನಲ್ಲಿ ನಮ್ಮ ಲಿಂಗಾಯತರನ್ನು ಕಡೆಗಣಿಸುತ್ತಿದ್ದಾರೆ, ಈ ಸರ್ಕಾರ ಬೀಳಿಸುತ್ತೀರಾ ಎಂದು ಕೇಳಿದರು, ಬೀಳುತ್ತೆ ಅಂದೆ ಎಂದರು.

**'ಜಾರಕಿಹೊಳಿ ಸಹೋದರರಿಂದ ಸರ್ಕಾರ ಪತನ!':** ಜಾರಕಿಹೊಳಿ ಸಹೋದರರಿಂದ ಸರ್ಕಾರ ಬೀಳುತ್ತದೆ. ಸತೀಶ ಜಾರಕಿಹೊಳಿ ಹಾಗೂ ಡಿಕೆ ಶಿವಕುಮಾರ ನಡುವೆ ಸಿಎಂ ಸ್ಥಾನಕ್ಕೆ ಪೈಪೋಟಿ ಇದೆ ಎಂದು ಪೂಜಾರಿ ಹೇಳಿದರು. ಜತೆಗೆ, ಕೇಂದ್ರದಲ್ಲಿ ಮೋದಿ ಸರ್ಕಾರವು ಐದು ವರ್ಷದೊಳಗೆ ಬೀಳುತ್ತದೆ ಎಂದರು.

ಡಿಕೆ ಶಿವಕುಮಾರ್ ಗಡೇ ದುರ್ಗಾದೇವಿ ಪರಮಭಕ್ತನಾಗಿದ್ದಾರೆ. ವಿವಿಧ ಪ್ರಕರಣಗಳಲ್ಲಿ ಐಟಿ, ಇಡಿಯಿಂದ ಸಂಕಷ್ಟಕ್ಕೆ ಸಿಲುಕಿದ್ದ ಡಿಕೆ ಶಿವಕುಮಾರ್ 2020 ಜನವರಿ 29 ರಂದು ಗಡೇ ದುರ್ಗಾದೇವಿ ಜಾತ್ರೆಗೆ ಆಗಮಿಸಿದ್ದರು. ಆಗ ದೇವಿಯ ಮೂರ್ತಿಗೆ ಪತ್ರ ಬರೆದು ಸಂಕಷ್ಟದಿಂದ ಪಾರಾಗಲು ಪ್ರಾರ್ಥಿಸಿದ್ದರು. ಜೊತೆಗೆ ರಾಜಕೀಯದಲ್ಲಿ ಉನ್ನತ ಸ್ಥಾನ ಅಲಂಕರಿಸಲು ಅವಕಾಶ ಕರುಣಿಸುವಂತೆ ಪತ್ರ ಬರೆದಿದ್ದರು. ಆಗ ದೇವಿಯ ಕೃಪೆಯಿಂದ ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಸ್ಥಾನ ಒಲಿದಿತ್ತು ಎಂದು ಅವರ ಅಭಿಮಾನಿಗಳು ಹೇಳುತ್ತಾರೆ.

## ಟಿಟಿಡಿ ನಿರ್ಧಾರ!

ಟಿಟಿಡಿ ವತಿಯಿಂದ ಎಪ್ಪತ್ತೆಂಟು ದಿನಗಳ ಕಾಲ ಸರಣಿ ಪರೀಕ್ಷೆಗಳನ್ನು ನಡೆಸಲಾಗಿದೆ. ಪವಿತ್ರ ತಿರುಮಲ ಸನ್ನಿಧಿಯಲ್ಲಿನ ದೈನಂದಿನ ಚಟುಟವಟಿಕೆಯಿಂದ ಹಿಡಿದು ಭಕ್ತರಿಗೆ ದರ್ಶನ ಸಮಸ್ಯೆಗಳವರೆಗೆ ನಿಗಾ ಇಟ್ಟಿದ್ದಾರೆ. ತಿಮ್ಮಪ್ಪನ ಪ್ರಸಾದ ಲಡ್ಡುವಿನ ಗುಣಮಟ್ಟದಿಂದ ಪ್ರಾರಂಭಿಸಿ, ಕ್ಷೇತ್ರದ ಎಲ್ಲ ಇಲಾಖೆಗಳನ್ನು ಮೂಲ ಮಟ್ಟದಲ್ಲಿ ಪರಿಶೀಲನೆ ನಡೆಸಿ ಮಹತ್ವದ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದ್ದಾರೆ.

ಟಿಟಿಡಿ ಇದೀಗ ತಿರುಮಲ ಶ್ರೀವಾರಿ ವಿಶೇಷ ದರ್ಶನವನ್ನು ರದ್ದುಗೊಳಿಸಿದೆ. ಅಕ್ಟೋಬರ್ 3 ರಿಂದ 12 ರವರೆಗೆ ತಿಮ್ಮಪ್ಪನ ಆರತಿ ಸೇವೆಗಳು, ಬ್ರೇಕ್ ಪ್ರದರ್ಶನಗಳು, ವಿವಿಧ ವಿಶೇಷ ಪ್ರದರ್ಶನಗಳನ್ನು ಟಿಟಿಡಿ ರದ್ದುಗೊಳಿಸಿದೆ. ಶ್ರೀವಾರಿ ಬ್ರಹ್ಮೋತ್ಸವದ ಅಂಗವಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎನ್ನಲಾಗಿದೆ. ತಿರುಮಲ ಶ್ರೀವಾಹಿನಿ ಬ್ರಹ್ಮೋತ್ಸವದಲ್ಲಿ ಸ್ವಾಮಿಯ ವಾಹನದಲ್ಲಿ ಸಂಚರಿಸುವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಕಾರಣ ಯಾವುದೇ ತೊಂದರೆಗಳು ಆಗದಿರಲಿ ಎಂದು ಟಿಟಿಡಿ ಈ ನಿರ್ಧಾರ ಪ್ರಕಟಿಸಿದೆ.

ಶ್ರೀವಾರಿ ದರ್ಶನಕ್ಕೆ ಬರುವ ಭಕ್ತರಿಗೆ ತೃಪ್ತಿಕರ ದರ್ಶನವನ್ನು ಒದಗಿಸುವ ಸಲುವಾಗಿ ಟಿಟಿಡಿ ಬ್ರಹ್ಮೋತ್ಸವದ ದರ್ಶನ ಮತ್ತು ವಿವಿಧ ವಿಶೇಷ ದರ್ಶನ ವಿರಾಮಗಳನ್ನು ರದ್ದುಗೊಳಿಸಿದೆ. ಇದೇ ವೇಳೆ ಅಕ್ಟೋಬರ್ 3 ರಿಂದ 12 ರ ವರೆಗೆ ಬ್ರಹ್ಮೋತ್ಸವದ ಮಹೋತ್ಸವದವರೆಗೆ ಪ್ರತಿದಿನ ವೃದ್ಧರು, ಅಂಗವಿಕಲರು ಮತ್ತು ಚಿಕ್ಕ ಮಕ್ಕಳ ಪೋಷಕರಿಗೆ ವಿಶೇಷ ದರ್ಶನವನ್ನು ಸಹ ಟಿಟಿಡಿ ರದ್ದುಗೊಳಿಸಿದೆ. ವಿಐಪಿ ಬ್ರೇಕ್ ದರ್ಶನ, ಪ್ರೋಟೋಕಾಲ್ ದರ್ಶನವನ್ನು ಸೆಲೆಬ್ರಿಟಿಗಳಿಗೆ ಮಾತ್ರ ಟಿಟಿಡಿ ಸೀಮಿತಗೊಳಿಸಿದೆ. ಭಕ್ತರು ಈ ವಿಷಯವನ್ನು ಗಮನಿಸಿ, ಸಹಕರಿಸಬೇಕೆಂದು ಟಿಟಿಡಿ ವಿನಂತಿಸಿದೆ.

ಈ ಮಧ್ಯೆ, ಶ್ರೀವಾರಿ ದರ್ಶನ ಟಿಕೆಟ್ ವಿಚಾರದಲ್ಲಿ ನಡೆಯುವ ಅಕ್ರಮಗಳನ್ನು ಟಿಟಿಡಿ ಗುರುತಿಸಿದೆ. ಆನ್‌ಲೈನ್ ಸೇವಾ ಟಿಕೆಟ್ ಗಳು ಮತ್ತು ದರ್ಶನ ಟಿಕೆಟ್‌ಗಳಿಗೆ ಆಧಾರ್ ಲಿಂಕ್ ಮಾಡುವುದನ್ನು ಕಡ್ಡಾಯಗೊಳಿಸಲು ಕಟಿಬದ್ಧವಾಗಿದೆ. ಈ ಮೂಲಕ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಬೀಳುವ ನಿರೀಕ್ಷೆ ಇದೆ. ಅಲ್ಲದೆ, ಟಿಟಿಡಿಯ ಬೆನ್ನೆಲುಬಾಗಿರುವ ಐಟಿ ವ್ಯವಸ್ಥೆಯನ್ನು ವೇಗಗೊಳಿಸಲು ಜಿಯೋ ಟಿಸಿಎಸ್ ಪ್ರತಿನಿಧಿಗಳೊಂದಿಗೆ ಸಮಾಲೋಚನೆ ನಡೆಸುತ್ತಿದೆ. ಮುಂದಿನ ದಿನಗಳಲ್ಲಿ ತಿರುಮಲದಲ್ಲಿ ಇನ್ನಷ್ಟು ಹೊಸ ಬೆಳವಣಿಗೆಗಳನ್ನು ಕಾಣುವ ನಿರೀಕ್ಷೆ ಇದೆ. ತಿರುಮಲದ ಪರಿಶುದ್ಧತೆ ಕಾಪಾಡುವ ಜತೆಗೆ ಅದ್ಭುತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಶ್ಯಾಮಲಾ ರಾವ್ ಅವರು ತಿಳಿಸಿದ್ದಾರೆ.

## ತುಮಕೂರಲ್ಲೂ ನಿಲ್ಲುತ್ತೆ

ತಮಕೂರು ಸಚಿವ ವಿ. ಸೋಮಣ್ಣ ಅವರ ಲೋಕಸಭಾ ಕ್ಷೇತ್ರ. ಕಳೆದ ಲೋಕಸಭಾ ಚುನಾವಣೆಯಲ್ಲಿ ಗೆದ್ದು ಮೊದಲ ಬಾರಿಗೆ ಸಂಸತ್ತು ಪ್ರವೇಶಿಸಿದ್ದಾರೆ. ಮೊದಲ ಬಾರಿಗೆ ಲೋಕಸಭೆಗೆ ಆಯ್ಕೆಯಾಗಿರುವ ವಿ. ಸೋಮಣ್ಣ ಅವರು ಮೋದಿ ಸಂಪುಟದಲ್ಲಿ ಸಚಿವರಾಗಿದ್ದಾರೆ. ಸಚಿವ ವಿ. ಸೋಮಣ್ಣ ಅವರು ಕ್ಷೇತ್ರದ ಜನತೆಗೆ ಸಿಹಿ ಸುದ್ದಿ ನೀಡಿದ್ದಾರೆ. ಈ ಮೊದಲು ವಂದೇ ಭಾರತ್ ರೈಲು ಕೆಎಸ್ ಆರ್ ಬೆಂಗಳೂರಿನಿಂದ ಹೊರಟು ಯಶವಂತಪುರ, ದಾವಣಗೆರೆ, ಹುಬ್ಬಳ್ಳಿಯಲ್ಲಿ ನಿಂತು ಧಾರವಾಡದಲ್ಲಿ ಕೊನೆಗೊಳ್ಳುತ್ತಿತ್ತು. ಇದೀಗ ತುಮಕೂರಿನಲ್ಲೂ ನಿಲ್ಲುತ್ತದೆ.

## ಘೋಷಿಸಿದ ಶ್ರೀಲಂಕಾ

ಶ್ರೀಲಂಕಾದ ಆರ್ಥಿಕತೆಗೆ ಪ್ರವಾಸೋದ್ಯಮವು ಬಹಳ ಮುಖ್ಯವಾಗಿದೆ. ಪ್ರತಿ ವರ್ಷ ವಿವಿಧ ದೇಶಗಳಿಂದ ಲಕ್ಷಾಂತರ ಪ್ರವಾಸಿಗರು ಶ್ರೀಲಂಕಾಕ್ಕೆ ಭೇಟಿ ನೀಡುತ್ತಾರೆ. ಕೆಲ ದಿನಗಳ ಹಿಂದೆಯಷ್ಟೇ ಶ್ರೀಲಂಕಾದಲ್ಲಿ ವೀಸಾ ಆನ್ ಅರೈವಲ್ ಶುಲ್ಕ ಹೆಚ್ಚಿಸಿ ವಿವಾದ ಸೃಷ್ಟಿಸಿತ್ತು. ಶ್ರೀಲಂಕಾದಲ್ಲಿ ವೀಸಾ ಆನ್ ಅರೈವಲ್ ಸೌಲಭ್ಯವನ್ನು ವಿದೇಶಿ ಕಂಪನಿಯೊಂದು ನಿರ್ವಹಿಸುತ್ತಿತ್ತು.

ಶ್ರೀಲಂಕಾದಲ್ಲಿ, ಭಾರತ, ಚೀನಾ, ಜಪಾನ್, ರಷ್ಯಾ, ಮಲೇಷ್ಯಾ, ಥೈಲ್ಯಾಂಡ್ ಮತ್ತು ಇಂಡೋನೇಷ್ಯಾದ ಜನರು ಯಾವುದೇ ಶುಲ್ಕವಿಲ್ಲದೆ ಪ್ರವಾಸಿ ವೀಸಾವನ್ನು ಪಡೆಯುತ್ತಾರೆ.

## ಸಿಎಂ ಪತ್ನಿ

ಸಿಎಂ ಪತ್ನಿಯವರ ಮನವಿಗೆ ಮುಡಾ ಮಾರುಕಟ್ಟೆ ದರ ಅಥವಾ 60:40 ಅನುಪಾತದಲ್ಲಿ ಪರಿಹಾರ ನೀಡಲು ನಿರ್ಧರಿಸಿತ್ತು. ಇದಕ್ಕೆ ಪಾರ್ವತಿಯವರು ನನಗೆ ಬದಲಿ ಜಮೀನಿನನ್ನೇ ಕೊಡಬೇಕೆಂದು ಒತ್ತಾಯಿಸಿದ್ದರು. ಈ ಬಗ್ಗೆ ಸಭೆಯ ನಡಾವಳಿಯಲ್ಲಿ ಮುಡಾದ ಅಂದಿನ ಅಧ್ಯಕ್ಷ ಡಿ.ಧ್ರುವಕುಮಾರ್ ನಮೂದಿಸಿದ್ದಾರೆ. ಸಿದ್ದರಾಮಯ್ಯ ಸಿಎಂ ಆದ ಬಳಿಕ ಅವರ ಆಪ್ತ ಧ್ರುವಕುಮಾರ್ ಮುಡಾ ಅಧ್ಯಕ್ಷರಾಗಿದ್ದರು.

ಸಿಎಂ ಸಿದ್ದರಾಮಯ್ಯನವರು ಈ ಹಿಂದೆ ಮುಡಾಗೆ ಪತ್ನಿ ಪಾರ್ವತಿ ಪತ್ರವನ್ನೇ ಬರೆದಿಲ್ಲ ಎಂದು ಬಹಿರಂಗವಾಗಿಯೇ ಮಾಧ್ಯಮಗಳಿಗೆ ತಿಳಿಸಿದ್ದರು. ಆದರೆ ಪತ್ನಿ ಮುಡಾಗೆ ಪತ್ರ ಬರೆದ ಬಗ್ಗೆ ರಾಜ್ಯಪಾಲರಿಗೆ ನೀಡಿದ ಉತ್ತರದಲ್ಲಿ ಸಿಎಂ ಉಲ್ಲೇಖ ಮಾಡಿದ್ದರು. ಆದರೆ ಪಾರ್ವತಿ ಅವರು ಮಾರುಕಟ್ಟೆ ದರ ಅಥವಾ 60:40 ಅನುಪಾತದಲ್ಲಿ ಪರಿಹಾರ ಬೇಡ ಎಂದು ಹೇಳಿ ಬದಲಿ ಜಮೀನು ನೀಡಬೇಕೆಂದು ಬರೆದ ಪತ್ರ ರಿವೀಲ್ ಆಗುವುದರೊಂದಿಗೆ ಪ್ರಕರಣ ಮತ್ತೊಂದು ತಿರುವು ಪಡೆದುಕೊಂಡಿದೆ.

## ಕೊಲೆ

ಗಾಯಾಳುವನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಸಾವಿಗೀಡಾಗಿದ್ದಾರೆ. ಕಾಟನ್ ಪೇಟೆ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ. ಘಟನೆ ಸಂಬಂಧ ಮೃತನ ಪತ್ನಿ ಕಾಟನ್ ಪೇಟೆ ಠಾಣೆಗೆ ದೂರು ನೀಡಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಗಳಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

# ಇನ್ನೆರಡು ದಿನದಲ್ಲಿ ದುಬಾರಿ ಮದ್ಯ ದರ ಇಳಿಕೆ?

**ಬೆಂಗಳೂರು:** ನೆರೆಯ ರಾಜ್ಯಗಳ ಮದ್ಯ ಮಾರಾಟ ದರವನ್ನು ಪರಿಗಣಿಸಿ ರಾಜ್ಯದಲ್ಲೂ ದುಬಾರಿ ಮದ್ಯವನ್ನು ಅಗ್ಗದ ದರದಲ್ಲಿ ನೀಡಲು ಸರ್ಕಾರ ಚಿಂತನೆ ನಡೆಸಿದೆ. ಅಬಕಾರಿ ಆದಾಯ ಹೆಚ್ಚಿಸಲು ಮದ್ಯದ ದರ ಇಳಿಸಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದ್ದು, ಇದರಿಂದಾಗಿ ಶೀಘ್ರದಲ್ಲೇ ಮದ್ಯ ದರ ಇಳಿಕೆಯಾಗುವ ಸಾಧ್ಯತೆ ಇದೆ.

ನೆರೆಹೊರೆಯ ರಾಜ್ಯಕ್ಕಿಂತ ನಮ್ಮ ರಾಜ್ಯದಲ್ಲಿ ಮದ್ಯದ ದರ ಹೆಚ್ಚಿದೆ. ಹೀಗಾಗಿ ಗಡಿಭಾಗದ ಜನ ಅನ್ಯ ರಾಜ್ಯಕ್ಕೆ ತೆರಳಿ ಮದ್ಯ ಖರೀದಿ ಮಾಡುತ್ತಿದ್ದಾರೆ. ಇದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟಿ ಕೋಟಿ ರೂ. ಹಣ ನಷ್ಟವಾಗುತ್ತಿತ್ತು. ಈ ನಷ್ಟವನ್ನು ತಪ್ಪಿಸಲು ಮದ್ಯ ದರ ಇಳಿಕೆಗೆ ರಾಜ್ಯ ಸರ್ಕಾರ ಒಪ್ಪಿಗೆ ಸೂಚಿಸಿದೆ.

ಹೀಗಾಗಿ 16 ಸ್ಲ್ಯಾಬ್‌ಗಳ ದರ ಇಳಿಕೆಗೆ ಅಬಕಾರಿ ಇಲಾಖೆ ಮುಂದಾಗಿದ್ದು, ಸೆ.1 ರಿಂದ ರಾಜ್ಯದಲ್ಲಿ ದುಬಾರಿ ಮದ್ಯ ಕಡಿಮೆ ಬೆಲೆಗೆ ಸಿಗಲಿದೆ. ದುಬಾರಿ ಬೆಲೆಯ ಬ್ರಾಂದಿ, ವಿಸ್ಕಿ ಜಿನ್, ರಮ್ ಈ ತಿಂಗಳಲ್ಲೇ ಅಗ್ಗವಾಗಲಿದೆ. ಪ್ರತಿ ಬ್ರ್ಯಾಂಡ್ ಮದ್ಯದ ಪರಿಷ್ಕೃತ ದರ ಪಟ್ಟಿ ಶುಕ್ರವಾರ (ಇಂದು) ಅಥವಾ ಶನಿವಾರ ಬಿಡುಗಡೆಯಾಗುವ ಸಂಭವವಿದೆ.



ನೆರೆಹೊರೆಯ ರಾಜ್ಯಗಳ ಮದ್ಯ ಮಾರಾಟ ದರವನ್ನು ಪರಿಗಣಿಸಿ ಕರ್ನಾಟಕದಲ್ಲೂ ಮದ್ಯದ ದರ ಪರಿಷ್ಕರಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಘೋಷಿಸಿದ್ದರು. ಬಳಿಕ ಜುಲೈನಿಂದ ದರ ಹೆಚ್ಚಳ ಆಗಬೇಕಿತ್ತು, ಆದರೆ ಸಿಎಂ ಸೂಚನೆಯ ಮೇರೆಗೆ ತಾತ್ಕಾಲಿಕವಾಗಿ ತಡೆ ಹಿಡಿಯಲಾಗಿತ್ತು.

## ಪ್ರಮುಖ ಸಾಕ್ಷಿ, ಹಾಸ್ಯ ನಟ ಚಿಕ್ಕಣ್ಣಗೆ ಮತ್ತೆ ಸಂಕಷ್ಟ!

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಹಾಸ್ಯನಟ ಚಿಕ್ಕಣ್ಣಗೆ ಮತ್ತೆ ಸಂಕಷ್ಟ ಎದುರಾಗುವ ಸಾಧ್ಯತೆಯಿದೆ. ದರ್ಶನ್ ಮತ್ತು ಗ್ಯಾಂಗ್ ಸದಸ್ಯರ ವಿರುದ್ಧ ಪ್ರಮುಖ ಸಾಕ್ಷಿಯಾಗಿರುವ ಚಿಕ್ಕಣ್ಣ ಸೆಕ್ಷನ್ ಸಿಆರ್‌ಪಿಸಿ 164ರ ಅಡಿಯಲ್ಲಿ ಜಡ್ಜ್ ಎದುರು ಈಗಾಗಲೇ ಹೇಳಿಕೆ ನೀಡಿದ್ದಾರೆ. ಹೇಳಿಕೆ ನೀಡಿದ ನಂತರ ದರ್ಶನ್ ಅವರನ್ನು ಭೇಟಿ ಮಾಡಿದ್ದರು.

ಸಾಧಾರಣವಾಗಿ ತನಿಖಾ ಹಂತದಲ್ಲಿರುವಾಗಲೇ ಸಾಕ್ಷಿಯಾದ ವ್ಯಕ್ತಿ ಜೈಲಿನಲ್ಲಿ ಆರೋಪಿಯನ್ನು ಭೇಟಿ ಮಾಡುವುದಿಲ್ಲ. ಆದರೆ ತನಿಖಾ ಹಂತದಲ್ಲಿರುವಾಗಲೇ ಚಿಕ್ಕಣ್ಣ ದರ್ಶನ್ ಅವರನ್ನು ಭೇಟಿ ಮಾಡಿದ್ದಕ್ಕೆ ಎಸ್‌ಐಟಿ ಶೀಘ್ರವೇ ನೋಟಿಸ್ ನೀಡುವ ಸಾಧ್ಯತೆಯಿದೆ.

ಯಾವ ಉದ್ದೇಶಕ್ಕೆ ಆರೋಪಿಯನ್ನು ಭೇಟಿಯಾಗಿದ್ದೀರಿ? ಆರೋಪಿ ಬಳಿ ಏನು ಮಾತನಾಡಿದ್ದೀರಿ ಎಂದು ಚಿಕ್ಕಣ್ಣ ಅವರನ್ನು ಪೊಲೀಸರು ಪ್ರಶ್ನಿಸುವ ಸಾಧ್ಯತೆಯಿದೆ. ಇದರ ಜೊತೆಯಲ್ಲಿ ಸಾಕ್ಷಿ–ಆರೋಪಿ ಭೇಟಿ ಬಗ್ಗೆ ಜೈಲಾಧಿಕಾರಿಗಳ ಬಳಿಯೂ ಮಾಹಿತಿ ಪಡೆಯಬಹುದು. ಅಷ್ಟೇ ಅಲ್ಲದೇ ಸಾಕ್ಷಿಗಳ ಭೇಟಿಯನ್ನ ತಡೆಯಲು ನ್ಯಾಯಾಲಯದಲ್ಲಿ ಎಸ್‌ಐಟಿ ಮನವಿ ಮಾಡುವ ಸಾಧ್ಯತೆಯಿದೆ.

ಜೂನ್ 8 ರಂದು ಸ್ಟೋನಿ ಬ್ರೂಕ್ ಪಬ್‌ನಲ್ಲಿ ನಡೆದಿದ್ದ ಪಾರ್ಟಿಯಲ್ಲಿ ದರ್ಶನ್ ಜೊತೆ ಚಿಕ್ಕಣ್ಣ ಭಾಗಿಯಾಗಿದ್ದರು. ಪಾರ್ಟಿ ಬಳಿಕ ದರ್ಶನ್ ಪಟ್ಟಣಗೆರೆ ಶೆಡ್‌ಗೆ ಹೋಗಿದ್ದರೆ ಚಿಕ್ಕಣ್ಣ ಮನೆಗೆ ತೆರಳಿದ್ದರು.

**ಚಿಕ್ಕಣ್ಣ ಪ್ರಮುಖ ಸಾಕ್ಷಿ ಹೇಗೆ?:** ಯಾವುದೇ ಪ್ರಕರಣದಲ್ಲಿ ಪೊಲೀಸರು ಠಾಣೆಗೆ ಕರೆಸಿ ಸಾಕ್ಷಿಗಳನ್ನು ವಿಚಾರಣೆ ನಡೆಸುತ್ತಾರೆ. ಆದರೆ ಪ್ರಕರಣ ಒಂದರಲ್ಲಿ ಆ ವ್ಯಕ್ತಿಯ ಹೇಳಿಕೆ ಪ್ರಮುಖ ಸಾಕ್ಷಿ ಆಗಲಿದೆ ಎಂದಾದರೆ ಮಾತ್ರ ಆ ವ್ಯಕ್ತಿಯನ್ನು ಜಡ್ಜ್ ಮುಂದೆ ಹಾಜರು ಪಡಿಸಿ ಹೇಳಿಕೆ ನೀಡಲಾಗುತ್ತದೆ.

ನಟ ಚಿಕ್ಕಣ್ಣ ಅವರ ಹೇಳಿಕೆಯನ್ನು ಸಿಆರ್‌ಪಿಸಿ 164ರ ಅಡಿಯಲ್ಲಿ ನ್ಯಾಯಾಧೀಶರ ಎದುರು ಪೊಲೀಸರು ದಾಖಲಿಸಿದ್ದಾರೆ. ಚಿಕ್ಕಣ್ಣ ಅವರ ಹೇಳಿಕೆಯನ್ನು ಪ್ರಮುಖ ಸಾಕ್ಷಿಯನ್ನಾಗಿ ಪರಿಗಣಿಸಲೆಂದೇ ಪೊಲೀಸರು ಜಡ್ಜ್ ಮುಂದೆ ಹೇಳಿಕೆ ದಾಖಲು ಮಾಡಿದ್ದಾರೆ ಎನ್ನಲಾಗುತ್ತಿದೆ.

ರೇಣುಕಾಸ್ವಾಮಿ ಕೊಲೆ ನಡೆದ ದಿನ ದರ್ಶನ್ ಅವರ ಜೊತೆ ಚಿಕ್ಕಣ್ಣ ಪಾರ್ಟಿಯಲ್ಲಿ ಭಾಗಿಯಾಗಿದ್ದರು. ಚಿಕ್ಕಣ್ಣ ಠಾಣೆಗೆ ಬಂದು ಪೊಲೀಸರು ಕೇಳಿದ ವಿವರಗಳನ್ನು ನೀಡಿದ್ದರೂ ಮುಂದೆ ಚಿಕ್ಕಣ್ಣ ಏನಾದರೂ ತಮ್ಮ ಹೇಳಿಕೆಯನ್ನು ಬದಲಿಸಿದರೆ ವಿಚಾರಣೆಗೆ ಹಿನ್ನಡೆಯಾಗಬಹುದು ಎಂಬ ಕಾರಣಕ್ಕೆ ಅವರ ಹೇಳಿಕೆಯನ್ನು ನ್ಯಾಯಾಧೀಶರ ಮುಂದೆಯೇ ಪಡೆದುಕೊಳ್ಳಲಾಗಿದೆ. ಈ ಕಾರಣಕ್ಕೆ ಪೊಲೀಸರ ವಿಚಾರಣೆ ಸಂದರ್ಭದಲ್ಲಿ ಏನು ಹೇಳಿಕೆ ನೀಡಿದ್ದಾರೋ ಅದೇ ಹೇಳಿಕೆಯನ್ನು ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದ ನಂತರ ಕೋರ್ಟ್‌ನಲ್ಲಿ ನಡೆಯುವ ವಿಚಾರಣೆ ವೇಳೆ ನ್ಯಾಯಾಧೀಶರ ಮುಂದೆ ಹೇಳಬೇಕಾಗುತ್ತದೆ. ಯಾವುದೇ ಕಾರಣಕ್ಕೂ ಒತ್ತಡಕ್ಕೆ ಮಣಿದು ನಾನು ಹಿಂದೆ ಆ ರೀತಿಯ ಹೇಳಿಕೆ ನೀಡಿದ್ದೆ ಎಂಬ ಹೇಳಿಕೆಯನ್ನು ನೀಡಲು ಸಾಧ್ಯವಾಗುವುದಿಲ್ಲ.

# ಜಾನಪದ ಕಲೆಗಳಿಗೆ ಪ್ರೋತ್ಸಾಹ ಅಗತ್ಯ: ಪ್ರೊ.ಕಾಳೇಗೌಡ ನಾಗವಾರ

**ರಾಮನಗರ:** ಇಂದಿನ ಯುವಜನತೆ ನೆಲ ಮೂಲದ ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವಂತಹ ಕಾರ್ಯ ಮಾಡಬೇಕು ಎಂದು ಹಿರಿಯ ಜಾನಪದ ವಿದ್ವಾಂಸರಾದ ಪ್ರೊ. ಕಾಳೇಗೌಡ ನಾಗವಾರ ಅವರು ಕರೆ ನೀಡಿದರು.

ಅವರು ಆ. 22ರ ಗುರುವಾರ ಕರ್ನಾಟಕ ಜಾನಪದ ಪರಿಷತ್ತಿನ ವತಿಯಿಂದ ಜಾನಪದ ಲೋಕದಲ್ಲಿ ಆಯೋಜಿಸಲಾಗಿದ್ದ ವಿಶ್ವ ಜಾನಪದ ದಿನಾಚರಣೆ ಮತ್ತು ಜನಪದ ಮಹಾಕಾವ್ಯ ಗಾಯನ ಮತ್ತು ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಾನಪದ ಕಲೆಯನ್ನು ಯುವ ಸಮೂಹಕ್ಕೆ ತಿಳಿಸಿಬೇಕು ಇಲ್ಲವಾದಲ್ಲಿ ಜಾನಪದ ಕಲೆ ಮುಂದಿನ ದಿನಗಳಲ್ಲಿ ವಸ್ತು ಸಂಗ್ರಹಾಲಯಗಳಲ್ಲಿ ಮಾತ್ರ ಕಾಣುವ ಸ್ಥಿತಿ ಬರಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಭಾಷೆ ಮತ್ತು ಸಾಂಸ್ಕೃತಿಕ ವೈವಿಧ್ಯಗಳೇ ಭಾರತದ ವೈಶಿಷ್ಟ, ಪ್ರತಿಯೊಂದು ರಾಜ್ಯವೂ ಸಹ ವಿಶಿಷ್ಟ ಸಂಸ್ಕೃತಿಯಿಂದ ವಿಭಿನ್ನವಾಗಿ ಕಾಣುತ್ತದೆ, ಕರ್ನಾಟಕದ ಜಾನಪದ ಸಾಹಿತ್ಯವೂ ಅಕ್ಷರ ಸಾಹಿತ್ಯಕ್ಕಿಂತ ವಿಭಿನ್ನವಾಗಿದ್ದು, ಹೆಚ್ಚು ಅನುಭವಗಳಿಂದ ವ್ಯಕ್ತವಾಗಿವೆ ಎಂದರು.




ಜಾನಪದಕ್ಕೆ ಸಾಕಷ್ಟು ಇತಿಹಾಸವಿದೆ, ಇವುಗಳನ್ನು ಅರ್ಥ ಮಾಡಿಕೊಳ್ಳಲು ಮುಖ್ಯವಾದ ತೊಡಕು ಎಂದರೆ ಭಾಷೆ, ಜಾನಪದದಂತಹ ಜಾಗತಿಕ ಸಾಮ್ಯತೆಯುಳ್ಳ ವಿಷಯದ ಅಭ್ಯಾಸಕ್ಕೆ ಪ್ರತಿಯೊಂದು ಸಂಸ್ಕೃತಿಯ ಜಾನಪದದ ಸ್ಪಷ್ಟ ಅರಿವು ಅತ್ಯಗತ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜನಪದ ಗಾಯಕರಾದ ಡಾ. ಅಪ್ಪಗೆರೆ ತಿಮ್ಮರಾಜು ಅವರು ಮಾತನಾಡಿ, ಜಾನಪದ ಕಲೆಗಳನ್ನು ಮುಂದಿನ ತಲೆಮಾರುಗಳಿಗೆ ಉಳಿಸಿ-ಬೆಳೆಸುವ ಕಾರ್ಯ ಆಗಬೇಕು, ಜಾನಪದ ಗೀತೆಗಳಲ್ಲಿ ಹಲವು ರೀತಿಯ ವಾದ್ಯಗಳಿವೆ. ಅವುಗಳನ್ನು ಯಾವ ರೀತಿಯಲ್ಲಿ ನುಡಿಸಿ, ತಾಳಕ್ಕೆ ತಕ್ಕಂತೆ ಯಾವ ರೀತಿಯಲ್ಲಿ ಲಯಬದ್ದವಾಗಿ ಹಾಡುಗಳನ್ನು ಹಾಡಬೇಕು ಎಂದು ತಿಳಿಸಿದರು.

ಆಶಯ ನುಡಿಗಳನ್ನಾಡಿದ ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಪ್ರೊ.ಹಿ.ಚಿ.ಬೋರಲಿಂಗಯ್ಯ ಅವರು, ಯೂರೋಪ್ ಸೇರಿದಂತೆ ಪಾಶ್ಚಾತ್ಯ ದೇಶಗಳಲ್ಲಿ ಆ. 22 ರಂದು ವಿಶ್ವ ಜಾನಪದ ದಿನಾಚರಣೆ ಎಂದು ಆಚರಿಸುತ್ತಾರೆ, ಆದರೆ ಸಾವಿರ ವರ್ಷಗಳ ಹಿಂದೆ ಕವಿರಾಜ ಮಾರ್ಗದಲ್ಲಿ ಕನ್ನಡ ಕಾವ್ಯವನ್ನು ಕಟ್ಟಿ ಹಾಡುವ ಪರಂಪರೆಯಿತ್ತು ಎಂದು ಶ್ರೀ ವಿಜಯ ಬಣ್ಣಿಸಿದ್ದಾರೆ. ಅದರರ್ಥ ಸುಮಾರು ಎರಡೂವರೆ ಸಾವಿರ ವರ್ಷದ ಹಿಂದೆಯೇ ಕನ್ನಡದಲ್ಲಿ ಜಾನಪದ ಪರಂಪರೆಯಿತ್ತು ಎಂಬುದು ತಿಳಿದು ಬರುತ್ತದೆ, ಜನಪದ ಪರಂಪರೆ ದೇಸಿ ಪರಂಪರೆ. ಅದು ಎಷ್ಟು ದೊಡ್ಡದು ಎಂದು ಕನ್ನಡ ಆದಿ ಕವಿ ಪಂಪ ಅವರು 10ನೇ ಶತಮಾನದಲ್ಲಿಯೇ ಅದರ ಮಹತ್ವವನ್ನು ವರ್ಣಿಸಿದ್ದಾರೆ. ಪ್ರಪಂಚದಲ್ಲೇ ಅತ್ಯಂತ ಶ್ರೀಮಂತವಾದ ಹಾಗೂ ಅಪಾರ ವೈವಿಧ್ಯಮಯದ ಜನಪದ ಪರಂಪರೆ ಇಟ್ಟಿಕೊಂಡಿರುವ ದೇಶ ನಮ್ಮದು. ಹಿಂದಿ ಮಾತನಾಡುವ ನಾಲ್ಕೈದು ರಾಜ್ಯಗಳು ಇದ್ದರೂ ಕೂಡ ಅಲ್ಲಿ ಇಷ್ಟರ ಮಟ್ಟಿಗೆ ಜನಪದ ಕಾವ್ಯ ಪ್ರಕಟವಾಗಿಲ್ಲ. ಕನ್ನಡದಲ್ಲಿ 21 ಮಹಾಕಾವ್ಯಗಳು ಪ್ರಕಟಕೊಂಡಿವೆ. ಅದರಲ್ಲಿ ಮಲೆ ಮಹದೇಶ್ವರ ಕಾವ್ಯ, ಮಂಟೇಸ್ವಾಮಿ ಕಾವ್ಯ, ಜುಂಜಪ್ಪನ ಕಾವ್ಯ ಈ 3 ಕಾವ್ಯಗಳು ಅತ್ಯಂತ ಪ್ರಸಿದ್ದವಾಗಿವೆ, ಅಷ್ಟರ ಮಟ್ಟಿಗೆ ಕರ್ನಾಟಕದ ಜನಪದ ಸಾಹಿತ್ಯ ಸಮೃದ್ಧಗೊಂಡಿದೆ. ಜನಪದ ದಿನವನ್ನು ಗೌರವಿಸುವ ಈ ದಿನಕ್ಕೆ ಅದರದ್ದೇ ಆದ ಮಹತ್ವವಿದೆ. ಅದನ್ನು ಗೌರವಿಸುವುದು ನಮ್ಮ ಕರ್ತವ್ಯ ಎಂದು ಹೇಳಿದರು.

ಜಾನಪದ ಗಾಯನವನ್ನು ಕೋಣನಕೊಪ್ಪಲು ಸಿದ್ದರಾಜು, ಕೈಲಾಸಮೂರ್ತಿ, ಮೋಹನ್ ಕುಮಾರ್ ಪ್ರಸ್ತುತ ಪಡಿಸಿದರು. ಕ್ಯುರೇಟರ್ ರವಿ ಎಂ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಮ್ಯಾನೇಜಿಂಗ್ ಟ್ರಸ್ಟಿ ಆದಿತ್ಯ ನಂಜರಾಜ್, ವಿದ್ವಾಂಸರಾದ ಶಿವಣ್ಣ, ಸಾಹಿತಿ ವಿಜಯ್ ರಾಂಪುರ, ಸು.ತ ರಾಮೇಗೌಡ, ಡಾ.ತೇಜಾವತಿ ಹಾಗೂ ಜಾನಪದ ಗಾಯಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಪರಿಶಿಷ್ಟ ಜಾತಿ ಶಿಕ್ಷಕರ ಕ್ಷೇಮಾಭಿವೃದ್ದಿ ಸಂಘದಿಂದ ಪ್ರತಿಭಾ ಪುರಸ್ಕಾರ ನಾಳೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲಾ ಘಟಕದ ಪರಿಶಿಷ್ಟ ಜಾತಿ ಶಿಕ್ಷಕರ ಕ್ಷೇಮಾಭಿವೃದ್ದಿ ಸಂಘದಿಂದ 2023- 2024ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮತ್ತು ಜಿಲ್ಲಾ ಮಟ್ಟದ ಪರಿಶಿಷ್ಟಜಾತಿ ಸೀಕ್ಷಕರ ನೌಕರರ ಜಾಗೃತಿ ಸಮಾವೇಶ, ಶೈಕ್ಷಣಿಕ ಕಾರ್ಯಗಾರವನ್ನು ಅಗಸ್ಟ್ 24ರ ಶನಿವಾರದಂದು ಕರಿನಂಜನಪುರದ ರಸ್ತೆಯಲ್ಲಿ ಇರುವ ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮಧ್ಯಾಹ್ನ 12 ಗಂಟೆಗೆ ನಡೆಸಲಾಗುವುದು ಎಂದು ಪರಿಶಿಷ್ಟಜಾತಿ ಶಿಕ್ಷಕರ ಕ್ಷೇಮಾಭಿವೃದ್ದಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸಿ.ಕೆ. ರಾಮಸ್ವಾಮಿ ತಿಳಿಸಿದರು.

ನಗರದ ಭುವನೇಶ್ವರಿ ವೃತ್ತದ ಶಿಕ್ಷಕರ ಭವನದ ಆವರಣದಲ್ಲಿ ಸರ್ವ ಸದಸ್ಯರ ಸಭೆಯಲ್ಲಿ ಮಾತನಾಡಿದರು. ಚಾಮರಾಜನಗರ ಜಿಲ್ಲೆಯಲ್ಲಿ ಶಂಘವು ಉತ್ತಮವಾಗಿ ಸಾಗುತ್ತಿದೆ. ಪ್ರತಿಯೊಬ್ಬ ಸದಸ್ಯರು ಸಂಘಕ್ಕೆ ತನ್ನದೇಯಾದ ಸೇವೆಯನ್ನು ನೀಡುತ್ತಿದ್ದಾರೆ. ಪ್ರತಿವರ್ಷದಂತೆ ಈ ಭಾರಿಯು ವಿದ್ಯಾರ್ಥಿಗಳಿಗೆ ಹಾಗೂ ಉತ್ತಮ ಸೀಕ್ಷಕರನ್ನು ಗೌರವಿಸುವ ಕಾರ್ಯವನ್ನು ಮಾಡುತ್ತಿದ್ದೇವೆ ಸಂಘದ ಸದಸ್ಯರ ಪ್ರೊತ್ಸಾಹವು ಇದೆ ಎಂದು ಹೇಳಿದರು.

ಈ ಕಾರ್ಯಕ್ರಮಕ್ಕೆ ಸಮಾಜ ಕಲ್ಯಾಣ ಸಚಿವರಾದ ಹೆಚ್.ಸಿ.ಮಹದೇವಪ್ಪ, ಹಾಗೂ ಜಿಲ್ಲೆಯ ಎಲ್ಲಾ ಶಾಸಕರು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಕಾರ್ಯದರ್ಶಿ ನಂಜುಂಡಸ್ವಾಮಿ, ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರದಾನ ಕಾರ್ಯದರ್ಶಿ ಮಹದೇವಸ್ವಾಮಿ, ಜಿಲ್ಲಾ ಖಜಾಂಚಿ ಪುಟ್ಟಸ್ವಾಮಿ, ಜಿಲ್ಲಾ ಉಪಾಧ್ಯಕ್ಷರಾದ ಮುರುಗೇಶ್‌ಕುಮಾರ್, ತ್ಯಾಗರಾಜು, ಗಜೇಂದ್ರ, ಸಾವಿತ್ರಿ ಭಾಪುಲೆ ಶಿಕ್ಷಕಿಯರ ಸಂಘದ ನೇತ್ರಾವತಿ. ಸುಶೀಲ.ಸಿ.ಎಂ, ನಂದೀನಿ, ತಾಲ್ಲೂಕು ಸಂಘದ ಅಧ್ಯಕ್ಷ ಎಂ.ಡಿ.ಮಹದೇವಯ್ಯ, ಕೃಷ್ಣಮೂರ್ತಿ, ಉಪನ್ಯಾಸಕರ ಸಂಘದ ಮೂರ್ತಿ, ಎನ್.ಎಸ್. ಮಹದೇವಸ್ವಾಮಿ, ದೈಹಿಕ ಶಿಕ್ಷರ ಸಂಘದ ಚಿಕ್ಕಬಸವಯ್ಯ, ಪತ್ತಿನ ಸಹಕಾರ ಸಂಘದ ನಂಜುಂಡಯ್ಯ ಹಾಗೂ ಇತರ ಸಂಘದ ಪದಾಧಿಕಾರಿಗಳು ಹಾಜರಿದ್ದರು.



## ಜಿಲ್ಲಾಧಿಕಾರಿ ಡಾ: ಕುಮಾರ ಸಲಹೆ

# ಸಮನ್ವಯದಿಂದ ಕಾರ್ಯನಿರ್ವಹಿಸಿ

**ಮಂಡ್ಯ:** 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಎಲ್ಲಾ ಸಮಿತಿಗಳಿಗೆ ಸ್ವಯಂ ಸೇವಕರ ಅವಶ್ಯಕತೆ ಇರುತ್ತದೆ. ಸ್ವಯಂ ಸೇವಾ ಸಮಿತಿ ಅವರು ಸಮನ್ವಯದಿಂದ ಕಾರ್ಯನಿರ್ವಹಿಸಿ ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ವಿವಿಧ ಸಮಿತಿಯ ಸಭೆ ನಡೆಸಿ ಮಾತನಾಡಿದರು. ಆಹಾರ, ವೇದಿಕೆ, ವಸತಿ ಸೇರಿದಂತೆ ಸಮಿತಿಗಳಿಗೆ ಅವಶ್ಯಕವಿರುವ ಸ್ವಯಂ ಸೇವಕರ ಅಂದಾಜು ಪಟ್ಟಿಯನ್ನು ಸಿದ್ಧಪಡಿಸುಕೊಳ್ಳಿ. ಎನ್.ಎಸ್.ಎಸ್, ಎನ್.ಸಿ.ಸಿ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ ಗಳಲ್ಲಿ ಜಿಲ್ಲೆಯಲ್ಲಿರುವ ಸಂಖ್ಯೆಯನ್ನು ಲೆಕ್ಕ ಮಾಡಿಕೊಂಡು ಪಕ್ಕದ ಜಿಲ್ಲೆಗಳಾದ ಮೈಸೂರು, ರಾಮನಗರ ಜಿಲ್ಲೆಗಳಿಂದ ಸಹ ಸ್ವಯಂಸೇವಕರನ್ನು ಪಡೆದುಕೊಳ್ಳಿ ಎಂದರು.

ನಿಯೋಜನೆಯಾಗುವ ಸ್ವಯಂ ಸೇವಕರ ಕೆಲಸ ಅವರ ಕೆಲಸದ ಬಗ್ಗೆ ತರಬೇತಿ ನೀಡಬೇಕು. ಇಲ್ಲವಾದಲ್ಲಿ ಅವರು ಸುಮ್ಮನೆ ತಾವು ತಿಳಿಸುವ ಸ್ಥಳದಲ್ಲಿ ನಿಂತುಕೊಳ್ಳುತ್ತಾರೆ ಎಂದರು.

ಪ್ರಚಾರ ಕೆಲಸಗಳು ಈಗಿನಿಂದಲೇ ಪ್ರಾರಂಭಿಸಿ ಕನ್ನಡ ಸಾಹಿತ್ಯ ಸಮ್ಮೇಳನದ ಬಗ್ಗೆ ಈಗಿನಿಂದಲೇ ಪ್ರಚಾರ ಪ್ರಾರಂಭಿಸಿ. ಮೈಸೂರು, ಶ್ರೀರಂಗಪಟ್ಟಣ, ಚಾಮರಾಜನಗರದಲ್ಲಿ ನಡೆಯುವ ದಸರಾ ಕಾರ್ಯಕ್ರಮದಲ್ಲಿ ಸಾಹಿತ್ಯ ಸಮ್ಮೇಳನದ ಪ್ರಚಾರ ಕಾರ್ಯಕ್ರಮ ಕೈಗೊಂಡರೆ ಹೆಚ್ಚಿನ ಜನರನ್ನು ತಲುಪಬಹುದು, ಸಮ್ಮೇಳನ ಕುರಿತು ಹಾಡು ಹಾಗೂ ವಿಶೇಷ ವ್ಯಕ್ತಿಗಳಿಂದ ಆಹ್ವಾನ ಕೋರುವ ಬಗ್ಗೆ ಆಡಿಯೋ ಸಿದ್ಧಪಡಿಸಿಕೊಳ್ಳಿ ಎಂದರು.

ಸಿನಿಮಾ ಥಿಯೇಟರ್ ಗಳಲ್ಲಿ ಸಣ್ಣ



ಸಮ್ಮೇಳನಕ್ಕೆ ಆಹ್ವಾನಿಸುವ ವಿಡಿಯೋ, ಸಾಮಾಜಿಕ ಜಾಲತಾಣಗಳಾದ ಇನ್ಸಟಾಗ್ರಾಂ, ಯು ಟ್ಯೂಬ್, ಫೇಸ್ ಬುಕ್, ಬಸ್, ರೈಲ್ವೆ, ವಿಮಾನ ನಿಲ್ದಾಣ, ಮೆಟ್ರೋ, ಎಫ್. ಎಂ. ಗಳಲ್ಲಿ ಪ್ರಚಾರ ಕೂಗೊಳ್ಳಲು ಯೋಜನೆ ರೂಪಿಸಿಕೊಳ್ಳಿ ಎಂದರು.

ಸರ್ಕಾರಿ ಕಚೇರಿಗಳಲ್ಲಿ ನಡೆಯುವ ಎಲ್ಲಾ ಪತ್ರ ವ್ಯವಹಾರಗಳಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ, ಕರ್ನಾಟಕ ಸಂಭ್ರಮ ಲೋಗೋವನ್ನು ಬಳಸುವಂತೆ ಸುತ್ತೋಲೆ ಹೊರಡಿಸಲಾಗುವುದು ಎಂದರು.

ಅಪರ ಜಿಲ್ಲಾಧಿಕಾರಿ ಡಾ: ಎಚ್.ಎಲ್ ನಾಗರಾಜು ಅವರು ಮಾತನಾಡಿ ಸಮ್ಮೇಳನದಲ್ಲಿ ಪ್ರತಿ ದಿನ 2 ಲಕ್ಷ ಜನರು ಭಾಗವಹಿಸುವ ನಿರೀಕ್ಷೆ ಇದೆ ಪ್ರತಿದಿನ ಎಷ್ಟು ಸ್ವಯಂ ಸೇವಕರು ಬೇಕಾಗಬಹುದು ಎಂದು ಅಂದಾಜಿಸಿ ಅವರಿಗೆ ಟೀ ಶರ್ಟ್, ಟೋಪಿ, ಊಟದ ವ್ಯವಸ್ಥೆ ಬಗ್ಗೆ ಯೋಜನೆ ರೂಪಿಸಿಕೊಳ್ಳಿ ಎಂದರು.

ನೊಂದಣಿ ಸಮಿತಿ ನೊಂದಣಿಗೆ ಅಂತಿಮ ದಿನಾಂಕ ನಿಗದಿ ಮಾಡಿ ಆನ್ ಲೈನ್ ಮೂಲಕ ನೊಂದಣಿಗೆ ಅವಕಾಶ ನೀಡುವುದು. ಇದರಿಂದ ಹಣದ ದುರ್ಬಳಕೆಯಾಗುವುದು, ನೊಂದಣಿ ರಶೀದಿ ನಕಲು ಆಗುವುದು ತಪ್ಪುತ್ತದೆ ಎಂದರು.

87 ಮುಖ್ಯ ರಸ್ತೆಯಲ್ಲಿ ಕಮಾನು ರಾಜ್ಯದ್ಯಾಂತ ಹೆಚ್ಚಿನ ಜನರು ಸಂಚರಿಸುವ 87 ಮುಖ್ಯ ರಸ್ತೆಗಳನ್ನು ಗುರುತಿಸಿ, ರಸ್ತೆಗೆ ಸಮ್ಮೇಳನದ ಪ್ರಚಾರ ನೀಡುವ ಕಮಾನು ಅಳವಡಿಸಬೇಕು ಎಂದರು.

ಸಾರಿಗೆ ಸಮಿತಿಯವರು ಜಿಲ್ಲೆಯಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅವಶ್ಯಕವಿರುವ ಸರ್ಕಾರಿ, ಖಾಸಗಿ ವಾಹನಗಳನ್ನು ಪಡೆದುಕೊಂಡು ವಸತಿ ಸ್ಥಳಗಳಿಂದ ಗಣ್ಯರನ್ನು ಕರೆತರಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡಿಕೊಳ್ಳಬೇಕು. ಕಂಟ್ರೋಲ್ ರೂಂ ತೆರೆದು ವಾಹನಗಳ ಸಂಚಾರದ ಮಾಹಿತಿಯನ್ನು ಲಭ್ಯವಿರುವಂತೆ ನೋಡಿಕೊಳ್ಳಬೇಕು ಎಂದರು.

ಸಭೆಯಲ್ಲಿ ಮನ್ ಮುಲ್ ಅಧ್ಯಕ್ಷ ಬೋರೆಗೌಡ, ಉಪವಿಭಾಗಾಧಿಕಾರಿ ಶಿವಮೂರ್ತಿ, ಉಪಕಾರ್ಯದರ್ಶಿ ಆನಂದ್ ಕನ್ನಡ ಸಾಹಿತ್ಯ ಸಮ್ಮೇಳನದ ಸಮನ್ವಯ ಸಮಿತಿ ಅಧ್ಯಕ್ಷೆ ಡಾ: ಮೀರಾ ಶಿವಲಿಂಗಯ್ಯ ಉಪಸ್ಥಿತರಿದ್ದರು.

# ಕೌಶಲ ಮಿಷನ್ ಸಮಿತಿ ಸಭೆ

**ಕೋಲಾರ:** ಕೋಲಾರ ಜಿಲ್ಲೆಯಲ್ಲಿ ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲು ಅಗತ್ಯ ಪೂರ್ವಭಾವಿ ತಯಾರಿ ಕಾರ್ಯಕ್ರಮ ಕೈಗೊಳ್ಳುವಂತೆ ಹಾಗೂ ಕೌಶಲ್ಯಾಭಿವೃದ್ಧಿ ಯೋಜನೆ ಜಾರಿ ಸಂಬಂಧ ಜಾರಿಗೊಳಿಸಲಾದ ಎಲ್ಲಾ ಕಾರ್ಯಕ್ರಮಗಳಲ್ಲಿ ಜಿಲ್ಲೆಯ ಪ್ರಗತಿಯನ್ನು ರಾಜ್ಯದ ಪ್ರಗತಿಯೊಂದಿಗೆ ಹೋಲಿಸಿ ತುಲಾನಾತ್ಮಕ ವರದಿಯನ್ನು ಜಿಲ್ಲಾ ಕೌಶಲ್ಯ ಮಿಷನ್ ಸಭೆಯಲ್ಲಿ ಮಂಡಿಸುವಂತೆ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಕೌಶಲ್ಯ ಮಿಷನ್ ಅಧ್ಯಕ್ಷರಾದ ಶ್ರೀ ಅಕ್ರಂ ಪಾಷಾರವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿಗಳು ಜಿಲ್ಲಾ ಕೌಶಲ್ಯ ಸಮಿತಿ ಸದಸ್ಯರೊಂದಿಗೆ ಇಲಾಖೆಯ ಯೋಜನಾ ನಿರೂಪಣೆ, ಉಸ್ತುವಾರಿ ಹಾಗೂ ಅನುಷ್ಠಾನ ಕಾರ್ಯಗಳನ್ನು ಕುರಿತು ಪ್ರಗತಿ ಪರಿಶೀಲನೆ ನಿರ್ವಹಿಸಿ ಕೌಶಲ್ಯಾಭಿವೃದ್ಧಿ ಚಟುವಟಿಕೆಗಳನ್ನು ಚುರುಕುಗೊಳಿಸಲು ಹಲವು ಸಲಹೆ ಸೂಚನೆಗಳನ್ನು ನೀಡಿದರು. ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಅಂತರ್ ಇಲಾಖಾ ಸಮನ್ವಯ ಅಗತ್ಯವೆಂದು ತಿಳಿಸಿದರು.

ಕೈಗಾರಿಕಾ ಉಪ ಸಮಿತಿ ಅಧ್ಯಕ್ಷರಾದ ಜಂಟಿ ನಿರ್ದೇಶಕರಿಗೆ ಜಿಲ್ಲೆಯ ಕೈಗಾರಿಕೆಗಲಿಗೆ ಅಗತ್ಯವಾದ ಮಾನವ ಸಂಪನ್ಮೂಲದ ಸರ್ವೇಕ್ಷಣೆ ಮಾಡುವಂತೆ ಹಾಗೂ ಜಿ.ಪಿ.ಡಿ.ಪಿ ಯೋಜನೆ ತಯಾರಿಸುವಾಗ ಕೌಶಲ್ಯಾಭಿವೃದ್ಧಿ ಚಟುವಟಿಕೆಗಳನ್ನು ಸೇರ್ಪಡೆಗೊಳಿಸುವಂತೆ ಸೂಚಿಸಿದರು. ಕೆನರಾಬ್ಯಾಂಕ್ ಸ್ವಯಂ ಉದ್ಯೋಗ ತರಬೇತಿ ಕೇಂದ್ರ, ಹಾಗೂ ಸಿಡಾಕ್ ಸಂಸ್ಥೆಗಳ ವತಿಯಿಂದ ಆಯೋಜಿಸಲಾಗುವ ಸ್ವಯಂ ಉದ್ಯೋಗ ಕಾರ್ಯಕ್ರಮಗಳ ಫಲಶ್ರುತಿಗಳ ಬಗ್ಗೆ ಯಶೋಗಾಥೆಯನ್ನು ಸಂದರ್ಶನ ಮಾಡಿ ಪ್ರಚಾರ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಕೃಷಿ ಸಂಬಂಧಿತ ವಿವಿಧ ಕೌಶಲ್ಯ ತರಬೇತಿಗಳನ್ನು ಪಟ್ಟಿ ಮಾಡಿ ಅನುಷ್ಠಾನ ಮಾಡುವಂತೆ ಕೃಷಿ ಸಂಬಂಧಿತ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಸಮಾಜ ಕಲ್ಯಾಣ, ಹಿದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ಇಲಾಖಾ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮೃದು ಕೌಶಲ್ಯ ಹಾಗೂ ಸ್ಪೋಕನ್ ಇಂಗ್ಲೀಷ್ ತರಬೇತಿ ಆಯೋಜಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿನ ಕೌಶಲ್ಯ ಕೊರತೆ ಹಾಗೂ ಬೇಡಿಕೆಯ ಮಾನವ ಸಂಪನ್ಮೂಲದ ಕುರಿತು ಪರಿಪೂರ್ಣ ವರದಿ ಸಲ್ಲಿಸುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗೆ ಸೂಚಿಸಿದರು. ಪ್ರಧಾನ ಮಂತ್ರಿ ವಿಶ್ವಕರ್ಮ ಯೋಜನೆಯ ತರಬೇತಿ ಪ್ರಗತಿ ಕುರಿತು ತರಬೇತಿ ಕೇಂದ್ರಗಳ ಮುಖ್ಯಸ್ಥರಿಂದ ಮಾಹಿತಿ ಪಡೆದರು. ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯ ಫಲ ಎಲ್ಲಾ ಅರ್ಹ ಫಲಾನುಭವಿಗಳಿಗೆ ತಲುಪಲು ಅಗತ್ಯ ಕ್ರಮವಹಿಸಲು ಸೂಚಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ನಿಖಿಲ್‌ರವರು ಜಿಲ್ಲೆಯಲ್ಲಿ ಕೌಶಲ್ಯ ಯುಕ್ತ ಪರಿಸರ ನಿರ್ಮಿಸಲು ಎಲ್ಲಾ ಸಂಬಂಧಿಸಿದ ಭಾಗೀದಾರರು ಸಮನ್ವಯ ಸಾಧಿಸುವಂತೆ ಸೂಚಿಸಿದರು.

ಸಭೆಗೆ ಕೌಶಲ್ಯಾಭಿವೃದ್ಧಿ ಇಲಾಖೆಯ ಎಲ್ಲಾ ಮಾಹಿತಿ ಒದಗಿಸಿದ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ. ಶ್ರೀನಿವಾಸ್ ಕೈಗಾರಿಕಾ ತರಬೇತಿ ಸಂಸ್ಥೆಗಳು ಜಿ.ಟಿ.ಟಿ.ಸಿ ಸಿಡಾಕ್ ಸಂಸ್ಥೆಗಳ ಪ್ರಗತಿ ಸಿ.ಎಂ.ಕೆ.ಕೆ.ವೈ ಯೋಜನೆಯ ಪ್ರಗತಿ ಉದ್ಯೋಗ ಮೇಳ ಶಿಶಿಕ್ಷು ಮೇಳ ಪಿ.ಎಂ. ವಿಶ್ವಕರ್ಮ ಯೋಜನೆ ಯುವನಿಧಿ ಯೋಜನೆ, ಕೈಗಾರಿಕಾ ಬೇಡಿಕೆ ಸಮೀಕ್ಷೆ ಹಾಗೂ ಕೌಶಲ್ಯಾಭಿವೃದ್ಧಿ ನಿಗಮದ ನೂತನ ಯೋಜನೆಗಳ ಕುರಿತು ಮಾಹಿತಿ ಒದಗಿಸಿದರು. ಸಭೆಯಲ್ಲಿ ಸಂಬಂಧಿಸಿದ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿ.ಎಂ.ಕೆ.ಕೆ.ವೈ ಹಾಗೂ ಪಿ.ಎಂ.ಕೆ.ವಿ.ವೈ ಕೇಂದ್ರಗಳ ಮುಖ್ಯಸ್ಥರು ಹಾಗೂ ವಿವಿಧ ಶೈಕ್ಷಣಿಕ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

**ರಾಮನಗರ:** ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು. ನಿಸಾರ್ ಅಹಮದ್ ಅವರು ಆ. 28 ಮತ್ತು 29ರಂದು ರಾಮನಗರ ಜಿಲ್ಲೆಯ ಪ್ರವಾಸ ಕೈಗೊಂಡಿದ್ದಾರೆ.

ಅವರು ಆ. 28ರಂದು ಬೆಳಿಗ್ಗೆ 9 ಗಂಟೆಗೆ ಬೆಂಗಳೂರಿನಿಂದ ನಿರ್ಗಮಿಸಿ ರಸ್ತೆ ಮೂಲಕ ರಾಮನಗರಕ್ಕೆ ಆಗಮಿಸುವರು. ನಂತರ ಬೆಳಿಗ್ಗೆ 11 ಗಂಟೆಗೆ ರಾಮನಗರ ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ವಸತಿ ನಿಲಯ, ಶಾಲೆಗಳಿಗೆ ಭೇಟಿ ಕಾಲೋನಿ ಅಭಿವೃದ್ಧಿ ಮತ್ತು ಇತರೆ ಕಾಮಗಾರಿಗಳ ಪರಿಶೀಲನೆ ನಡೆಸುವರು. ತದನಂತರ ಮಧ್ಯಾಹ್ನ 3 ಗಂಟೆಗೆ ಅಲ್ಪಸಂಖ್ಯಾತರ ಮಹಿಳಾ ಸರ್ಕಾರೇತರ ಸಂಸ್ಥೆಯವರು ಮತ್ತು ಪ್ರತಿಷ್ಠಿತ ಮಹಿಳಾ ಸಮಾಜ ಸೇವಕರಿಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ, ರಾಮನಗರದ ಪ್ರವಾಸಿ ಮಂದಿರದಲ್ಲಿ ವಾಸ್ತವ್ಯ ಹೂಡುವರು.

ಆ. 29ರಂದು ಬೆಳಿಗ್ಗೆ 10.30ಕ್ಕೆ ರಾಮನಗರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ವಕ್ಫ್ ಸಂಸ್ಥೆಗಳ ಮುತವಲ್ಲಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಾಗೂ ಜಿಲ್ಲೆಯ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್, ಪಾರ್ಸಿ ಸಮುದಾಯದವರಿಂದ ಕುಂದು ಕೊರತೆ ಅರ್ಜಿ ಸ್ವೀಕರಿಸುವರು.

ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಣದಲ್ಲಿ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು. ತದನಂತರ ಸಂಜೆ 4.30ಕ್ಕೆ ಪತ್ರಿಕಾಗೋಷ್ಠಿ ನಡೆಸುವರು. ನಂತರ ಸಂಜೆ 5.30ಕ್ಕೆ ರಾಮನಗರದಿಂದ ನಿರ್ಗಮಿಸಿ ಸಂಜೆ 7.30ಕ್ಕೆ ಬೆಂಗಳೂರು ತಲುಪುವರು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಮನಗರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿ ವತಿಯಿಂದ 2024-25ನೇ ಸಾಲಿನಲ್ಲಿ 05 ರಿಂದ 18 ವರ್ಷ ವಯೋಮಿತಿಯೊಳಗಿನ ಮಕ್ಕಳಿಗೆ ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕೃತಿಕ, ಸಂಗೀತ ಈ ನಾಲ್ಕು ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆ ಇರುವ ಮಕ್ಕಳಿಗೆ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಮಕ್ಕಳಿಗೆ 10,000 ರೂ. ಗಳನ್ನು ಒಳಗೊಂಡಿರುವ ಪ್ರಶಸ್ತಿಯನ್ನು ನೀಡಲಾಗುವುದು. ಈ ಸಂಬಂಧ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಒಟ್ಟು 08 ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ನೀಡಲಾಗುವುದು.

ಅರ್ಜಿ ಹಾಗೂ ನಿಗಧಿತ ದಾಖಲೆಗಳನ್ನು ದ್ವಿಪ್ರತಿಯಲ್ಲಿ ಸೆಪ್ಟೆಂಬರ್ 5ರೊಳಗೆ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪಂಚಾಯತ್ ಭವನ, 2ನೇ ಮಹಡಿ, ಬಿ.ಎಂ. ರಸ್ತೆ, ರಾಮನಗರ ಈ ಕಚೇರಿಗೆ ಸಲ್ಲಿಸಲು ಸೂಚಿಸಿದೆ.

ಹೆಚ್ಚಿನ ಮಾಹಿತಿಗೆ ಕಚೇರಿ ದೂ. ಸಂಖ್ಯೆ: 080-29524996/9844796445ಗೆ ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ(ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ (ಸಾಮಾನ್ಯ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) 2024-2025ನೇ ಸಾಲಿನ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾತಿ/ಪ.ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ. ಪ್ರವರ್ಗ-1, ಎಸ್.ಸಿ ಎಸ್.ಟಿ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ರೂ. 2.50 ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ರೂ 1 ಲಕ್ಷದೊಳಗಿರುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ವೆಬ್‌ಸೈಟ್‌ನಲ್ಲಿ ಸೆ.4ರೊಳಗೆ ಅರ್ಜಿ ಸಲ್ಲಿಸಬಹುದು. ತಾಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರಗಳಿಗಾಗಿ ಇಲಾಖೆಯ ವೆಬ್‌ಸೈಟ್‌ನ್ನು ನೋಡಬಹುದು ಹಾಗೂ ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಇ-ಮೇಲ್ ಮುಖಾಂತರ ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಥವಾ ತಾಲೂಕು ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೆ.ಆರ್.ನಗರ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯ ದೂ.ಸಂ:08233-262230 ಅಥವಾ ಸಹಾಯವಾಣಿ: 8050770004, 8050770005ನ್ನು ಸಂಪರ್ಕಿಸಬಹುದು ಎಂದು ಕೆ.ಆರ್.ನಗರ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಪ್ರವೇಶಾತಿಗೆ ಅರ್ಜಿ ಆಹ್ವಾನ

**ಮೈಸೂರು:** ನಂಜನಗೂಡು ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾತಿ, ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-2025ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಪ್ರವರ್ಗ-1, ಎಸ್‌ಸಿ ಎಸ್‌ಟಿ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ 2.50 ರೂ. ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ ಇತರೆ ಹಿಂದುಳಿದ ವರ್ಗಗಳ ಹಾಗೂ ಇತರೆ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ 1 ಲಕ್ಷದೊಳಗಿರುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ವೆಬ್‌ಸೈಟ್‌ನಲ್ಲಿ ಸೆ.4ರೊಳಗೆ ಅರ್ಜಿ ಸಲ್ಲಿಸಬಹುದು. ತಾಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರಗಳಿಗಾಗಿ ಇಲಾಖೆಯ ವೆಬ್‌ಸೈಟ್ ನೋಡಬಹುದು ಹಾಗೂ ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಇ-ಮೇಲ್ ಮುಖಾಂತರ ಅಥವಾ ನಂಜನಗೂಡು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ: 8050770004, 8050370005 ಸಂಪರ್ಕಿಸಬಹುದು ಎಂದು ನಂಜನಗೂಡು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಅರಿವು ಶೈಕ್ಷಣಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ, ಸ್ವಯಂ ಉದ್ಯೋಗ ಸಾಲ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆಗಳ ಸೌಲಭ್ಯ ಪಡೆಯಲು ಬಯಸುವವರಿಗೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಫಲಾಪೇಕ್ಷಿಗಳು ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್-ಜಿ ಜನಸ್ನೇಹಿ ಕೇಂದ್ರ, ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸೆಪ್ಟೆಂಬರ್ 16 ರೊಳಗೆ ಸಲ್ಲಿಸಬಹುದು.

ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಗಳಾಗಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಮಗದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನ ರೂ.3.50 ಲಕ್ಷಗಳು. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ.98000 ಮತ್ತು ನಗರ ಪ್ರದೇಶದವರಿಗೆ ರೂ.120000ಗಳ ಮಿತಿಯೊಳಗಿರಬೇಕು. ಸ್ವಾವಲಂಬಿ ಸಾರಥಿ ಯೋಜನೆಯಡಿ ವಯೋಮಿತಿ 21 ವರ್ಷಗಳಿಂದ 45 ವರ್ಷಗಳ ಮಿತಿಯಲ್ಲಿರಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ http://upparadevelopment.karnataka.gov.in ಅಥವಾ ದೂ.ಸಂ. 080-22252555 ಸಂಪರ್ಕಿಸಿ ಮಾಹಿತಿ ಪಡೆಯಬಹುದುಯೆಂದು ಉಪ್ಪಾರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ರಹ್ಮಶ್ರೀ ನಾರಾಯಣಗುರು ಅವರ ತತ್ವಾದರ್ಶಗಳನ್ನು ಪಾಲಿಸಿ

ಮಂಡ್ಯ: ನಾರಾಯಣ ಗುರುಗಳು ಕೇರಳದಲ್ಲಿ ಹುಟ್ಟಿ ಬೆಳೆದು ಸಾಧನೆ ಮಾಡಿದರು ಕೂಡ ಇವತ್ತು ಇಡೀ ನಾಡಿನಾದ್ಯಂತ ಅವರ ಆದರ್ಶಗಳು, ಚಿಂತನೆಗಳು ಹಾಗೂ ಅವರು ಹಾಕಿಕೊಟ್ಟಂತ ಮಾರ್ಗದರ್ಶನಗಳು ಬಹು ಅವಶ್ಯವಾಗಿದ್ದು, ಅವುಗಳನ್ನು ಇಂದಿಗೂ ಸಹ ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ನಗರದ ಗಾಂಧಿಭವನದಲ್ಲಿ ನಡೆದ 2024 - 25ನೇ ಸಾಲಿನ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಬ್ರಹ್ಮಶ್ರೀ ನಾರಾಯಣಗುರುರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ನಾಡಿಗೆ ಕೊಡುಗೆ ನೀಡಿದ ಎಲ್ಲಾ ಮಹಾತ್ಮರ ಜಯಂತಿಗಳನ್ನು ಸರ್ಕಾರದ ಕಾರ್ಯಕ್ರಮವಾಗಿ ಆಚರಿಸಲಾಗುತ್ತಿದ್ದೂ ಇಂದು ನಾವು ಬ್ರಹ್ಮಶ್ರೀ ನಾರಾಯಣಗುರು ಜಯಂತಿಯನ್ನು ಆಚರಿಸುತ್ತಿದ್ದೇವೆ. ನಾವು ಕೇವಲ ಜಯಂತಿಯನ್ನು ಆಚರಿಸಿ ಅವರ ಭಾವಚಿತ್ರಕ್ಕೆ ಪೂಜೆ ಮಾಡುವುದಕ್ಕೆ ಸೀಮಿತವಾಗದೆ, ಅವರು ನೀಡಿದಂತಹ ಕೊಡುಗೆಗಳು, ಅವರು ಇಟ್ಟುಕೊಂಡಿದ್ದಂತಹ ಒಳ್ಳೆಯ ಚಿಂತನೆ ಹಾಗೂ ಮೌಲ್ಯಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾಜಕ್ಕೆ ಒಳ್ಳೆಯ ಪ್ರಜೆಗಳಾಗಿ ಎಂದರು.

ಬ್ರಿಟಿಷರ ಆಳ್ವಿಕೆಯ ಕಾಲದಲ್ಲಿ ಇದ್ದಂತಹ ನಾರಾಯಣ ಗುರುಗಳು ಅಂದಿನ ಸಮಾಜದಲ್ಲಿದ್ದ ಮೂಢನಂಬಿಕೆ, ಅಸ್ಪೃಶ್ಯತೆಯನ್ನು ಧಿಕ್ಕರಿಸಿ ಅವುಗಳನ್ನು ಹೋಗಲಾಡಿಸುವಲ್ಲಿ ಹಾಗೂ ಒಳ್ಳೆಯ ಬದಲಾವಣೆ ತರುವ ನಿಟ್ಟಿನಲ್ಲಿ ಮಹತ್ತರ ಪಾತ್ರವಹಿಸಿದ್ದಾರೆ. ಆದ್ದರಿಂದ ಅವರನ್ನು ಸಾಮಾಜಿಕ ಸುಧಾರಣೆಯ ಹರಿಕಾರ ಎಂದು ಕರೆದರು ಸಹ ತಪ್ಪಾಗಲಾರದು ಎಂದರು.



ಕರಾವಳಿಯ ಭಾಗಗಳದ ಉಡುಪಿ, ಮಂಗಳೂರು, ಕೇರಳ ಮುಂತಾದ ಭಾಗದಲ್ಲಿ ನಾರಾಯಣ ಗುರುವನ್ನು ಯಾವುದೇ ಜಾತಿ, ಧರ್ಮಗಳ ಹೊರತಾಗಿ ಪ್ರತಿ ಮನೆ, ಬೀದಿಗಳಲ್ಲಿಯೂ ಕೂಡ ಅವರನ್ನು ದೈವ ಸ್ವರೂಪವಾಗಿ ಪೂಜೆಯ ಮೂಲಕ ಆರಾಧಿಸಲಾಗುತ್ತದೆ. ಅದನ್ನ ನಾವು ಅರಿತುಕೊಂಡು ಅವರ ಸಾಧನೆಯನ್ನು ಸ್ಮರಿಸಬೇಕು. ಜೊತೆಗೆ ತಮ್ಮ ಮಕ್ಕಳಿಗೂ ಅವರ ಜೀವನ ಚರಿತ್ರೆಯ ಬಗ್ಗೆ ತಿಳಿಸುವ ಕಾರ್ಯವಾಗಬೇಕು ಎಂದರು. ಮಹಾನ್ ದಾರ್ಶನಿಕರಾದ ಮತ್ತು ಯಾವುದೇ ಜಾತಿ, ಧರ್ಮ, ಭೇದಗಳಿಲ್ಲ ನಾವೆಲ್ಲರೂ ಕೂಡ ಮನುಷ್ಯರು ಎಂದು ತಿಳಿಸಿದ ಬ್ರಹ್ಮಶ್ರೀ ನಾರಾಯಣ ಗುರು ಅವರ ತತ್ವ ಹಾಗೂ ಚಿಂತನೆ ನಮ್ಮ ನಡೆ - ನುಡಿಯಲ್ಲಿ ಅಡಗಿರಬೇಕು. ಸಮಾಜದಲ್ಲಿರುವಂತಹ ಯಾವುದೇ ಮೂಢನಂಬಿಕೆಗಳು, ಅಸ್ಪೃಶ್ಯತೆ, ಮಡಿವಂತಿಕೆಗಳೆಲ್ಲವೂ ಹೋಗಲಾಡುವುದು ಶಿಕ್ಷಣದಿಂದ ಮಾತ್ರ ಸಾಧ್ಯ. ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಸುಧಾರಣೆ ತರಲು ಸಾಧ್ಯ ಎಂಬ ವಿಚಾರವನ್ನು ಬಲಿಷ್ಠವಾಗಿ ಪ್ರತಿಪಾದನೆ ಮಾಡಿದಂತಹ ಒಬ್ಬ ಮಹಾನ್ ಚಿಂತಕ ಇವರಾಗಿದ್ದಾರೆ ಎಂದರು.

ನಾರಾಯಣ ಗುರು ಅವರು ಮಹಿಳೆಯರ ಬಗ್ಗೆ ಅಪರವಾದ ಗೌರವವನ್ನು ಇಟ್ಟುಕೊಂಡು ಎಲ್ಲಾ ವರ್ಗದ ಮಹಿಳೆಯರಿಗೆ ಶಿಕ್ಷಣವನ್ನ ನೀಡಿದರೆ ಇಡೀ ಸಮಾಜವನ್ನ ಬೆಳಗಬಲ್ಲಳು. ಆಕೆಗೆ ಶಿಕ್ಷಣ ನೀಡಬೇಕು ಎಂದು ಪಣತೊಟ್ಟವರು. ಜೊತೆಗೆ ಮಡಿವಂತಿಕೆ ವಿರುದ್ದ ಹೋರಾಡಿ ಮಾನವರೆಲ್ಲರೂ ಒಂದೇ, ಒಂದೇ ರೀತಿಯಲ್ಲಿ ಮಾನವರೆಲ್ಲರೂ ಬದುಕಬೇಕು. ಮಾನವೀಯ ಮೌಲ್ಯಗಳಿಗಿಂತ ಮಿಗಿಲಾದ ಜಾತಿ ಇಲ್ಲ. ಇಂದು ಅವರು ಇಲ್ಲವಾದರು ಸಹ ಅವರ ತತ್ವಾದರ್ಶಗಳು ನಮ್ಮ ನಡುವೆ ಇಂದಿಗೂ ಜೀವಂತ ಹಾಗೂ ಪ್ರಸ್ತುತವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಂಡ್ಯ ವಿಶ್ವವಿದ್ಯಾನಿಲಯ ವಾಣಿಜ್ಯಶಾಸ್ತ್ರದ ಉಪನ್ಯಾಸಕ ಜಿ ವಿ ರಮೇಶ್ ಅವರು ಮಾತನಾಡಿ ಬ್ರಹ್ಮಶ್ರೀ ನಾರಾಯಣಗುರುಗಳು 1856 ಆಗಸ್ಟ್ 20 ರಂದು ಕೇರಳದಲ್ಲಿ ಜನಿಸಿದರು. ಇವರು ಸಮಯವನ್ನು ವ್ಯರ್ಥ ಮಾಡದೆ ಯೋಗ, ಧ್ಯಾನಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುತ್ತಿದ್ದರು. ಅಂದಿನ ಕಾಲದ ಅತೀ ಕೆಳ ವರ್ಗದಲ್ಲಿ ಇದ್ದಂತಹ ಕಡು ಬಡತನವನ್ನು, ಅಸ್ಪೃಶ್ಯತೆಯನ್ನು ಹೋಗಲಾಡಿಸಲು ಮುಂದಾದವರು ಎಂದು ತಿಳಿಸಿದರು.

ಕೆಳವರ್ಗದಲ್ಲಿ ಜನಿಸಿದ ನಾರಾಯಣ ಗುರು ಅವರು ಅಂದಿನ ಸಮಾಜದಲ್ಲಿದ್ದ ಎಲ್ಲಾ ರೀತಿಯ ಮೇಲ್ವರ್ಗದ ದೌರ್ಜನ್ಯಗಳ ವಿರುದ್ದ ಹೋರಾಡಿ, ಸಮಾಜದಲ್ಲಿ ಸಮಾನತೆಯನ್ನು ತರುವಲ್ಲಿ ಬಹಳವಾಗಿ ಶ್ರಮಿಸಿದ್ದಾರೆ. ಕೆಳ ವರ್ಗದ ಹೆಣ್ಣುಮಕ್ಕಳ ಮೇಲೆ ಆಗುತ್ತಿದ್ದಂತಹ ಶೋಷಣೆಗಳನ್ನು ಹೋಗಲಾಡಿಸಲು ಪ್ರಮುಖ ಪಾತ್ರ ವಹಿಸಿದವರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಂಡ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ ಬಿ ವಿ ನಂದೀಶ್, ಮೈಶುಗರ್ ಕಾರ್ಖಾನೆಯ ಮಾಜಿ ಅಧ್ಯಕ್ಷ ರಾಮಲಿಂಗಯ್ಯ, ಮಂಡ್ಯ ಜಿಲ್ಲಾ ಆರ್ಯ ಈಡಿಗರ ಸಂಘದ ಗೌರವಾಧ್ಯಕ್ಷ ಡಾ. ಎಂ ವಿ ಸತ್ಯನಾಥ್, ಅಧ್ಯಕ್ಷ ಅಪ್ಪಾಜಿಗೌಡ, ಉಪಾಧ್ಯಕ್ಷರುಗಳಾದ ಹೆಚ್ ದಾಸೇಗೌಡ, ಎಂ ಪಿ ಅರುಣ ಕುಮಾರ್, ಎಂ ವಿ ಪುಟಾಸ್ವಾಮಿ, ಪ್ರಧಾನ ಕಾರ್ಯದರ್ಶಿ ಜಿ ಸಿ ರಾಜ್ ಕುಮಾರ್, ಖಜಾಂಚಿ ಟಿ ಅರವಿಂದ ಕುಮಾರ್, ಸಹಕಾರ್ಯದರ್ಶಿಗಳಾದ ಮಾದೇವ, ಸಿ ಸೋಮಶೇಖರ್, ಸಂಘಟನಾ ಕಾರ್ಯದರ್ಶಿ ಟಿ ಎಸ್ ಶ್ರೀನಿವಾಸ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಪುರಸಭೆ ಕಾರ್ಯಾಲಯ, ಚಂದಾಪುರ
ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ- 560081
Email: ka.chandapura.tmc@gmail.com Phone No: 080-27832411
ಸಂಖ್ಯೆ: ಚಂ.ಪು.ಕಾ/ತಾ.ಶಾ/ಕೆಪಿಪಿಪಿ/ಟೆಂ/02/2024-25 ದಿನಾಂಕ: 21.08.2024

ಟೆಂಡರ್ ಪ್ರಕಟಣೆ

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳನ್ವಯ 2000ರ ಪ್ರಕಾರ ಸ್ಟಾಂಡರ್ಡ್ ಡಾಕ್ಯೂಮೆಂಟ್ ನಿಯಮಗಳನ್ವಯ, 2024-25ನೇ ಎಸ್.ಎಫ್.ಸಿ ಮುಕ್ತ ನಿಧಿ, ಪುರಸಭಾ ನಿಧಿಯಡಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಲೋಕೋಪಯೋಗಿ ಇಲಾಖೆಯ ನೊಂದಾಯಿತ ಅರ್ಹ ದರ್ಜೆ ಗುತ್ತಿಗೆದಾರರಿಂದ ಕಾಮಗಾರಿಗಳನ್ನು ನಿರ್ವಹಿಸಲು ಕೆಪಿಪಿಪಿ ಪೋರ್ಟಲ್ ಮುಖಾಂತರ ಆಹ್ವಾನಿಸಲಾಗಿದೆ. ಅರ್ಹ ಗುತ್ತಿಗೆದಾರರು ಇಲಾಖಾ ವೆಬ್‌ಸೈಟ್ https://kppp.karnataka.gov.in ನಲ್ಲಿ ಟೆಂಡರ್ ವಿವರಗಳನ್ನು ಪಡೆದು ಭಾಗವಹಿಸಬಹುದು. **(All Technical General Conditions & other Conditions as Per Bid Document).**

| ಕ್ರ.ಸಂ | ಇಂಡೆಂಟ್ ಸಂಖ್ಯೆ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | DMA/2024-25/OW/WORK_INDENT25523/CALL-2 | 1.92 |
| 2 | DMA/2024-25/WS/WORK_INDENT25615/CALL-2 | 2.08 |

**ವೇಳಾಪಟ್ಟಿ:** 1) ಕೆಪಿಪಿಪಿ ಪೋರ್ಟಲ್ ಮೂಲಕ ದರಗಳನ್ನು ನಮೂದಿಸಿ ಸಲ್ಲಿಸುವ ಕೊನೆಯ **ದಿನಾಂಕ 29.08.2024 ಸಂಜೆ 5.00 ಗಂಟೆವರೆಗೆ.** 2) ಸ್ವೀಕೃತವಾದ ಟೆಂಡರ್‌ನ್ನು ತೆರೆಯುವ ದಿನಾಂಕ ಮತ್ತು ಸಮಯ: **30.08.2024 ರಂದು ಸಂಜೆ 5.30 ಗಂಟೆ,** 3) ಹೆಚ್ಚಿನ ವಿವರಗಳಿಗಾಗಿ ಪುರಸಭೆಯ ಕಿರಿಯ ಅಭಿಯಂತರರಿಂದ ಅಥವಾ ದೂರವಾಣಿ ಸಂಖ್ಯೆ:**080-27832411** ರಲ್ಲಿ ಮಾಹಿತಿ ಪಡೆಯಬಹುದು.

ಸಹಿ/-
ಆಡಳಿತಾಧಿಕಾರಿ
ಪುರಸಭೆ ಚಂದಾಪುರ ಹಾಗೂ ಉಪವಿಭಾಗಾಧಿಕಾರಿಗಳು,
ಬೆಂಗಳೂರು ದಕ್ಷಿಣ ಉಪ ವಿಭಾಗ

ಸಹಿ/-
ಮುಖ್ಯಾಧಿಕಾರಿ
ಪುರಸಭೆ ಚಂದಾಪುರ

ವಾಸಾಸಂಇ/ವಾ.ಪ್ರ/1597/ಶಿರಡಿ ಸಾಯಿ/2024-25

## ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಉದ್ಯೋಗಿನಿ, ಧನಶ್ರೀ, ಚೇತನಾ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಲು https://sevasindhu.karnataka.gov.in ನಲ್ಲಿ ಸೆಪ್ಟೆಂಬರ್ 21 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಅಭಿವೃದ್ಧಿ ನಿರೀಕ್ಷಕರು, ಕನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿ ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ವೆಂಕಟೇಶರೆಡ್ಡಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊಸ ಜವಳಿ ನೀತಿಯಲ್ಲಿ ಅಳವಡಿಸಿಕೊಳ್ಳಬಹುದಾದ ಸೂಚನೆಗಳು

**ಕೋಲಾರ:** ಜವಳಿ ಮತ್ತು ಸಿದ್ಧ ಉಡುಪು ನೀತಿ 2019-24 ಅವಧಿಯು ದಿನಾಂಕ ನವೆಂಬರ್ 03ಕ್ಕೆ ಮುಕ್ತಾಯವಾಗುತ್ತಿದ್ದು, ಹೊಸ ಜವಳಿ ನೀತಿ 2024-29ನ್ನು ಸಿದ್ದಪಡಿಸಲು ಜವಳಿ, ಸಿದ್ಧಉಡುಪು ವಲಯಗಳ ಉದ್ದಿಮೆ, ಸಂಘ-ಸಂಸ್ಥೆಗಳ ಅಭಿಪ್ರಾಯ, ಸಲಹೆಗಳನ್ನು ಪಡೆಯಲು ಆಗಸ್ಟ್ 23 ರಂದು ಅಪರಾಹ್ನ 3.00 ಗಂಟೆಗೆ ಜಿಲ್ಲಾಡಳಿತ ಭವನ, ಟಮಕ ಅಂಚೆ, ಕುಂಬಾರಹಳ್ಳಿ ಗ್ರಾಮದ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರ ಕಛೇರಿಯಲ್ಲಿ ಸಂವಾದ ಸಭೆ ಕರೆಯಲಾಗಿದ್ದು, ಈ ಸಭೆಗೆ ''ಜವಳಿ ಮೌಲ್ಯ ಸರಣಿಯ ಜಿನ್ನಿಂಗ್ ಪ್ರೆಸ್ಸಿಂಗ್, ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರಿಕೆ, ಟೆಕ್ನಿಕಲ್ ಟೆಕ್ಸ್ಟೈಲ್, ಪ್ರೋಸೆಸ್ಸಿಂಗ್, ಸಿದ್ಧ ಉಡುಪು ತಯಾರಿಕೆ, ರೇಷ್ಮೆ ವಿಭಾಗ, ಉಣ್ಣೆ ವಿಭಾಗ ಇತರೆ ಜವಳಿ ಕ್ಷೇತ್ರಕ್ಕೆ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಹೊಸ ಜವಳಿ ನೀತಿಯಲ್ಲಿ ಅಳವಡಿಸಿಕೊಳ್ಳಬಹುದಾದ ಸಲಹೆ, ಸೂಚನೆಗಳ ಕುರಿತು'' ಅವಶ್ಯಕ ಮಾಹಿತಿಯೊಂದಿಗೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ದೂರವಾಣಿ ಸಂಖ್ಯೆ: 08152-243519ಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದುಯೆಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು

**ಮಂಡ್ಯ:** ಮದ್ದೂರು ತಾಲ್ಲೂಕಿನ ಶಿವಾರಗುಡ್ಡ ವಿದ್ಯಾಪೀಠಕ್ಕೆ ಸೇರಿರುವ 12 ಎಕರೆ ಗದ್ದೆಯಲ್ಲಿ ಬೆಳೆ ಬೆಳೆಯಲು 3 ವರ್ಷಗಳ ಅವಧಿಗೆ ಹರಾಜು ಮಾಡಲು ಸೆಪ್ಟೆಂಬರ್ 12 ರಂದು ಬೆಳಿಗ್ಗೆ 11.30 ಗಂಟೆಗೆ ಶಿವಾರಗುಡ್ಡ ವಿದ್ಯಾಪೀಠದಲ್ಲಿ ಬಹಿರಂಗ ಹರಾಜು ಏರ್ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಮಂಡ್ಯ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿಯ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ವ್ಯಕ್ತಿ ಪತ್ತೆಗಾಗಿ ಮನವಿ

**ಕೋಲಾರ:** ಕಾಣೆಯಾದ ವ್ಯಕ್ತಿಯ ಚಹರೆ: ಹೆಸರು: ಹುಮೇರ ಬತ್ತುಲ್, ತಂದೆಯ ಹೆಸರು. ಏಜಾಜ್ ಪಾಷ, 25 ವರ್ಷ, ಮದರಸಾದಲ್ಲಿ ಶಿಕ್ಷಕಿ, ಮುಸ್ಲಿಂ ಜನಾಂಗ, ಗುಂಡು ಮುಖ, ದೃಢವಾದ ಮೈಕಟ್ಟು, ಗೋಧಿ ಮೈಬಣ್ಣ, 5.4 ಅಡಿ ಎತ್ತರ, ಹಿಂದಿ, ಉರ್ದು ಭಾಷೆ ಮಾತನಾಡುತ್ತಾರೆ. ಪಿಂಕ್ ಬಣ್ಣದ ಸರಾಯಿ, ಅದರ ಮೇಲೆ ಕಪ್ಪು ಬಣ್ಣದ ಬುರ್ಕಾ ಧರಿಸಿರುತ್ತಾಳೆ. ಈ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಗಲ್ ಪೇಟೆ ಪೊಲೀಸ್ ಠಾಣೆಯ ದೂ.ಸಂ: 08152-240596 ಗೆ ಸಂಪರ್ಕಿಸಬಹುದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ರಹ್ಮಾಕುಮಾರೀಸ್‌ನಲ್ಲಿ 'ಮೀಡಿಯಾ ವಿಂಗ್' ಕಾರ್ಯಕ್ರಮ

**ಮೈಸೂರು:** ನಗರದ ಯಾದವಗಿರಿ (ಆಕಾಶವಾಣಿ ಹತ್ತಿರ)ಯಲ್ಲಿರುವ ಪ್ರಜಾಪಿತ ಈಶ್ವರೀಯ ವಿಶ್ವ ವಿದ್ಯಾಲಯದ ವತಿಯಿಂದ ಮೈಸೂರಿನ ಪತ್ರಕರ್ತರಿಗೆ ರಕ್ಷಾಬಂಧನದ ಪ್ರಯುಕ್ತ ಇತ್ತೀಚೆಗೆ 'ಮೀಡಿಯಾ ವಿಂಗ್' ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಸಭೆಯನ್ನುದ್ದೇಶಿಸಿ ಮಾತನಾಡಿದ ಹಿರಿಯ ಪತ್ರಕರ್ತ ಸಿ.ವಿ.ಶ್ರೀನಿವಾಸ ರಾವ್ ವಿಶ್ವದ ಅತಿ ದೊಡ್ಡ ಸಂಸ್ಥೆ ಎಂದರೆ ಪ್ರಜಾಪಿತ ಬ್ರಹ್ಮಾಕುಮಾರಿ ಸಂಸ್ಥೆ. ಎಷ್ಟೋ ಜನ ಮಹಿಳೆಯರು ತ್ಯಾಗ ಮಾಡಿ ಸಂಸ್ಥೆ ನಡೆಸುತ್ತಿರುವುದು ನಿಜಕ್ಕೂ ಶ್ಲಾಘನೀಯ. ಈ ಸಂಸ್ಥೆಯ ಮುಖ್ಯ ಸಂಚಾಲಕಿ ಬಿಕೆ ಲಕ್ಷ್ಮೀಜಿಯವರಿಗೆ ಅದರಲ್ಲೂ ಪತ್ರಕರ್ತರನ್ನು ಕಂಡರೆ ಅವಿನಾಭಾವ ಸಂಬಂಧ. ಈ ವರ್ಷ ಮಹಾಶಿವರಾತ್ರಿ ಸಂದರ್ಭದಲ್ಲಿಯೂ ಎಲ್ಲ ಪತ್ರಕರ್ತರನ್ನು ಕರೆದು ಗೌರವಾದರಗಳಿಂದ ಸಂತೈಸಿದರು. ಒಬ್ಬ ಮಹಿಳೆ ಐದು ಜಿಲ್ಲೆಗಳಲ್ಲಿ ಮುಖ್ಯ ಸಂಚಾಲಕಿಯಾಗಿ ಕಾರ್ಯ ನಿರ್ವಹಿಸುವುದು ಎಂದರೆ ಸುಲಭದ ಮಾತಲ್ಲ. ವಾರಕ್ಕೆ ಒಂದರೆಡು ದಿನ ಇಲ್ಲಿಗೆ ಬಂದು ಅವರು ಹೇಳುವ ಮುರುಳಿಯನ್ನು ಕೇಳಿ. ನಿಮಗೆಲ್ಲ ಒಳ್ಳೆಯದಾಗುತ್ತೆ. ನಮ್ಮ ದೇಶದಲ್ಲಿ ಉತ್ತಮ ಸಂಸ್ಕಾರ, ದೇವಸ್ಥಾನಗಳು, ಸನ್ಯಾಸಿನಿಯರು, ಯೋಗಪುರುಷರು ಇರುವಷ್ಟು ಜನ ಬೇರೆ ಯಾವ ದೇಶದಲ್ಲೂ ಇಲ್ಲ ಎಂದು ತಿಳಿಸಿದರು. ಬಿಕೆ ರಶ್ಮಿಯವರು ರಕ್ಷಾಬಂಧನದ ಮಹತ್ವವನ್ನು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಕೆ ಲಕ್ಷ್ಮೀಜಿ ವಹಿಸಿದ್ದರು. ವೇದಿಕೆಯಲ್ಲಿ ಬಿಕೆ ಸಾಧನಾ, ಬಿಕೆ ರಶ್ಮಿ ಇದ್ದರು. ನಿರೂಪಣೆಯನ್ನು ಹಿರಿಯ ಸಹೋದರ ಬಿಕೆ ರಂಗನಾಥ್ ಮಾಡಿದರು. ಕಾರ್ಯಕ್ರಮ ಮುಗಿದ ನಂತರ ಬಂದ ಎಲ್ಲ ಪತ್ರಕರ್ತರಿಗೆ ಭೂರಿ ಭೋಜನದ ವ್ಯವಸ್ಥೆ ಮಾಡಲಾಗಿತ್ತು.

# ಸೆ.1 ರಿಂದ ಮನೆಮನೆಗೆ ಜಾನುವಾರು ಗಣತಿ

**ಚಿಕ್ಕಬಳ್ಳಾಪುರ:** ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ ದೇಶದಲ್ಲಿ 21ನೇ ಜಾನುವಾರು ಗಣತಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 1 ಕ್ಕೆ ದೇಶಾದ್ಯಂತ ಆರಂಭಗೊಳ್ಳುತ್ತಿದೆ. ಇದುವರೆಗೆ ಪುಸ್ತಕದಲ್ಲಿ ಗಣತಿ ಮಾಹಿತಿ ನಮೂದಿಸುತ್ತಿದ್ದ ಗಣತಿಕಾರರು ಈ ಬಾರಿ ಮೊದಲ ಬಾರಿಗೆ ಸ್ಮಾರ್ಟ್‌ಫೋನ್ ಬಳಸಿ ಮನೆ ಮನೆಗೆ ತೆರಳಿ ಗಣತಿಯಲ್ಲಿ ತೊಡಗಿಸಿಕೊಳ್ಳಲಿದ್ದಾರೆ. ಕೇಂದ್ರ ಪಶುಸಂಗೋಪನ ಇಲಾಖೆಯಿಂದಲೇ ''21 ಐತಜಣತಥಿಇ ಥಿಜಟಣ ಎನ್ನುವ ಪ್ರತ್ಯೇಕ ಆ?ಯಪ್ ಅಭಿವೃದ್ಧಿ ಪಡಿಸಲಾಗಿದ್ದು, ಬಳಸುವ ಬಗ್ಗೆಯೂ ತರಬೇತಿ ನೀಡಲಾಗಿದೆ.

ಹಿಂದೆ ಪುಸ್ತಕದಲ್ಲಿ 200 ಕಾಲಂಗಳನ್ನು ಭರ್ತಿ ಮಾಡಬೇಕಾಗಿತ್ತು, ಈ ಬಾರಿ ಚುಟುಕಾಗಿ ಆ?ಯಪ್ ಮೂಲಕ ಮಾಹಿತಿ ನಮೂದಿಸಬಹುದು. ನೆಟ್‌ವರ್ಕ್ ಇಲ್ಲದಿದ್ದರೂ ಈ ಆ?ಯಪ್ ನೆಟ್‌ವರ್ಕ್ ಪ್ರದೇಶಕ್ಕೆ ಬರುತ್ತಿದ್ದಂತೆಯೇ ಕೇಂದ್ರ ಸರ್ವರ್ ಜತೆ ಮಾಹಿತಿಯನ್ನು ಹಂಚಿಕೊಳ್ಳುವಂತೆ ವಿನ್ಯಾಸ ಪಡಿಸಲಾಗಿದೆ. ರಾಜ್ಯದ ಪಶುಸಂಗೋಪನಾ ಇಲಾಖೆಯೂ 4 ತಿಂಗಳ ಕಾಲ ನಡೆಯುವ ಈ ಬೃಹತ್ ಸಮೀಕ್ಷಾ ಕಾರ್ಯಕ್ರಮಕ್ಕೆ ಸಜ್ಜಾಗುತ್ತಿದೆ. ಮಾಸ್ಟರ್ ಟ್ರೇನರ್ ಗಳ ತರಬೇತಿ ಪೂರ್ಣಗೊಂಡಿದ್ದು, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಯ ಮೇಲ್ವಿಚಾರಕರಿಗೆ ತರಬೇತಿಯನ್ನು ಆಗಸ್ಟ್ 20 ರಂದು ಚಿಕ್ಕಬಳ್ಳಾಪುರ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಸಭಾ ಭವನದಲ್ಲಿ ಆಯೋಜಿಸಲಾಗಿತ್ತು.

ಆಗಸ್ಟ್ 22 ರಂದು ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಗಣತಿದಾರರಿಗೆ ಜಿಲ್ಲೆಯ ಮಾಸ್ಟರ್ ಟ್ರೈನರ್‌ಗಳ ಮೂಲಕ ತರಬೇತಿ ಕಾರ್ಯಕ್ರಮವನ್ನು ಚಿಕ್ಕಬಳ್ಳಾಪುರ ಜಿಲ್ಲಾ ಸಭಾಂಗಣ, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಪಶು ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗುವುದು.

1919 ರಿಂದ ಜಾನುವಾರು ಗಣತಿ ನಡೆಯುತ್ತಾ ಬಂದಿದ್ದು, ಕಳೆದ 100 ವರ್ಷಗಳಲ್ಲಿ 20 ಗಣತಿ ನಡೆದಿದೆ. ಇದು 21ನೇ ಜಾನುವಾರು ಗಣತಿಯಾಗಿರುತ್ತದೆ. ಕರ್ನಾಟಕದಲ್ಲಿನ ಎಲ್ಲ ಮನೆಗಳಿಗೆ ಗಣತಿದಾರರು ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳುವರು. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 72 ಗಣತಿದಾರರು, 20 ಮೇಲ್ವಿಚಾರಕರು ಇರುತ್ತಾರೆ. ಗಣತಿದಾರರು ಮನೆ ಮನೆಗೆ ತೆರಳಿದರೆ ಮೇಲ್ವಿಚಾರಕರು ಹಾಗೂ ನೋಡಲ್ ಅಧಿಕಾರಿಗಳು ಅದರ ಒಟ್ಟು ಉಸ್ತುವಾರಿ ವಹಿಸಿಕೊಳ್ಳುವರು. ನಗರ ಭಾಗದಲ್ಲಿ 6000 ಮನೆಗಳಿಗೊಬ್ಬ ಗಣತಿದಾರ ಇದ್ದರೆ, ಗ್ರಾಮೀಣ ಭಾಗದಲ್ಲಿ 4500 ಮನೆಗಳಿಗೊಬ್ಬ ಗಣತಿದಾರ ಇರುತ್ತಾರೆ.

ಯಾವ ತಳಿಯ ಜಾನುವಾರುಗಳು? ಯಾವ ವಯಸ್ಸು, ಎಷ್ಟು ರೈತರು, ಯಾವ ವರ್ಗದ ರೈತರು, ಎಷ್ಟು ಮಹಿಳೆಯರು ಇದರಲ್ಲಿ ತೊಡಗಿಸಿಕೊಂಡಿದ್ದಾರೆ ಎಂಬುದನ್ನು ತಿಳಿದುಕೊಳ್ಳಲಾಗುತ್ತದೆ. ಈ ಮೂಲಕ ಸರ್ಕಾರ ತಮ್ಮ ಮುಂದಿನ ಯೋಜನೆಯನ್ನು ಸಿದ್ದಪಡಿಸುವುದು ಇದರ ಮುಖ್ಯ ಉದ್ದೇಶ. ರೈತರು ಹಾಗೂ ಹೈನುಗಾರಿಕೆ ಕ್ಷೇತ್ರಗಳಿಗೆ ಬೇಕಾದ ನೀತಿ, ಕಾರ್ಯಕ್ರಮ ನಿರೂಪಿಸುವುದಕ್ಕಾಗಿ ಗಣತಿಯ ಅಂಶಗಳು ಬಳಕೆಯಾಗುತ್ತವೆ. ಮನೆಗಳಲ್ಲಿ ಸಾಕಲಾಗುವ ದನ, ಎತ್ತು ಎಮ್ಮೆ, ಕೋಣ, ಆಡು, ಕುರಿ, ಕೋಳಿ, ನಾಯಿ, ಕುದುರೆ, ಎಮು ಹಾಗೂ ಆಸ್ಟ್ರಿಚ್ ಹಕ್ಕಿಗಳ ಮಾಹಿತಿ ಪಡೆಯಲಾಗುತ್ತದೆ. ಬೀಡಾಡಿ ದನ, ನಾಯಿಗಳ ಮಾಹಿತಿಯನ್ನೂ ಸೇರಿಸಲಾಗುತ್ತದೆ. ದೇವಸ್ಥಾನದಲ್ಲಿ ಆನೆ, ದನ ಸಾಕುವುದಿದ್ದರೆ, ಗೋಶಾಲೆಗಳಿದ್ದರೆ ಮಾಹಿತಿ ಪಡೆಯಲಾಗುತ್ತದೆ. 10 ಕ್ಕಿಂತ ಜಾಸ್ತಿ ದನಗಳಿದ್ದರೆ, 1000 ಕ್ಕಿಂತ ಜಾಸ್ತಿ ಕೋಳಿ ಸಾಕಿದರೆ, 50 ರ ಮೇಲ್ಪಟ್ಟು ಆಡು ಸಾಕಣೆಯಿದ್ದರೆ ಅವುಗಳನ್ನು ಫಾರಂ ಎಂದು ಪರಿಗಣಿಸಿ ಮಾಹಿತಿ ನಮೂದಿಸಿಕೊಳ್ಳಲಾಗುವುದು. ''ಮನೆಮನೆಗೆ ಜಾನುವಾರು ಗಣತಿದಾರರು ಬರಲಿದ್ದಾರೆ. ಇದು ರೈತರು ಜಾನುವಾರು ಸಾಕಾಣಿಕೆದಾರರಿಗೆ ಬೇಕಾದ ಯೋಜನೆಗಳನ್ನು ರೂಪಿಸಲು ಸಹಾಯಕವಾಗುತ್ತದೆ. ಹಾಗಾಗಿ ಸೂಕ್ತ ಮಾಹಿತಿಗಳನ್ನು ಗಣತಿದಾರರಿಗೆ ಸಾರ್ವಜನಿಕರು ನೀಡಿ ಸಹಕರಿಸಬೇಕು ಎಂದು ಉಪನಿರ್ದೇಶಕರು(ಆಡಳಿತ), ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಚಿಕ್ಕಬಳ್ಳಾಪುರ ರವರು ತಿಳಿಸಿದರು.



**ಮೈಸೂರು ರಾಘವೇಂದ್ರ ಪ್ರತಿಷ್ಠಾನದ ವತಿಯಿಂದ ಅದರ ಸಂಸ್ಥಾಪಕರಾದ ಅಮೋಘ ವರ್ಷ ನಾಗರಾಜ ಅವರು ಬರೆದಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಪುಸ್ತಕವನ್ನು ಆದರ್ಶ ಸೇವಾ ಸಂಘದ ಮಾಲೀಕರಾದ ಜಿ.ಆರ್.ನಾಗರಾಜ ಅವರು ಅವರ ನಿವಾಸದಲ್ಲಿ ಇತ್ತೀಚೆಗೆ ಬಿಡುಗಡೆಗೊಳಿಸಿದರು.**

# ಸೆ.13ಕ್ಕೆ ಉದ್ಯೋಗ ಮೇಳ

## ಆನ್‌ಲೈನ್‌ನಲ್ಲಿ ನೋಂದಾಯಿಸಲು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಸಲಹೆ

**ವಿಜಯಪುರ :** ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವು ಸೆಪ್ಟೆಂಬರ್ 13ರಂದು ದೇವನಹಳ್ಳಿ ತಾಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗುತ್ತಿದ್ದು ಆಸಕ್ತ ಉದ್ಯೋಕಾಂಕ್ಷಿಗಳು ಹಾಗೂ ಉದ್ಯೋಗದಾತರು ಉದ್ಯೋಗ ಮೇಳದಲ್ಲಿ ಭಾಗವಹಿಸಲು ಆನ್ಲೈನ್ ಪೋರ್ಟಲ್ ನಲ್ಲಿ ನೋಂದಾಯಿಸಿಕೊಳ್ಳಿ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅವರು ಹೇಳಿದರು.

ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರ ಮಹಾತ್ವಾಕಾಂಕ್ಷಿ ಆಶಯದೊಂದಿಗೆ ಉದ್ಯೋಗ ಮೇಳ ಆಯೋಜಿಸಲಾಗುತ್ತಿದೆ. ಜಿಲ್ಲೆಯಲ್ಲಿ ಹೆಚ್ಚಿನ ಕೈಗಾರಿಕಾ ಪ್ರದೇಶವಿದ್ದು ಉದ್ಯೋಗಾವಕಾಶಗಳು ಕೂಡ ಹೆಚ್ಚು ಸೃಷ್ಟಿ ಆಗುತ್ತಿವೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ದೊರಕಿಸಿಕೊಡುವ ನಿಟ್ಟಿನಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗುತ್ತಿದೆ. ಉದ್ಯೋಗ ಮೇಳದಲ್ಲಿ 100 ಕ್ಕಿಂತ ಹೆಚ್ಚು ವಿವಿಧ ಕಂಪನಿಗಳು ಭಾಗವಹಿಸುವ ನಿರೀಕ್ಷೆ ಇದೆ. ಖಾಸಗಿ ಕಂಪನಿಗಳು ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ವಿವಿಧ ಜಿಲ್ಲೆಗಳ ಉದ್ಯೋಗಾಂಕ್ಷಿಗಳು ಕೂಡ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅವಕಾಶವಿದೆ ಎಂದರು.

ಉದ್ಯೋಗಾಕಾಂಕ್ಷಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲು ಆನ್ಲೈನ್ ಪೋರ್ಟಲ್ https://bangalorerural.nic.in/en/job-fair/ ನಲ್ಲಿ ಸ್ವ-ವಿವರದೊಂದಿಗೆ ನೊಂದಾಯಿಸಬಹುದಾಗಿದೆ. ಎಸ್.ಎಸ್.ಎಲ್.ಸಿ , ಪಿಯುಸಿ, ಐಟಿಐ, ಡಿಪ್ಲೋಮೋ, ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಮತ್ತು ವಿವಿಧ ತರಬೇತಿ ಸಂಸ್ಥೆಗಳಲ್ಲಿ ಕೌಶಲ್ಯ ತರಬೇತಿ ಪಡೆದ ಅಭ್ಯರ್ಥಿಗಳು, ಆಸಕ್ತ ಉದ್ಯೋಕಾಂಕ್ಷಿಗಳು ಸ್ವವಿವರವುಳ್ಳ ಬಯೋಡಾಟಾ ದೊಂದಿಗೆ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಉಚಿತ ಪ್ರವೇಶವಿದ್ದು, ಸಂದರ್ಶನಕ್ಕೆ ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ.

ಉದ್ಯೋಗ ಮೇಳದ ಆಯೋಜನೆಗೆ ಸಂಬಂಧಿಸಿದಂತೆ ವಿವಿಧ ಸಮಿತಿಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿ ವಹಿಸಲಾಗಿದ್ದು ಉದ್ಯೋಗ ಮೇಳದ ಯಶಸ್ಸಿಗೆ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಇದುವರೆಗೆ 523 ಉದ್ಯೋಗಾಂಕ್ಷಿಗಳು ನೋಂದಾಯಿಸಿಕೊಂಡಿದ್ದು, ಉದ್ಯೋಗ ಮೇಳದಲ್ಲಿ 5000 ಕ್ಕೂ ಹೆಚ್ಚು ಉದ್ಯೋಗಾಂಕ್ಷಿಗಳು ಭಾಗವಹಿಸುವ ನಿರೀಕ್ಷೆ ಇದೆ. ಆನ್ಲೈನ್ ನಲ್ಲಿ ನೋಂದಾಯಿಸದ ಅಭ್ಯರ್ಥಿಗಳು ಉದ್ಯೋಗ ಮೇಳದ ದಿನದಂದು, ಸ್ಥಳದಲ್ಲಿ ಸ್ಥಾಪಿಸಲಾಗಿರುವ ನೋಂದಣಿ ಕೇಂದ್ರಗಳಲ್ಲಿ ನೋಂದಾಯಿಸಿಕೊಂಡು ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು. ಪಂಚಾಯಿತಿ ವ್ಯಾಪ್ತಿಯಲ್ಲಿ ಉದ್ಯೋಗ ಮೇಳದ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ. ಉದ್ಯೋಗಾಂಕ್ಷಿಗಳು ಹತ್ತಿರದ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿಗಳಲ್ಲಿಯೂ ಕೂಡ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಉಚಿತವಾಗಿ ನೋಂದಾಯಿಸಿಕೊಳ್ಳಬಹುದಾಗಿದೆ- ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಕೆ.ಎನ್ ಅನುರಾಧ ಅಪರ ಜಿಲ್ಲಾಧಿಕಾರಿ ಅಮರೇಶ್ ಹೆಚ್, ಜಿಲ್ಲಾ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕ ನರೇಂದ್ರ ಬಾಬು, ಜಿಲ್ಲಾ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಗನ್ನಾಥ, ದೇವನಹಳ್ಳಿ ತಹಶೀಲ್ದಾರ್ ಬಾಲಕೃಷ್ಣ, ವಾರ್ತಾ ಇಲಾಖೆ ಸಹಾಯಕಿ ನಿರ್ದೇಶಕಿ ಹೇಮಾವತಿ ಜೆ ಇದ್ದರು.



### ಮತಪಟ್ಟಿ ಪರಿಷ್ಕರಣೆಗೆ ಅವಕಾಶ

**ಬೆಂಗಳೂರು ಗ್ರಾಮಾಂತರ ಜಿಲ್ಲೆ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯು ಆಗಸ್ಟ್ 20 ರಿಂದ ಅಕ್ಟೋಬರ್ 18 ರವರೆಗೆ ನಡೆಯಲಿದ್ದು ಬಿಎಲ್ಒ ತಂತ್ರಾಂಶದ ಮೂಲಕ ಮನೆ-ಮನೆ ಸಮೀಕ್ಷೆ ಪ್ರಾರಂಭಿಸಲಾಗಿದ್ದು, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಹಾಗೂ ತೆಗೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ ಅವರು ತಿಳಿಸಿದರು.ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಮಾಹಿತಿ ನೀಡಿದ ಅವರು, ಆಗಸ್ಟ್ 20 ರಿಂದ ಮತದಾರರ ಪಟ್ಟಿ ಪರಿಷ್ಕರಣೆಯ ಎಲ್ಲ ಕಾರ್ಯಚಟುವಟಿಕೆಗಳು ಶುರುವಾಗಿವೆ. ಪ್ರತಿ ವರ್ಷ ಜನವರಿ 01 ಕ್ಕೆ 18 ವರ್ಷ ಪೂರೈಸಿರುವವರನ್ನು ಮತದಾರರ ಪಟ್ಟಿಗೆ ಸೇರಿಸಲಾಗುತ್ತದೆ. ಅದರಂತೆ ಬೂತ್ ಮಟ್ಟದ ಅಧಿಕಾರಿಗಳು ಅಕ್ಟೋಬರ್ 18 ರ ವರೆಗೆ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸಲಿದ್ದಾರೆ ಎಂದು ಹೇಳಿದರು. ಮನೆ ಮನೆ ಸಮೀಕ್ಷೆ ವೇಳೆ ಬೂತ್ ಮಟ್ಟದಲ್ಲಿ ಹೊಸ ಮನೆಗಳು ನಿರ್ಮಾಣಗೊಂಡು ಅಲ್ಲಿ ಜನ ವಾಸವಿದ್ದರೆ ಅಥವಾ ಅಲ್ಲಿಂದ ಬೇರೆಡೆ ಸ್ಥಳಾಂತರಗೊಂಡವರ ಮಾಹಿತಿ ಸಂಗ್ರಹಿಸಿ, ಅರ್ಹರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಲಾಗುವುದು. ಬೇರೆಡೆಗೆ ಸ್ಥಳಾಂತರಗೊಂಡವರು ಹಾಗೂ ಮೃತಪಟ್ಟವರನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಲಾಗುವುದು. ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಮನೆ ಮನೆ ಭೇಟಿ ನೀಡುವ ಬಿಎಲ್‌ಒಗಳಿಗೆ ಅಗತ್ಯ ಮಾಹಿತಿಯನ್ನು ನೀಡಿ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.**

## ಕ್ಯಾಮರಾ ಕಣ್ಣಲ್ಲಿ ಎಲ್ಲವನ್ನೂ ವಿಭಿನ್ನವಾಗಿ ಕ್ಲಿಕ್ಕಿಸುವುದೇ ಸವಾಲು

**ಬೆಂಗಳೂರು:** ಕ್ಯಾಮರಾ ಕಣ್ಣಲ್ಲಿ ಯಾವ ಸಂದರ್ಭದಲ್ಲಿ ಯಾರು ಹೇಗೆ ಸೆರೆಯಾಗುತ್ತಾರೆ ಎನ್ನುವುದು ಒಬ್ಬ ಛಾಯಾಗ್ರಹಕನಿಗೆ ಮುಖ್ಯವಾದ ಸಂಗತಿ. ಈ ನಿಟ್ಟನಲ್ಲಿ ನಮ್ಮ ಕಣ್ಣನ್ನು ಸದಾ ಕ್ಯಾಮರಾ ಮೇಲೆ ನೆಟ್ಟಿರಬೇಕು ಎಂದು ಹಿರಿಯ ಛಾಯಾಗ್ರಹಕ ವಿಶ್ವೇಶ್ವರಪ್ಪ ಹೇಳಿದ್ದಾರೆ.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದಲ್ಲಿ ಮನೆಯಂಗಳಲ್ಲಿ ಗೌರವ ಸಮರ್ಪಣೆ ಎನ್ನುವ ಕಾರ್ಯಕ್ರಮದಲ್ಲಿ ಸನ್ಮಾನಿತರಾಗಿ ಮಾತನಾಡಿದರು.



1994ರಲ್ಲಿ ಎಚ್.ಡಿ.ದೇವೇಗೌಡರು ಸಿಎಂ ಆಗಿದ್ದ ಸಂದರ್ಭವದು. ಗೌಡರು ನಗುವುದನ್ನು ಸೆರೆ ಹಿಡಿದು ಪೋರ್ಟ್ರೇಟ್ಟಾಗಿ ಕಳುಹಿಸಬೇಕಾಗಿತ್ತು. ಬಾಲಬ್ರೂಹಿ ಗೆಸ್ಟ್ ಹೌಸ್ನಲ್ಲಿದ್ದ ಗೌಡರನ್ನು ಭೇಟಿ ಮಾಡಿ ಅವರ ಕ್ಯಾಮರಾದಲ್ಲಿ ಫೋಟೋ ಸೆರೆ ಹಿಡಿಯಲು ಬರೋಬ್ಬರಿ ಖರ್ಚು ಮಾಡಿದ್ದು ಒಂದು ರೀಲ್. ಹನ್ನೊಂದು ಮುಖ್ಯಮಂತ್ರಿಗಳ ಬಳಿ ಕೆಲಸ ಮಾಡಿದ್ದ ನನಗೆ ದೇವೇಗೌಡರ ನಗು ಕ್ಲಿಕ್ ಮಾಡಿದ್ದು ಮರೆಯಲಾಗದ ಘಟನೆ ಎಂದು ನೆನಪಿಸಿಕೊಂಡರು.

ನಾನು ಲಕ್ಷಾಂತರ ಕ್ಲಿಕ್ ಮಾಡಿರಬಹುದು. ನನ್ನ ಕ್ಯಾಮಾರದಲ್ಲಿ ಸೆರೆಯಾದ ಸಾವಿರಾರು ಅತ್ಯುತ್ತಮ ಚಿತ್ರಗಳಿವೆ. ಆದರೆ ಅವುಗಳಲ್ಲಿ ಖುಷಿಕೊಟ್ಟಿದ್ದು ಒಂದೇ ಒಂದು ಚಿತ್ರ. ಡಾ.ರಾಜ್ಕುಮಾರ್ ಅವರನ್ನು ವೀರಪ್ಪನ್ ಅಪಹರಿಸಿದ್ದ ಸಂದರ್ಭವದು. ವೀರಪ್ಪನ್ ಸೆರೆಯಿಂದ ಬಿಡುಗಡೆಗೊಂಡ ಮೇಲೆ ಡಾ.ರಾಜ್ಕುಮಾರ್ ಅವರನ್ನು ಹೆಲಿಕ್ಯಾಪ್ಟರ್ನಲ್ಲಿ ಎಚ್ಎಎಲ್ ವಿಮಾನ ನಿಲ್ದಾಣಕ್ಕೆ ಕರೆ ತರಲಾಯಿತು. ಅಣ್ಣಾವ್ರ ಹೆಲಿಕ್ಯಾಪ್ಟರ್ನಿಂದ ಇಳಿದಾಗ ತಾಯ್ನಲದ ಭೂಮಿಗೆ ನಮಸ್ಕರಿಸಿ ಮಣ್ಣನ್ನು ಹಿಡಿದು ಕಣ್ಣಿಗೆ ಒತ್ತಿಕೊಂಡಾಗ ನಾನು ಕ್ಲಿಕ್ಕಿಸಿದ ಫೋಟೋ ಈ ತನಕ ನಾ ತೆಗೆದ ಅತ್ಯುತ್ತಮ ಚಿತ್ರ ಎಂದು ಹಳೆಯ ಘಟನೆಗೆ ಕನ್ನಡಿ ಹಿಡಿದರು. ದೇವೇಗೌಡರಿಂದ ಹಿಡಿದು ಎಸ್.ಎಂ.ಕೃಷ್ಣ, ಜೆ.ಎಚ್.ಪಟೇಲ್, ಸಿದ್ದರಾಮಯ್ಯ, ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ತನಕ 11 ಸಿಎಂ ಜೊತೆಗೆ ಕೆಲಸ ಮಾಡುವಾಗ ಎಲ್ಲರೂ ಪ್ರೀತಿ ತೋರಿಸಿದ್ದಾರೆ. ಆದರೆ, ಬಹಳ ತಮಾಷೆಯಾಗಿ ಮತ್ತು ಅಷ್ಟೇ ಪ್ರೀತಿ ವಿಶ್ವಾಸದಲ್ಲಿ ನಡೆಸಿಕೊಂಡಿದ್ದು ಮಾತ್ರ ಜೆ.ಎಚ್.ಪಟೇಲ್. ಈ ವಿಷಯದಲ್ಲಿ ಅವರಿಗೆ ಸರಿಸಾಟಿ ಯಾರಿಲ್ಲ ಎಂದರು. ವಾರ್ತಾ ಇಲಾಖೆಯಲ್ಲಿದ್ದ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಫೋಟೋವನ್ನು ಮೊಟ್ಟಮೊದಲ ಬಾರಿಗೆ ಎಲ್ಲಾ ಪತ್ರಿಕಾಲಯಗಳಿಗೆ ಇಮೇಲ್ (ಆಗಷ್ಟೆ ಇಮೇಲ್ ಬಳಕೆ ಶುರುವಾಗಿತ್ತು)ಮಾಡಿದ ಹೆಗ್ಗಳಿಕೆಯೂ ನನ್ನದು ಎಂದರು.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಿಮ್ಮನಾಯಕನ ಕೋಟೆಯಲ್ಲಿ ಹುಟ್ಟಿ ಬೆಳೆದ ವಿಶ್ವೇಶ್ವರಪ್ಪ ಅವರು, ಮೂರು ದಶಕಗಳಿಗೂ ಹೆಚ್ಚು ಕಾಲ ವಾರ್ತಾ ಇಲಾಖೆಯಲ್ಲಿ ಎರಡು ದಶಕಗಳಿಗೂ ಹೆಚ್ಚು ಕಾಲ ಸಿಎಂ ಫೋಟೋಗ್ರಾರ್ ಆಗಿ ದುಡಿದಿರುವುದನ್ನು ಗುರುತಿಸಿ ಸನ್ಮಾನಿಸಲಾಗುತ್ತಿದೆ ಎಂದರು. ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯಿಷಾ ಖಾನಂ, ಹಿರಿಯ ಛಾಯಾಗ್ರಹಕ ಹಿಂದೂ ಪತ್ರಿಕೆಯ ಗೋಪಿನಾಥ್ ಅವರು ವಿಶ್ವೇಶ್ವರಪ್ಪ ಅವರ ಸರಳ ಸಜ್ಜನಿಕೆಯ ಬಗ್ಗೆ ಮಾತನಾಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಮತ್ತಿತರರು ಹಾಜರಿದ್ದರು.

## 6 ತಿಂಗಳ ಮಗುವಿಗೆ ಕ್ಲಿಷ್ಟಕರ ಕಣ್ಣಿನ ಶಸ್ತ್ರ ಚಿಕಿತ್ಸೆ

**ಮೈಸೂರು:** ನಗರದ ಖ್ಯಾತ ನೇತ್ರ ಶಸ್ತ್ರ ಚಿಕಿತ್ಸಕ ದಂಪತಿ ಡಾ. ರವಿಶಂಕರ್ ಹಾಗು ಡಾ. ಉಮಾ ರವಿಶಂಕರ್ ನೇತೃತ್ವದಲ್ಲಿ ನಗರದ ಉಷಾಕಿರಣ ಕಣ್ಣಿನ ಆಸ್ಪತ್ರೆಯಲ್ಲಿ ಇತ್ತೀಚಿಗೆ ಬೀದರ್ ಜಿಲ್ಲೆಯ ಆರು ತಿಂಗಳ ಹೆಣ್ಣು ಮಗುವಿಗೆ ಅಪರೂಪದ, ಕ್ಲಿಷ್ಟಕರ ಶಸ್ತ್ರಚಿಕಿತ್ಸೆ ನಡೆಸಿ, ಆಕೆಗೆ ದೃಷ್ಟಿ ಲಭಿಸುವಂತೆ ಮಾಡಲಾಗಿದೆ. ಜೊತೆಗೆ, ಮಗುವಿನ ಹೆತ್ತವರು ತೀರಾ ಬಡವರಾಗಿದ್ದರಿಂದ ಆಸ್ಪತ್ರೆಯ ವತಿಯಿಂದಲೇ, ಅವರಿಗೆ ಊಟ, ಹಾಗು ವಸತಿ ವ್ಯವಸ್ಥೆ ಮಾಡಿ, ಈಗ ಅವರ ಯೋಗ ಕ್ಷೇಮ ನೋಡಿಕೊಳ್ಳಲಾಗುತ್ತಿದೆ.

ಆರ್ಥಿಕವಾಗಿ ಹಾಗು ಸಾಮಾಜಿಕವಾಗಿ ತೀರಾ ಹಿಂದುಳಿದ ಕುಟುಂಬಕ್ಕೆ ಸೇರಿದ ಧೃತಿ ಎಂಬ ಮಗುವಿಗೆ ಈ ಶಸ್ತ್ರ ಚಿಕಿತ್ಸೆ ನಡೆಸಿ, ದೃಷ್ಟಿ ಲಭಿಸುವಂತೆ ಮಾಡಲಾಗಿದೆ. ಧೃತಿ ಹುಟ್ಟಿನಿಂದಲೇ ಎರಡೂ ಕಣ್ಣುಗಳಲ್ಲಿ ಕಣ್ಣಿನ ಪೊರೆ ಹೊಂದಿದ್ದ ಮಗು. ಇದರ ಜೊತೆಗೆ ಆಕೆಯ ಕಣ್ಣುಗಳು ಬಹಳ ಚಿಕ್ಕದಾಗಿದ್ದು ವಿರೂಪ ರಚನೆ ಹೊಂದಿದೆ. ಇದರ ಜೊತೆಗೆ ಆಕೆಯ ಕಣ್ಣಿನ ಮುಂಭಾಗದ ಸಣ್ಣ ಭಾಗ (ಮೈಕ್ರೋ ಕಾರ್ನಿಯಾ) ಹಾಗು ಕಣ್ಣಿನ ಎಲ್ಲಾ ರಚನೆಗಳು ತುಂಬಾ ಕಿಕ್ಕಿರಿದಿವೆ ಮತ್ತು ಚಿಕ್ಕದಾಗಿದೆ. ಆಕೆ ಎದುರಿಸುತ್ತಿದ್ದ ಇನ್ನೊಂದು ಸಮಸ್ಯೆ ಎಂದರೆ ಆಕೆಯ ಕಣ್ಣುಗಳು ಅಲುಗಾಡುತ್ತಿದ್ದು, ಸರಿಯಾಗಿ ಕಣ್ಣಿನ ಬೆಳವಣಿಗೆ ಆಗಿಲ್ಲ. ಇವು ತಾಂತ್ರಿಕವಾಗಿ ತುಂಬಾ ಸವಾಲಿನ ಪರಿಸ್ಥಿತಿಯನ್ನು ಶಸ್ತ್ರಚಿಕಿತ್ಸಕರಿಗೆ ತಂದೊಡ್ಡಿದ್ದವು. ನಮ್ಮ 35 ವರ್ಷಗಳ ಅನುಭವ ಹಾಗು ಇದೇ ರೀತಿಯ ಕ್ಲಿನಿಕಲ್ ಪರಿಸ್ಥಿತಿಗಳಲ್ಲಿ ಸಾವಿರಾರು ಸಂಕೀರ್ಣ ಶಸ್ತ್ರಚಿಕಿತ್ಸೆಗಳ ಹೊರತಾಗಿಯೂ, ಈ ಮಗುವಿನ ಶಸ್ತ್ರ ಚಿಕಿತ್ಸೆ ನಮಗೆ ಸವಾಲಿನದ್ದಾಗಿತ್ತು, ಎನ್ನುತ್ತಾರೆ ಡಾ. ರವಿಶಂಕರ್.

ಆದರೆ, ಈ ಸವಾಲನ್ನು ಕೈಗೆತ್ತಿಕೊಂಡ ಡಾ. ರವಿಶಂಕರ್ ಹಾಗು ಡಾ. ಉಮಾ ರವಿಶಂಕರ್ ದಂಪತಿ, ಅರವಳಿಕೆ ತಜ್ಞ ಡಾ. ಮಂಜುನಾಥ್ ನೇತೃತ್ವದ ಅರಿವಳಿಕೆ ವೈದ್ಯರ ತಂಡ, ಹಾಗು ಆಸ್ಪತ್ರೆಯ ಇತರ ನೇತ್ರ ಶಸ್ತ್ರಚಿಕಿತ್ಸಕರ ತಂಡದೊಂದಿಗೆ ಸಾಮಾನ್ಯ ಅರಿವಳಿಕೆ ಮೂಲಕ ಶಸ್ತ್ರಚಿಕಿತ್ಸೆ ನಡೆಸಿ, ಮಗುವಿಗೆ ದೃಷ್ಟಿ ಮರಳುವಂತೆ ಮಾಡಿದ್ದಾರೆ.

ಸದ್ಯಕ್ಕೆ, ಕಣ್ಣಿನ ಗಾತ್ರವು ಸಾಮಾನ್ಯಕ್ಕಿಂತ ಕಡಿಮೆ ಇರುವುದರಿಂದ ಕ್ಯಾಟರಾಕ್ಟ್ ಆಸ್ಪಿರೇಶನ್ನ ಮೊದಲ ಹಂತದ ಶಸ್ತ್ರಚಿಕಿತ್ಸೆ, ಪ್ರಾಥಮಿಕ ಕ್ಯಾಪ್ಸುಲೋಟಮಿ ಹಾಗು ಮುಂಭಾಗದ ವಿಟ್ರೆಕ್ಟಮಿಯನ್ನು ಬಲಗಣ್ಣಿಗೆ ಮಾಡಲಾಗಿದೆ. ಇನ್ನು ಮುಂದಿನ ದಿನಗಳಲ್ಲಿ, ಇತರ ಚಿಕಿತ್ಸೆಗಳು ಮುಂದುವರಿಯಲಿವೆ, ಎಂದು ಡಾ. ರವಿಶಂಕರ್ ತಿಳಿಸಿದ್ದಾರೆ. ಧೃತಿಯ ಕುಟುಂಬ ತೀರಾ ಬಡವರಾಗಿರುವುದರಿಂದ, ನಾವೇ ಅವರಿಗೆ ಶಸ್ತ್ರಚಿಕಿತ್ಸೆಯ ನಂತರ ಈಗ ಅವರಿಗೆ ಊಟ ಮತ್ತು ವಸತಿ ವ್ಯವಸ್ಥೆ ಮಾಡಿದ್ದೇವೆ. ಈ ನಿಟ್ಟಿನಲ್ಲಿ ಸೇತುರಾಮ್ ಮತ್ತು ಶ್ರೀ ವಿವೇಕಾನಂದ ಸೇವಾಶ್ರಮದ ತಂಡಕ್ಕೆ ನಮ್ಮ ಜೊತೆ ಕೈ ಜೋಡಿಸಿದೆ, ಎಂದು ಅವರು ತಿಳಿಸಿದರು. ಮಗುವಿನ ತಾಯಿ ಕೂಡಾ ಇದೆ ಸಮಸ್ಯೆಗಳನ್ನು ಹೊಂದಿದ್ದಾರೆ. ಅವರಿಗೆ ಮುಂದಿನ ದಿನಗಳಲ್ಲಿ ಶಸ್ತ್ರ ಚಿಕಿತ್ಸೆ ವ್ಯವಸ್ಥೆ ಮಾಡಲಾಗುವದು ಎಂದು ಡಾ. ರವಿ ಶಂಕರ್ ತಿಳಿಸಿದ್ದಾರೆ.

## ಜಿಲ್ಲೆಯ ಪ್ರವಾಸಿ ತಾಣಗಳನ್ನು ಗುರುತಿಸಿ ವೋಟ್ ಮಾಡಲು ನಾಗರಿಕರಿಗೆ ಅವಕಾಶ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಪ್ರವಾಸೋದ್ಯಮ ತಾಣಗಳನ್ನು ಅಭಿವೃದ್ಧಿಪಡಿಸಿ ಮೇಲ್ದರ್ಜೆಗೇರಿಸಲು ಕೇಂದ್ರ ಪ್ರವಾಸೋದ್ಯಮ ಸಚಿವಾಲಯವು ದೇಕೋ ಅಪ್ನ ದೇಶ್: ಪೀಪಲ್ಸ್ ಚಾಯ್ಸ್-2024ರ ಶೀರ್ಷಿಕೆಯಡಿ ಕಾರ್ಯಕ್ರಮವನ್ನು ಪ್ರಾರಂಭಿಸಿದೆ.

ಜಿಲ್ಲೆಯಲ್ಲಿನ ಪ್ರವಾಸೋದ್ಯಮವನ್ನು ಮೇಲ್ದರ್ಜೆಗೇರಿಸುವ ಸಲುವಾಗಿ ಸಾಂಸ್ಕೃತಿಕ, ಧಾರ್ಮಿಕ, ಪಾರಂಪರಿಕ, ನೈಸರ್ಗಿಕ, ವನ್ಯಜೀವಿ ಹಾಗೂ ಸಾಹಸ ಚಟುವಟಿಕೆಗಳು ಮತ್ತು ಇತರೆ ಪ್ರವಾಸಿ ತಾಣಗಳನ್ನು ಪ್ರವಾಸಿಗರ ದೃಷ್ಠಿಕೋನದಲ್ಲಿ ಗುರುತಿಸಲು ಅನುಕೂಲವಾಗುವಂತೆ ವೆಬ್ ಸೈಟ್ https://innovateindia.mygov.in/dekho-apna-desh/ ನಲ್ಲಿ ಜಿಲ್ಲೆಯ ನಾಗರಿಕರು, ಯುವಕರು ಹಾಗೂ ಪ್ರವಾಸಿಗರು ವೋಟ್ ಮಾಡುವ ಅವಕಾಶ ಕಲ್ಪಿಸಲಾಗಿದೆ. ಜಿಲ್ಲೆಯ ಪ್ರವಾಸಿ ತಾಣಗಳಾದ ಶ್ರೀ ಮಲೈ ಮಹದೇಶ್ವರಬೆಟ್ಟ, ಬಿಳಿಗಿರಿ ರಂಗನಾಥಸ್ವಾಮಿ ದೇವಾಲಯ, ಕನಕಗಿರಿ, ಚಿಕ್ಕಹೊಳೆ ಡ್ಯಾಂ, ಕರಿವರದರಾಜಬೆಟ್ಟ, ಸುವರ್ಣಾವತಿ ಡ್ಯಾಂ, ಕ್ಯಾತದೇವರ ಗುಡಿ (ಕೆ.ಗುಡಿ), ನರಸಮಂಗಲ, ಬಂಡೀಪುರ ನ್ಯಾ?ನಲ್ ಪಾರ್ಕ್, ಹಿಮವದ್ ಗೋಪಾಲಸ್ವಾಮಿಬೆಟ್ಟ, ಭರಚುಕ್ಕಿ ಜಲಾಶಯ, ಹೊಗೇನಕಲ್ ಜಲಾಶಯ, ಗೋಪಿನಾಥಂ ಮೇಸ್ಟ್ರಿ ಟ್ರೈಲ್ ಕ್ಯಾಂಪ್, ವೆಸ್ಲಿ ಬ್ರಿಡ್ಜ್, ಹುಲುಗನ ಮುರಡಿಯ ವೆಂಕಟರಮಣ ದೇವಾಲಯ, ಬಳೆಮಂಟಪ, ಅಮೃತೇಶ್ವರ ದೇವಾಲಯ, ಬಿ.ಆರ್.ಟಿ ಟೈಗರ್ ರಿಸರ್ವ್, ದೇವಿರಮ್ಮ ಬೆಟ್ಟ, ಒಡೆಯರಪಾಳ್ಯದ ಡೋನ್ಡಿನ್ಲಿಂಗ್ ಟಿಬೇಟಿಯನ್ ಸೆಟಲ್ಮೆಂಟ್ ಎಲಿಫ್ಯಾಂಟ್ ಕ್ಯಾಂಪ್, ಹೊನ್ನಮೇಟಿ, ಅತ್ತಿಖಾನೆ ಮತ್ತು ತ್ರಯಂಬಕಪುರದ ಲಕ್ಷ್ಮೀ ವರದರಾಜಸ್ವಾಮಿ ದೇವಾಲಯ ಸೇರಿದಂತೆ ಜಿಲ್ಲೆಯ ಇತರೆ ಪ್ರವಾಸಿ ತಾಣಗಳ ಅಭಿವೃದ್ಧಿ ಪಡಿಸಲು ಸೆಪ್ಟೆಂಬರ್ 15 ರೊಳಗೆ ನಾಗರಿಕರು ವೋಟ್ ಮಾಡುವ ಮೂಲಕ ಪ್ರವಾಸೋದ್ಯಮಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಬಿಎಸ್ಪಿ ರಾಜ್ಯ ಉಸ್ತುವಾರಿ ಎಂ.ಕೃಷ್ಣಮೂರ್ತಿ ಹೇಳಿಕೆ**

# ಎಸ್ಸಿ, ಎಸ್ಟಿ ಜನಾಂಗದ ಋಣ ತೀರಿಸ ಬೇಕು

**ಚಾಮರಾಜನಗರ:** ಮುಡಾ ಹಗರಣದಲ್ಲಿ ಸಿಲುಕಿರುವ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆರೋಪ ಮುಕ್ತರಾಗುವ ತನಕ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವ ಮೂಲಕ ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯಬೇಕು ಎಂದು ಬಿಎಸ್ಪಿ ರಾಜ್ಯ ಉಸ್ತುವಾರಿ ಎಂ.ಕೃಷ್ಣಮೂರ್ತಿ ಆಗ್ರಹಿಸಿದರು.

ನಾನು ಭ್ರಷ್ಟಚಾರಿಯಲ್ಲ, ಕಪ್ಪು ಚುಕ್ಕೆ ಇಲ್ಲ ಎಂದು ಸಮರ್ಥನೆ ಮಾಡಿಕೊಳ್ಳುವ ಸಿದ್ದ ರಾಮಯ್ಯ ಅವರು ಸಾಮಾಜಿಕ ನ್ಯಾಯಕ್ಕೆ ಬದ್ಧರಾಗಿದ್ದರೆ ಎಸ್ಸಿ, ಎಸ್ಟಿ ಸಮುದಾಯದ ನಾಯಕರನ್ನು ಮುಖ್ಯಮಂತ್ರಿ ಮಾಡಬೇಕು. ಆ ಮೂಲಕ ಎಸ್ಸಿ, ಎಸ್ಟಿ ಜನಾಂಗದ ಋಣ ತೀರಿಸ ಬೇಕು ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಸೇರಿದ ವೇಳೆ ಮಲ್ಲಿಕಾರ್ಜುನ ಖರ್ಗೆ ಅವರಿಂದ ವಿರೋಧ ಪಕ್ಷದ ಸ್ಥಾನವನ್ನು ತೆರವು ಮಾಡಿ ಸಿದ್ದರಾಮಯ್ಯ ಅವರಿಗೆ ನೀಡಲಾಯಿತು. ಇದರಿಂದ ಖರ್ಗೆಗೆ ಅನ್ಯಾಯ ವಾಯಿತು. ಅಲ್ಲದೇ ಮುಖ್ಯಮಂತ್ರಿ ರೇಸ್ನಲ್ಲಿದ್ದ - ಡಾ.ಜಿ.ಪರಮೇಶ್ವರ್ ಅವರನ್ನು ಸೋಲಿಸುವ - ಮೂಲಕ ಸಿಎಂ ಸ್ಥಾನ ತಪ್ಪಿಸಲಾಯಿತು. ಆದ್ದರಿಂದ - ಸಿದ್ದರಾಮಯ್ಯ ಅವರು ಮಲ್ಲಿಕಾರ್ಜುನ ಖರ್ಗೆ, - ಡಾ.ಜಿ.ಪರಮೇ ಶ್ವರ್, ಕೆ.ಎಚ್.ಮುನಿಯಪ್ಪ, ಸತೀಶ್ - ಜಾರಕಿಹೊಳಿ ಇವರಲ್ಲಿ ಯಾರಿಗಾದರೂ ಮುಖ್ಯಮಂತ್ರಿ ಸ್ಥಾನ ಬಿಟ್ಟು ಕೊಡಬೇಕು ಎಂದರು. ಮಾಜಿ ಸಿಎಂ ಎಚ್ .ಡಿ.ಕುಮಾರಸ್ವಾಮಿ ಅವರ ಮೇಲಿರು ವ ಆರೋಪದ ತನಿಖೆಗೂ



ರಾಜ್ಯಪಾಲರು ಪ್ರಾಸಿಕ್ಯೂಷನ್ಗೆ ಅನುಮತಿ ನೀಡಬೇಕು. ರಾಜ್ಯದಲ್ಲಿ ಸ್ವಚ್ಛ ರಾಜಕಾರಣ ಬರಲು ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ನಾಯಕರ ಮೇಲಿರುವ ಎಲ್ಲ ಪ್ರಕರಣಗಳ ತನಿಕೆಗೆ ಅವಕಾಶ ಕಲ್ಪಿಸಬೇಕು. ಸಾಮಾಜಿಕ ಹೋರಾಟಗಾರ ಎಸ್.ಆರ್. ಹಿರೇಮಠ್ ಅವರು ಸಂಸದ ಡಾ.ಮಂಜುನಾಥ್ ಮೇಲೆ ಮಾಡಿರುವ 200 ಎಕರೆ ಜಮೀನು ಕಬಳಿಕೆ ಆರೋಪದ ಕುರಿತು ರಾಜ್ಯ ಸರ್ಕಾರ ಪ್ರಕರಣ ದಾಖಲು ಮಾಡಬೇಕು. ಎಚ್.ಡಿ.ಕುಮಾ ರಸ್ವಾಮಿ. ಡಿ.ಸಿ.ತಮ್ಮಣ್ಣ ಮೇಲೂ ಪ್ರಕರಣ ದಾಖಲಾಗಬೇಕು. ಮೂರು ಪಕ್ಷಗಳ ಭ್ರಷ್ಟರನ್ನು ಜನತೆ ತಿರಸ್ಕರಿಸಿ ಬುದ್ದಿ ಕಲಿಸಬೇಕು. ಆ ಮೂಲಕ ಬಿಎಸ್ಪಿಯನ್ನು ಕೊನೆಯ ಆಯ್ಕೆಯಾಗಿ ಪರಿಗಣಿ ಸಬೇಕು ಎಂದು ಮನವಿ ಮಾಡಿದರು. ಬಿಎಸ್ಪಿ ಜಿಲ್ಲಾಧ್ಯಕ್ಷ ಎನ್.ನಾ ಗಯ್ಯ, ಉಪಾಧ್ಯಕ್ಷ ಬ್ಯಾಡಮೂಡ್ಲು ಬಸ ವಣ್ಣ, ಪ್ರಧಾನ ಕಾರ್ಯದರ್ಶಿ ಬ.ಮ. ಕೃಷ್ಣಮೂರ್ತಿ, ಜಿಲ್ಲಾ ಉಸ್ತುವಾರಿ ರಾಜಶೇಖರ್, ತಾಲೂಕು ಅಧ್ಯಕ್ಷ ಚಂದ್ರಕಾಂತ್, ಮುಖಂಡ ಬೈರಲಿಂಗಸ್ವಾಮಿ ಇದ್ದರು.

## ಶ್ರೀರಂಗಪಟ್ಟಣ ಉಪನೋಂದಣಾ ಕಛೇರಿಯಲ್ಲಿ ಖಾಸಗಿ ನೌಕರರದ್ದೇ ಕಾರುಬಾರು

**ಮಂಡ್ಯ :** ಕೋಟ್ಯಂತರ ರೂ.ರಿಜಿಸ್ಟ್ರರ್, ಕ್ರಯ, ಭೋಗ್ಯ ವಗ್ಯೆರೆ, ಅಮೂಲ್ಯವಾದ ಹಳೆಯ ಕ್ರಯಪತ್ರಗಳಿಂದ ಹಾಗೂ ಇ.ಸಿ., ಮಾರ್ಟ್ಗೇಜ್ ಮಾಡಿಸಲು ದಿನನಿತ್ಯ ರೈತರು, ಸಾರ್ವಜನಿಕರಿಂದ ಗಿಜಿಗುಟ್ಟುವ ಶ್ರೀರಂಗಪಟ್ಟಣ ಉಪನೋಂದಣಾ ಕಛೇರಿಯಲ್ಲಿ ಸರ್ಕಾರಿ ನೌಕರರಾಗಿ 2-3 ಜನ ಮಾತ್ರ ಕರ್ತವ್ಯನಿರ್ವಹಿಸುತ್ತಿದ್ದಾರೆ. ಖಾಸಗಿ ನೌಕರರು ತುಂಬಿತುಳುಕುತ್ತಿದೆ. ಕಛೇರಿಯಲ್ಲಿ ಇವರದೇ ಕಾರುಬಾರಾಗಿದೆ. ಇವರಿಂದ ಭ್ರಷ್ಟಾಚಾರ ತುಂಬಿತುಳುಕುತ್ತಿದೆ. ಇವರನ್ನು ಯಾರೂ ನೇಮಕಾತಿ ಮಾಡಲು ಆದೇಶ ಕೊಟ್ಟಿದ್ದಾರೆ, ಇವರಿಗೆ ಯಾರು ಸಂಬಳ ನೀಡುತ್ತಾರೆ ಎಂಬುದನ್ನು ಉಪನೋಂದಾಣಾಧಿಕಾರಿಗಳು ಬಹಿರಂಗಪಡಿಸಬೇಕು ಎಂದು ಕರ್ನಾಟಕ ರಾಜ್ಯ ರೈತಸಂಘದ ಮುಖಂಡರಾದ ಮೋಹನ್ಕುಮಾರ್ ಉ॥ ಕಿರಂಗೂರು ಪಾಪು ಒತ್ತಾಯಿಸಿದ್ದಾರೆ.

ರೈತರಿಗೆ ಹಾಗೂ ಸಾರ್ವಜನಿಕರಿಗೆ ಯಾವುದೇ ಮೂಲಭೂತ ಸೌಕರ್ಯಗಳು ಇನ್ನೂ ಮರೀಚಿಕೆಯಾಗಿವೆ. ಉಪನೋಂದಾಣಾಧಿಕಾರಿ ಮಂಜುದರ್ಶಿನಿ ಜಿ. ಇವರು ರೈತರ, ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಲು ಸೌಜನ್ಯ ತೋರುತ್ತಿಲ್ಲ. ಅವರನ್ನು ನಿಂತುಕೊಂಡೇ ಮಾತನಾಡಿಸುವ ಪ್ರವೃತ್ತಿ ಬೆಳೆಸಿಕೊಂಡಿದ್ದಾರೆ. ಖಾಸಗಿ ನೌಕರರು ಅಲ್ಲಿ ಬಾಸ್ಗಳಂತೆ ವರ್ತಿಸುತ್ತಾರೆ. ಕಛೇರಿಯಲ್ಲಿ ಸೂಕ್ತ ಭದ್ರತೆ ಇಲ್ಲ. ಕೋಟ್ಯಾಂತರ ರೂ.ಗಳ ವಹಿವಾಟು ನಡೆಯುವ ಸ್ಥಳದಲ್ಲಿ ಒಂದು ಸಿ.ಸಿ.ಕ್ಯಾಮರಾ ಇಲ್ಲ. ಕಡತಗಳಿಗೆ ಸರ್ಕಾರಿ ನೌಕರರಿಂದ ಭದ್ರತೆ ವ್ಯವಸ್ಥೆ ಇಲ್ಲ. ಅಮೂಲ್ಯವಾದ ದಾಖಲೆಗಳನ್ನು ಖಾಸಗಿ ನೌಕರರ ಕೊಟ್ಟುಬಿಟ್ಟಿದ್ದಾರೆ. ಇವರು ರಿಯಲ್ ಎಸ್ಟೇಟ್ ಉದ್ಯಮಿಗಳು, ರಾಜಕಾರಣಿಗಳು, ಅವರ ಹಿತ ಕಾಯುವವರಿಗೆ ಕೂಡಲೇ ಬೇಕಾದ ಡಾಕ್ಯುಮೆಂಟನ್ನು ಕ್ಷಣಮಾತ್ರದಲ್ಲೆ ನೀಡುತ್ತಾರೆ. ಬಡರೈತರು, ಸಾರ್ವಜನಿಕರು ಅರ್ಜಿ ಕೊಟ್ಟರೆ, ಮಾಹಿತಿ ಕೇಳಿದರೆ ಅವರಿಗೆ ಒಂದಲ್ಲಾ ಒಂದು ಸಬೂಬು ಹೇಳಿ ಸಾಗಿಹಾಕುವ ಕೆಲಸವನ್ನು ದಿನನಿತ್ಯವೂ ಮಾಡುತ್ತಾ ಬರುತ್ತಿದ್ದಾರೆ. ಯಾವ ಯಾವ ವಿಭಾಗಗಳಲ್ಲಿ ಕೆಲಸ ನಿರ್ವಹಿಸುತ್ತಾರೆ ಎಂಬುದು ಫಲಕಗಳಿಲ್ಲ, ಖಾಸಗಿ ನೌಕರರ್ಯಾರು ಸರ್ಕಾರಿ ನೌಕರರ್ಯಾರು ಎಂಬುದೇ ಗೊತ್ತಾಗುವುದಿಲ್ಲ. ಮಧ್ಯವರ್ತಿಗಳ ಹಾವಳಿ ವಿಪರೀತವಾಗಿದೆ. ಇ.ಸಿ. ಹಾಗೂ ಹಳೆ ನೋಂದವಣಿ ಕ್ರಯಪತ್ರಗಳು ನೀಡುವ ಸ್ಥಳದಲ್ಲಿ ಭಾರೀ ಭ್ರಷ್ಟಾಚಾರ ಲಂಗುಲಗಾಮಿಲ್ಲದೆ ವ್ಯಾಪಕವಾಗಿ ನಡೆಯುತ್ತಿದೆ. ತಾಲ್ಲೂಕು ಉಪನೋಂದಣಾಧಿಕಾರಿಗಳು ಸುಮಾರು ವರ್ಷಗಳಿಂದಲೂ ಇಲ್ಲಿಯೇ ಝೂಂಡಾವೂರಿದ್ದಾರೆ. ಇವರನ್ನು ಕೂಡಲೇ ವರ್ಗಾವಣೆ ಮಾಡಬೇಕು. ಕಛೇರಿಗೆ ಅಗತ್ಯವಿರುವ ಸರ್ಕಾರಿ ನೌಕರರನ್ನು ಮಾತ್ರ ಕೂಡಲೇ ನೇಮಕ ಮಾಡಿ ಮೇಲ್ಕಂಡ ಮೂಲಭೂತ ಸೌಕರ್ಯಗಳನ್ನು ಕೂಡಲೇ ಕಛೇರಿಗೆ ಒದಗಿಸಬೇಕು ಎಂದು ಕ್ಷೇತ್ರದ ಶಾಸಕ ಹಾಗೂ ಜಿಲ್ಲಾ ಉಪನೋಂದಣಾಧಿಕಾರಿಯವರಿಗೂ ಗಮನಕ್ಕೆ ತರಲಾಗಿದೆ. ಕೂಡಲೇ ಕಂದಾಯ ಮಂತ್ರಿಗಳಾದ ಕೃಷ್ಣಬೈರೇಗೌಡರು ಕ್ರಮವಹಿಸಬೇಕೆಂದು ಪಾಪು ಒತ್ತಾಯಿಸಿದ್ದಾರೆ.

# ಸಂಜೆ ಟಿಪ್ಸ್



## ಆರೋಹನ್ ಪ್ರಿವಿಲೇಜ್ ಲೋನ್ ವಿತರಣೆ

ಆರೋಹನ್ ಫೈನಾನ್ಷಿಯಲ್ ಸರ್ವಿಸಸ್, ಆರ್ಬಿಐ ನಿಯಂತ್ರಣದ ಎನ್ಬಿಎಫ್ಸಿ ಎಮ್ಎಫ್ಐ, ಇತ್ತೀಚೆಗೆ ಬೆಂಗಳೂರು ನಗರದಲ್ಲಿ ವಲಯ ಕಚೇರಿಯನ್ನು ಸ್ಥಾಪಿಸುವ ಮೂಲಕ ದಕ್ಷಿಣ ಭಾರತದಲ್ಲಿ ತನ್ನ ವ್ಯವಹಾರವನ್ನು ವಿಸ್ತರಿಸಿದೆ. ಕಂಪನಿಯು ಮೈಸೂರಿನಲ್ಲಿ ಆಧಾರಿತ ಗ್ರಾಹಕರಿಗೆ 59,000 ರೂಪಾಯಿಗಳ ಮೊತ್ತದ ಮೊದಲ ಆರೋಹನ್ ಪ್ರಿವಿಲೇಜ್ ಲೋನ್ ಅನ್ನು ವಿತರಿಸಿದೆ. ಇದು ಸುವರ್ಣ ಪ್ರಮಾಣದ ಮೈಕ್ರೋಫೈನಾನ್ಸ್ ಗ್ರಾಹಕರಿಗಾಗಿ ಉದ್ಯಮದ ಮೊದಲ ಪ್ರಸ್ತಾಪವಾಗಿದೆ.

ಆರೋಹನ್ ಪ್ರಿವಿಲೇಜ್ ಡಿಜಿಟಲ್ ಲೆಂಡಿಂಗ್ ಆರೋಹನ್ನ ಹೊಸತಾದ ನವೀನತೆಯ ಒತ್ತಡ ಮತ್ತು 2028ರೊಳಗೆ 28 ಮಿಲಿಯನ್ ಜನರ ಜೀವನವನ್ನು ಪ್ರಭಾವಿತಗೊಳಿಸುವ ಮಹಾತ್ವಾಕಾಂಕ್ಷೆಯ ದೃಷ್ಟಿಕೋಣದ ಸಾಕ್ಷಿಯಾಗಿದೆ. ಸಮಯಕ್ಕೆ ಸರಿಯಾಗಿ ಪಾವತಿಸಿದ ದಾಖಲೆ ಹೊಂದಿರುವ ಗ್ರಾಹಕರಿಗೆ ಈ ಸೇವೆ ವಿಶೇಷವಾಗಿ ತಯಾರಿಸಲಾಗಿದೆ, ಇದರಿಂದಲೇ ಅವರಿಗೆ ತಕ್ಷಣದ ಮತ್ತು ಸುಲಭವಾದ ಹಣಕಾಸು ಸಹಾಯವನ್ನು ಒದಗಿಸುತ್ತದೆ. ಆರೋಹನ್ ಪ್ರಿವಿಲೇಜ್ ದಕ್ಷಿಣ ಭಾರತದಲ್ಲಿ ಮೊದಲ ಬಾರಿ ಮೈಸೂರಿನ ಶಾಖೆಯಲ್ಲಿ 59,000 ರೂಪಾಯಿಗಳ ಮೊತ್ತವನ್ನು ವಿತರಿಸುವ ಮೂಲಕ ತನ್ನ ಮೊದಲ ವಿತರಣೆಯನ್ನು ದಾಖಲಿಸಿದೆ.

ನಮ್ಮ ದೇಶವು ದಕ್ಷಿಣಭಾರತವನ್ನು ಒಳಗೊಂಡ ಗ್ರಾಮೀಣ ಮತ್ತು ಅರೆನಗರ ಪ್ರದೇಶಗಳ ಪರಿಶ್ರಮಿ ಉದ್ಯಮಿಗಳಿಂದ ತುಂಬಿದೆ, ಇವರದು ದೇಶದ ನಿರ್ಮಾಣಕ್ಕೆ ದೊಡ್ಡ ಕೊಡುಗೆ. ನಾವು ಅವರನ್ನು ಯಶಸ್ಸಿನ ಪಥದಲಿ ಬೆಂಬಲಿಸಲು ಪ್ರಮುಖ ಪಾತ್ರ ವಹಿಸಬಲ್ಲೆವೆಂದು ನಾವು ನಂಬಿದ್ದೇವೆ'' ಎಂದು ಆರೋಹನ್ ಫೈನಾನ್ಷಿಯಲ್ ಸರ್ವಿಸಸ್ ಲಿಮಿಟೆಡ್ನ ವ್ಯವಸ್ಥಾಪಕ ನಿರ್ದೇಶಕ ಮನುಜ್ ನಂಬಿಯಾರ್ ಹೇಳಿದರು.

## ಪನೀರ್ ಪಾಪ್ಸ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಪನೀರ್ – 250 ಗ್ರಾಂ, ಅಚ್ಚ ಖಾರದ ಪುಡಿ – 1 ಟೀ ಸ್ಪೂನ್, ಆರಿಗಾನೋ – 1/2 ಟೀ ಸ್ಪೂನ್, ಕರಿಮೆಣಸಿನಪುಡಿ – 1/4 ಟೀ ಸ್ಪೂನ್, ಕಡ್ಲೆಹಿಟ್ಟು – 1/2 ಕಪ್, ಶುಂಠಿ ಬೆಳ್ಳುಳ್ಳಿ ಪೇಸ್ಟ್ – 1 ಸ್ಪೂನ್, ಅರಿಶಿನ – ಚಿಟಿಕೆ, ಬೇಕಿಂಗ್ ಸೋಡಾ – ಚಿಟಿಕೆ, ಬ್ರೆಡ್ ಕ್ರಮ್ಸ್ – ಅರ್ಧ ಕಪ್ ಉಪ್ಪು – ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ಮೊದಲು ಪನೀರನ್ನು ಸಣ್ಣ ತುಂಡುಗಳನ್ನಾಗಿ ಕತ್ತರಿಸಿಕೊಳ್ಳಿ ಒಂದು ಪಾತ್ರೆಗೆ ಪನೀರ್, ಸ್ವಲ್ಪ ಕರಿಮೆಣಸಿನ ಪುಡಿ, ಸ್ವಲ್ಪ ರೆಡ್ ಚಿಲ್ಲಿ ಪೌಡರ್, ಅರಿಶಿನ ಆರಿಗಾನೋ, ಸ್ವಲ್ಪ ಉಪ್ಪು ಸೇರಿಸಿ ಮಿಕ್ಸ್ ಮಾಡಿ ಮ್ಯಾರಿನೇಟ್ ಆಗಲು ಅರ್ಧ ಗಂಟೆ ಬಿಡಿ. ಮತ್ತೊಂದು ಪಾತ್ರೆಯಲ್ಲಿ ಕಡ್ಲೆಹಿಟ್ಟು, ಶುಂಠಿ ಬೆಳ್ಳುಳ್ಳಿ ಪೇಸ್ಟ್, ಬೇಕಿಂಗ್ ಸೋಡಾ ಉಳಿದ ಪೆಪ್ಪರ್ ಪುಡಿ, ರೆಡ್ ಚಿಲ್ಲಿ ಪೌಡರ್ ಸ್ವಲ್ಪ ಉಪ್ಪು, ಸ್ವಲ್ಪ ನೀರು ಸೇರಿಸಿ ಇಡ್ಲಿ ಹದಕ್ಕೆ ಮಿಕ್ಸ್ ಮಾಡಿಕೊಳ್ಳಿ. ಮ್ಯಾರಿನೇಟ್ ಮಾಡಿದ ಪನೀರ್ ತುಂಡುಗಳನ್ನು ಒಂದೊಂದಾಗಿ ಕಡ್ಲೆಹಿಟ್ಟಿನ ಮಿಶ್ರಣದಲ್ಲಿ ಅದ್ದಿ ಒಮ್ಮೆ ಬ್ರೆಡ್ ಕ್ರಮ್ಸ್ ಮೇಲೆ ಹೊರಳಿಸಿ, ಈ ಪನೀರ್ ತುಂಡುಗಳನ್ನು ಬಿಸಿ ಎಣ್ಣೆಯಲ್ಲಿ ಕಂದು ಬಣ್ಣ ಬರುವವರೆಗೂ ಕರಿಯಿರಿ. ಈ ಬಿಸಿ ಬಿಸಿ ಪನೀರ್ ಪಾಪ್ ಕಾರ್ನ್ಗಳನ್ನು ಟೊಮ್ಯಾಟೋ ಕೆಚಪ್ ಜೊತೆ ಎಂಜಾಯ್ ಮಾಡಿ.

## ಮೋಟೋರೋಲಾ moto g45 5G ಬಿಡುಗಡೆ



ಮೋಟೋರೋಲಾ, ಭಾರತದ ಅತ್ಯುತ್ತಮ 5G ಸ್ಮಾರ್ಟ್ಫೋನ್ ಬ್ರಾಂಡ್ " ``moto g45 5G" ಅನ್ನು ಬಿಡುಗಡೆ ಮಾಡಿದೆ. moto g45 5Gಅದರ ಶಕ್ತಿಯುತ Snapdragon ಜೆನ್ 3 ಪ್ರೊಸೆಸರ್ನೊಂದಿಗೆ ಭಾರತದಲ್ಲಿನ ಕೈಗೆಟುಕುವ 5ಉ ಸ್ಮಾರ್ಟ್ಫೋನ್ ಮಾರುಕಟ್ಟೆಯನ್ನು ಭಂಗಗೊಳಿಸುತ್ತದೆ, ಇದು ಅತ್ಯುತ್ತಮ ಸಂಪರ್ಕಕ್ಕಾಗಿ oNR ನೊಂದಿಗೆ ವಿಭಾಗದ ಅತಿ ಹೆಚ್ಚಿನ 13 5ಉ ಬ್ಯಾಂಡ್ಗಳೊಂದಿಗೆ ಅದ್ಭುತ ಕಾರ್ಯಕ್ಷಮತೆಯನ್ನು ನೀಡುತ್ತದೆ. ಟಿಂಣಿ ೦45 ವಿಭಾಗದಲ್ಲಿ ಅತ್ಯಂತ ತೆಳುವಾದ ಮತ್ತು ಹಗುರವಾದ ಸಾಧನಗಳಲ್ಲಿ ಒಂದಾಗಿದೆ, ಜೊತೆಗೆ ಮೊದಲ ಬಾರಿಗೆ ಉ-ಸರಣಿಯ ಸ್ಮಾರ್ಟ್ಫೋನ್ಗಳಲ್ಲಿ 3 ಸುಂದರ ಪ್ಯಾಂಟೋನ್ ಕ್ಯೂರೇಟೆಡ್ ಬಣ್ಣ ವ್ಯತ್ಯಾಸಗಳಲ್ಲಿ ವೆಜನ್ ಲೆದರ್ ಫಿನಿಷ್ನೊಂದಿಗೆ ಅಲ್ಟ್ರಾ-ಪ್ರೀಮಿಯಂ ವಿನ್ಯಾಸದೊಂದಿಗೆ ಬರುತ್ತದೆ.

ಸ್ಮಾರ್ಟ್ಫೋನ್ 50ಒಕ ಕ್ವಾಡ್ ಪಿಕ್ಸೆಲ್ ಕ್ಯಾಮರಾ, 16ಒಕ ಸೆಲ್ಫಿ ಕ್ಯಾಮರಾ, 120ಊದ 6.5 ಡಿಸ್ಪ್ಲೇ, ಗೋರಿಲ?ಲಾ ಗ್ಲಾಸ್ 3 ಪ್ರೊಟೆಕಷನ್ ಮತ್ತು ಡಾಲ್ಬಿ ಅಟ್ಮಾಸ್ ಜೊತೆಗೆ ಡ್ಯುಯಲ್ ಸ್ಟೀರಿಯೋ ಸ್ಪೀಕರ್ಗಳು ಮತ್ತು ಸ್ಮಾರ್ಟ್ ಕನೆಕ್ಟ್, ಮೋಟೋ ಸೆಕ್ಯೂರ್, ಫ್ಯಾಮಿಲಿ ಸ್ಪೇಸಸ್, ಮೋಟೋ ಅನ್ವಲ್ಗ್ಗಳಂತಹ ವಿಭಿನ್ನ ಸಾಫ್ಟ್ವೇರ್ ವೈಶಿಷ್ಟ್ಯಗಳ ಸಮೂಹದೊಂದಿಗೆ ಬರುತ್ತದೆ. ಇದು ಅದರ ವಿಭಾಗದಲ್ಲಿ ಅತ್ಯುತ್ತಮ 5ಉ ಸ್ಮಾರ್ಟ್ಫೋನ್ಗಳಲ್ಲಿ ಒಂದಾಗಿದೆ.

ವಿನ್ಯಾಸದ ದೃಷ್ಟಿಯಿಂದ moto g45 5Gಅದರ ಅಲ್ಟ್ರಾ-ಪ್ರೀಮಿಯಂ ನೋಟ ಮತ್ತು ವೆಜನ್ ಲೆದರ್ ಫಿನಿಷ್ನೊಂದಿಗೆ ಎದ್ದು ಕಾಣುತ್ತದೆ. ಈ ವಿನ್ಯಾಸವು ಪ್ರೀಮಿಯಂ ಹಿಡಿತವನ್ನು ನೀಡುವುದರ ಜೊತೆಗೆ IP52ನೀರಿನ ಪ್ರತಿರೋಧದೊಂದಿಗೆ ಬಾಳಿಕೆಗೆ ಖಾತರಿ ನೀಡುತ್ತದೆ, ಆಕಸ್ಮಿಕ ಸೋರಿಕೆಗಳು, ಚಿಮುಕುವಿಕೆಗಳು ಮತ್ತು ಹಗುರವಾದ ಮಳೆಯಿಂದ ರಕ್ಷಿಸುತ್ತದೆ. ಇದಲ್ಲದೆ, moto g45 5G ಕೇವಲ 8mm ತೆಳುವಾದ ಮತ್ತು 183 ಗ್ರಾಂ ಮಾತ್ರ ತೂಗುವ ಸ್ಲಿಕ್, ಅಲ್ಟ್ರಾ-ಸ್ಲಿಮ್ ಪ್ರೊಫೈಲ್ ಅನ್ನು ಹೊಂದಿದೆ. ಇದು ಮೂರು ಸುಂದರವಾದ, ಪ್ಯಾಂಟೋನ್-ಮಾನ್ಯತೆ ಪಡೆದ ಬಣ್ಣಗಳಲ್ಲಿ ಲಭ್ಯವಿದೆ. ಅವುಗಳೆಂದರೆ, ಬ್ರಿಲಿಯಂಟ್ ಬ್ಲ್ಯೂ, ಬ್ರಿಲಿಯಂಟ್ ಗ್ರೀನ್ ಮತ್ತು ವಿವಾ ಮೆಜೆಂಟಾ.moto g45 5Gಅದರ ಸುಧಾರಿತ 50ಒಕ ಕ್ವಾಡ್ ಪಿಕ್ಸೆಲ್ ಕ್ಯಾಮರಾದೊಂದಿಗೆ, ಕೈಗೆಟುಕುವ ಸ್ಮಾರ್ಟ್ಫೋನ್ ಫೋಟೋಗ್ರಫಿಯಲ್ಲಿ ಹೊಸ ಮಾನದಂಡವನ್ನು ಹೊಂದಿಸುತ್ತದೆ, ಯಾವುದೇ ಬೆಳಕಿನಲ್ಲಿ ಅಸಾಧಾರಣ ಸ್ಪಷ್ಟತೆ ಮತ್ತು ಪ್ರಕಾಶಮಾನವಾದ ವಿವರಗಳನ್ನು ನೀಡುತ್ತದೆ. ಕ್ವಾಡ್ ಪಿಕ್ಸೆಲ್ ತಂತ್ರಜ್ಞಾನವು 4ಘಿ ಉತ್ತಮ ಕಡಿಮೆ-ಬೆಳಕಿನ ಸಂವೇದನೆಯನ್ನು ನೀಡುತ್ತದೆ, ದಿನ ಮತ್ತು ರಾತ್ರಿ ಅದ್ಭುತವಾಗಿ ವಿವರವಾದ ಫೋಟೋಗಳನ್ನು ಸೆರೆಹಿಡಿಯುತ್ತದೆ. 50ಒಕ ಸಹ ನೈಸರ್ಗಿಕ ಅಥವಾ ಹೆಚ್ಚಿಸಿದ/ ಬೂಸ್ಟ್ ಮಾಡಿದ ಬಣ್ಣಗಳಲ್ಲಿ ಚಿತ್ರಗಳನ್ನು ಸೆರೆಹಿಡಿಯುವ ಆಯ್ಕೆಯನ್ನು ಗ್ರಾಹಕರಿಗೆ ಒದಗಿಸುವ ನವೀನ ಇಮೇಜ್ ಆಟೋ ಎನ್ಹಾನ್ಸ್ ವೈಶಿಷ್ಟ್ಯದೊಂದಿಗೆ ಬರುತ್ತದೆ, ಇದು ಅವರಿಗೆ ವಿಭಾಗದಲ್ಲಿ ಅತ್ಯಂತ ಸುಧಾರಿತ ಫೋಟೋಗ್ರಫಿ ಅನುಭವವನ್ನು ನೀಡುತ್ತದೆ. ಇದಲ್ಲದೆ, 50ಒಕ ವಿಭಾಗದಲ್ಲಿ ಅತ್ಯುತ್ತಮವಾದ 16MP ಮುಂಭಾಗದ ಕ್ಯಾಮರಾವನ್ನು ಹೊಂದಿದೆ, ಇದು ಇದುವರೆಗಿನ ಸ್ಪಷ್ಟವಾದ ಸೆಲ್ಫಿಗಳಿಗೆ ಮತ್ತು ಸಮರ್ಪಿತ 2ಒಕ ಮ್ಯಾಕ್ರೋ ವಿಷನ್ ಕ್ಯಾಮರಾ ನಿಮ್ಮ ಫೋಟೋಗ್ರಫಿಯನ್ನು ಇನ್ನಷ್ಟು ಹೆಚ್ಚಿಸುತ್ತದೆ, ತೀಕ್ಷ್ಣವಾದ ಸ್ವಯಂ-ಪೋರ್ಟ್ರೇಟ್ಗಳು ಮತ್ತು ಸಂಕೀರ್ಣವಾದ ಕ್ಲೋಸ್-ಅಪ್ಗಳನ್ನು ಸಾಧ್ಯಗೊಳಿಸುತ್ತದೆ. ಮೋಟೋರೋಲಾ ಆಡಿಯೋ ಜೂಮ್, ಸ್ಪಾಟ್ ಕಲರ್, ಆಟೋ ಸ್ಮೈಲ್ ಕ್ಯಾಪ್ಚರ್, ಜೆಸ್ಚರ್ ಕ್ಯಾಪ್ಚರ್ ಮತ್ತು ಆಟೋ ನೈಟ್ ವಿಷನ್ ಮೋಡ್ಗಳಂತಹ ಕ್ಯಾಮರಾದಲ್ಲಿ ಪ್ರೀಮಿಯಂ ಸಾಫ್ಟ್ವೇರ್ ವೈಶಿಷ್ಟ್ಯಗಳನ್ನು ಸಹ ಪರಿಚಯಿಸಿದೆ

## ಮೈಗ್ರೇನ್ನಿಂದ ಮುಕ್ತಿ ಪಡೆಯಲು ಬೆಸ್ಟ್ ಕರಿಮೆಣಸು



### ಹೆಲ್ತ್ ಟಿಪ್ಸ್

ಕೆಲಸದ ಒತ್ತಡ, ಆಹಾರ ಪದ್ಧತಿಯ ಬದಲಾವಣೆಯಿಂದ ಅನೇಕರು ನೆಮ್ಮದಿಯನ್ನೇ ಕಳೆದುಕೊಳ್ಳುತ್ತಿದ್ದಾರೆ. ತೀವ್ರವಾದ ಆರೋಗ್ಯ ಸಮಸ್ಯೆಗಳಲ್ಲಿ ಇಂದು ಮೈಗ್ರೇನ್ ಒಂದಾಗಿದೆ.

ಅತಿಯಾದ ತಲೆನೋವಿನಿಂದ ವಾಂತಿ, ಅಸ್ವಸ್ಥತೆಯಿಂದ ಬಳಲುವಂತಾಗುತ್ತದೆ. ಸಾಮಾನ್ಯವಾಗಿ ತಲೆಯ ಒಂದು ಭಾಗದಲ್ಲಿ ಅತಿಯಾದ ನೋವು ಈ ಮೈಗ್ರೇನ್ ನಿಂದಾಗುತ್ತದೆ.

ಮೈಗ್ರೇನ್ ನನ್ನು ಪೇನ್ ಕಿಲ್ಲರ್ ಅಥವಾ ತಲೆನೋವಿನ ಮಾತ್ರೆಗಳಿಂದ ನಿವಾರಿಸುವುದು ಕಷ್ಟಕರ. ಇದಕ್ಕೆ ಪ್ರತ್ಯೇಕ ಚಿಕಿತ್ಸೆ ಅಗತ್ಯವಾಗುತ್ತದೆ.

ಆದರೆ ವೈದ್ಯರ ಸಲಹೆ, ಔಷಧಿಗಳ ಜೊತೆಗೆ ಕೆಲ ಮನೆ ಮದ್ದು ಮೈಗ್ರೇನ್ ನಿಂದ ದೂರವಾಗಲು ಸಹಕಾರಿಯಾಗುತ್ತದೆ. ಅದರಲ್ಲಿ ಪ್ರಮುಖವಾಗಿರುವುದೆಂದರೆ, ಕರಿಮೆಣಸು. ಕರಿಮೆಣಸನ್ನು ಸರಿಯಾಗಿ ಬಳಕೆ ಮಾಡುವುದರಿಂದ ಮೈಗ್ರೇನ್ ನಿಯಂತ್ರಿಸಲು ಸಾಧ್ಯವಿದೆ. ಮನೆಯಲ್ಲಿ ಮಾಡುವ ವಿವಿಧ ಬಗೆಯ ಅಡುಗೆಯಲ್ಲಿ ಕರಿಮೆಣಸು ಬಳಸುವ ಅಭ್ಯಾಸ ಕರಗತ ಮಾಡಿಕೊಳ್ಳಿ. ವಿಟಮಿನ್ ಹಾಗೂ ಖನಿಜಾಂಶಗಳಿಂದ ಕೂಡಿರುವ ಕರಿಮೆಣಸುಗಳು ದೇಹಕ್ಕೆ ಅಗತ್ಯವಾದ ಪೋಷಕಾಂಶ ಹಾಗೂ ರೋಗ ನಿರೋಧಕ ಶಕ್ತಿಯನ್ನು ನೀಡುತ್ತದೆ. ಕರಿಮೆಣಸಿನ ಕಾಳುಗಳನ್ನು ರಾತ್ರಿ ನೀರಿನಲ್ಲಿ ನೆನೆಸಿಟ್ಟು ಕುಡಿಯುವುದು ಅಥವಾ ತುಪ್ಪದಲ್ಲಿ ಬಿಸಿ ಮಾಡಿ ತೆಗೆದುಕೊಳ್ಳುವುದು ಮೈಗ್ರೇನ್ ಅಥವಾ ಇನ್ನಿತರ ತಲೆನೋವಿನ ಬಾಧೆಯನ್ನು ಹೋಗಲಾಡಿಸುತ್ತದೆ. ಕರಿಮೆಣಸಿನಲ್ಲಿರುವ ಖಾರದ ಅಂಶ ನೋವಿನ ಬಾಧೆಯನ್ನು ಹೋಗಲಾಡಿಸಲು ಸಹಕಾರಿಯಾಗುತ್ತದೆ. ಅಥವಾ ನೆನೆಸಿಟ್ಟ ಕರಿಮೆಣಸನ್ನು ಹುಡಿ ಮಾಡಿಯೂ ಸೇವಿಸಬಹುದು. ವಿಟಮಿನ್ ಎ, ಸಿ ಹಾಗೂ ಕೆ ಗಳನ್ನು ಹೊಂದಿರುವ ಕರಿಮೆಣಸಿನ ಕಾಳುಗಳಲ್ಲಿ, ಅತ್ಯಧಿಕ ಪ್ರಮಾಣದ ಖನಿಜಾಂಶಗಳೂ ಇವೆ. ಕ್ಯಾಲ್ಸಿಯಂ, ಪೋಟ್ಯಾಷಿಯಂ ಹಾಗೂ ಮೆಗ್ನಿಷಿಯಂ ಸೇರಿದಂತೆ ದೇಹಕ್ಕೆ ಅಗತ್ಯವಾದ ಖನಿಜಾಂಶಗಳನ್ನು ಇವುಗಳು ಹೊಂದಿವೆ.

## ಮದುವೆಗೆ ರೆಡಿಯಾದ್ರಾ ನಟಿ ಸಾಯಿ ಪಲ್ಲವಿ?



ನ್ಯಾಚುರಲ್ ಬ್ಯೂಟಿ ದಕ್ಷಿಣ ಭಾರತದ ಸ್ಟಾರ್ ನಟಿ ಸಾಯಿ ಪಲ್ಲವಿ ಎಲ್ಲಾ ನಾಯಕಿಯರಂತೆ ಅಲ್ಲ. ಮುಖಕ್ಕೆ ಬಣ್ಣ ಮತ್ತು ತುಟಿಗಳಿಗೆ ಲಿಪ್ಸ್ಟಿಕ್ನೊಂದಿಗೆ ಸಣ್ಣ ಬಟ್ಟೆಗಳನ್ನು ಧರಿಸುವುದು ಆಕೆಗೆ ಅಭ್ಯಾಸವಿಲ್ಲ. ನಟಿ ತುಂಬಾ ಸರಳ..

ಪಾತ್ರಗಳಿಗೆ ಪ್ರಾಮುಖ್ಯತೆ ಇದ್ದರೆ ಮಾತ್ರ ಸಾಯಿ ಪಲ್ಲವಿ ಸಿನಿಮಾ ಮಾಡುತ್ತಾರೆ.

ಅದರಲ್ಲೂ ಹೀರೋ ಕಂಟೆಂಟ್ ಇರುವ ಸಿನಿಮಾಗಳನ್ನು ಮಾಡಲು ಆಕೆಗೆ ಇಷ್ಟವಿಲ್ಲ ಎನ್ನಲಾಗಿದೆ. ಹಾಗಾಗಿಯೇ ಸಾಯಿ ಪಲ್ಲವಿ ಸ್ಟಾರ್ ಹೀರೋಗಳು ಮತ್ತು ಸೂಪರ್ ಸ್ಟಾರ್ ಗಳ ಸಿನಿಮಾಗಳನ್ನು ರಿಜೆಕ್ಟ್ ಮಾಡಿದ್ದು.. ಅಷ್ಟೇ ಅಲ್ಲ, ತೆಲುಗು ಚಿತ್ರರಂಗದಲ್ಲಿ ಇಲ್ಲಿಯವರೆಗೂ ಎಕ್ಸ್ ಪೋಸ್ ಮಾಡದ ನಾಯಕಿ ಯಾರಿದ್ದಾರೆ ಎಂದರೆ ಮೊದಲು ನೆನಪಿಗೆ ಬರುವುದು ಸಾಯಿ ಪಲ್ಲವಿ ಹೆಸರು.



ಅತ್ಯುತ್ತಮ ಕಂಟೆಂಟ್ ಇರುವ ಕಥೆಗಳನ್ನು ಆಯ್ದುಕೊಳ್ಳುತ್ತಿರುವ ಸಾಯಿ ಪಲ್ಲವಿ ಸದ್ಯ ಬಾಲಿವುಡ್ ನಲ್ಲಿ ರಾಮಾಯಣ ಸಿನಿಮಾ ಮಾಡುತ್ತಿದ್ದಾರೆ. ಈ ಸಿನಿಮಾದಲ್ಲಿ ಸೀತಾ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಸೀತಾ ಪಾತ್ರ ಮಾಡುತ್ತಿದ್ದಾಳೆ ಆದರೆ ಮದುವೆ ಯಾವಾಗ ಎಂದು ಎಲ್ಲರೂ ಕೇಳುತ್ತಿದ್ದಾರೆ. ಆದರೆ ಸಾಯಿ ಪಲ್ಲವಿಯನ್ನು ಮದುವೆಯಾಗುವಂತೆ ಒಬ್ಬ ವ್ಯಕ್ತಿ ಪೀಡಿಸಿದ್ದಾರಂತೆ.. ಹಾಗಾದ್ರೆ, ಯಾರದು..

ಸಂದರ್ಶನವೊಂದರಲ್ಲಿ ಮಾತನಾಡಿರುವ ಸಾಯಿ ಪಲ್ಲವಿ ತಮ್ಮ ಮದುವೆಯ ವಿವರಗಳನ್ನು ಬಹಿರಂಗಪಡಿಸಿದ್ದಾರೆ. ನನ್ನ ಮದುವೆಯನ್ನು ತಂದೆ-ತಾಯಿ ನೋಡಿಕೊಳ್ಳುತ್ತಾರೆ.. ಇದಲ್ಲದೆ, ಕರೋನಾ ಸಮಯದಲ್ಲಿ ನಾನು ಮನೆಯಲ್ಲಿದ್ದೆ.. ಆ ವೇಳೆ ನನ್ನ ತಂದೆ-ತಾಯಿ ಮದುವೆಯಾಗುವಂತೆ ಪೀಡಿಸಿದ್ದರು. ಎಲ್ಲಾ ಸೋದರ ಸೋದರಿಯರಿಗೆ ಮದುವೆಯಾಗಿದೆ.. ನೀನು ಮಾತ್ರ ಇನ್ನೂ ಮದುವೆಯಾಗಿಲ್ಲ, ಎಂದು ಕೋರೋನಾ ಸಮಯದಲ್ಲಿ ಮನೆಯವರು ಒತ್ತಾಯ ಮಾಡಿದ್ದರು.. ನನ್ನ ಪ್ರಕಾರ ನನಗೆ ಮದುವೆಗೆ ಒತ್ತಾಯ ಮಾಡುವಂತೆ ಮಾಡಿದ್ದು ಕೊರೋನಾ ಎಂದು ನಟಿ ಹೇಳಿದ್ದಾರೆ.. ಈಗಲೂ ನಾನು ನನ್ನ ವೃತ್ತಿ ಜೀವನದಲ್ಲಿ ಏನನ್ನೂ ಸಾಧಿಸಿಲ್ಲ. ಹೇಗೆ ಮದುವೆಯಾಗಲು ಬಯಸಲಿ? ಕರೋನಾ ಅವಧಿ ಮುಗಿಯುವವರೆಗೂ ನನಗೆ ತುಂಬಾ ಒತ್ತಡಗಳಿದ್ದವು.. ಕರೋನಾ ಮುಗಿದ ನಂತರ, ಸಿನಿಮಾಗಳ ಬ್ಯುಸಿಯಿಂದಾಗಿ ನಮ್ಮ ಮನೆಯವರು ಮದುವೆಯ ಬಗ್ಗೆ ಹೇಳಲಿಲ್ಲ. ವೃತ್ತಿ ಜೀವನದಲ್ಲಿ ನನಗೆ ಬೇಕಾದುದನ್ನು ಸಾಧಿಸುವವರೆಗೆ ಮದುವೆಯಾಗುವುದಿಲ್ಲ, ಒಂದು ವೇಳೆ ಆದರೂ ಹಾಗೆ ಮಾಡಿದರೆ ತಂದೆ-ತಾಯಿ ನೋಡಿದ ಹುಡುಗನನ್ನೇ ಮದುವೆಯಾಗುವುದಾಗಿ ಸಾಯಿ ಪಲ್ಲವಿ ಹೇಳಿದ್ದಾರೆ. ಈಗ ಈ ಸುದ್ದಿ ವೈರಲ್ ಆಗುತ್ತಿದೆ.

## ಎಣ್ಣೆ ತ್ವಚೆಗೆ ಮನೆ ಮದ್ದು

### ಬ್ಯೂಟಿ ಟಿಪ್ಸ್



ಎಣ್ಣೆ ತ್ವಚೆ ಅಥವಾ ಆಯಿಲ್ ಸ್ಕಿನ್ ಇರುವವರು ಮುಖದ ಆರೈಕೆ ಕಡೆ ಗಮನ ಕೊಡದಿದ್ದರೆ ಮುಖ ಮಂಕಾಗಿ ಕಾಣುವುದು. ಮುಖ ಕಳೆ-ಕಳೆಯಾಗಿ ಕಾಣಲು ಈ ಬ್ಯೂಟಿ ಟಿಪ್ಸ್ ಪಾಲಿಸಿದರೆ ಒಳ್ಳೆಯದು.

★ ದಿನದಲ್ಲಿ ಎರಡು ಬಾರಿ ಮುಖ ತೊಳೆಯಬೇಕು. ಹೆಚ್ಚು ರಾಸಾಯನಿಕ ಇರುವ ಸೋಪು ಬದಲು ಕಡಲೆ ಹಿಟ್ಟು ಮುಂತಾದ ನೈಸರ್ಗಿಕ ವಸ್ತುಗಳಿಂದ ಮುಖದ ಆರೈಕೆ ಮಾಡುವುದು ಒಳ್ಳೆಯದು.

★ ಮುಖದಲ್ಲಿ ಜಿಡ್ಡಿನಂಶ ಅಧಿಕವಿದ್ದರೆ ಬ್ಲೋಟಿಂಗ್ ಪೇಪರ್ ಬಳಸಿ ಒರೆಸಬೇಕು. ಹೀಗೆ ಮಾಡುವುದರಿಂದ ಮುಖ ಫ್ರೆಶ್ ಆಗಿ ಕಾಣುವುದು.

★ ಮುಖಕ್ಕೆ ಜೇನು ತುಪ್ಪ ಹಚ್ಚಿ, ನಂತರ ಮುಖ ತೊಳೆದರೆ ಮುಖದ ಹೊಳಪು ಹೆಚ್ಚುವುದು.

★ ವಾರಕ್ಕೊಮ್ಮೆ ಮೊಟ್ಟೆಯ ಬಿಳಿಯನ್ನು ಮುಖಕ್ಕೆ ಹಚ್ಚಿ, ಅದು ಒಣಗಿದ ಮೇಲೆ ಅರ್ಧ ಗಂಟೆಯ ಬಳಿಕ ಮುಖ ತೊಳೆಯಬೇಕು. ಹೀಗೆ ಮಾಡುವುದರಿಂದ ಮುಖ ಫ್ರೆಶ್ ಆಗಿ ಕಾಣುವುದು.

★ ಮೊಟ್ಟೆಯ ಬಿಳಿ ಬಾಗಕ್ಕೆ ನಿಂಬೆರಸ ಮಿಕ್ಸ್ ಮಾಡಿ ಹಚ್ಚಿದರೆ ಮೊಡವೆ ಸಮಸ್ಯೆಯೂ ಕಡಿಮೆಯಾಗುತ್ತದೆ.

★ ಬಾದಾಮಿಯನ್ನು ತರಿತರಿಯಾಗಿ ಪುಡಿ ಮಾಡಿ, ಅದಕ್ಕೆ ಜೇನು ತುಪ್ಪ ಮಿಕ್ಸ್ ಮಾಡಿ ಸ್ಕಬ್ ರೀತಿ ಬಳಸಬಹುದು.

★ ಕ್ರೀಮ್ ರೀತಿಯ ಮೇಕಪ್ ವಸ್ತುಗಳ ಬದಲು ಆಯಿಲ್ ಫ್ರೀ ಅಥವಾ ಪೌಡರ್ ರೀತಿಯ ಮೇಕಪ್ ಬಳಸುವುದು ಒಳ್ಳೆಯದು.

## ವಿನೂತನ ''ದಿ ಜುವೆಲರಿ ಶೋ'' ಅರಮನೆ ಮೈದಾನದಲ್ಲಿ ಪ್ರಾರಂಭ

» ಮದುವೆ, ಶುಭ ಸಮಾರಂಭಗಳಿಗೆ ಮೆರಗು ನೀಡಲಿರುವ ಆಭರಣ ಪ್ರದರ್ಶನ ಮತ್ತು ಮಾರಾಟ ಮೇಳ

ಮದುವೆ ಹಾಗೂ ಶುಭ ಕಾರ್ಯಗಳಿಗೆ ಮೆರಗು ನೀಡಲು ಬೆಂಗಳೂರಿನ ಅರಮನೆ ಮೈದಾನದಲ್ಲಿ ಆ.23 ರಿಂದ 25 ರವರೆಗೆ ಮೂರು ದಿನಗಳ ವಿನೂತನ ಆಭರಣ ಪ್ರದರ್ಶನ ಮತ್ತು ಮಾರಾಟ ಮೇಳ ಆಯೋಜಿಸಲಾಗಿದೆ. ದೇಶದ 100 ಅಗ್ರ ಶ್ರೇಣಿಯ ಆಭರಣ ತಯಾರಕರು ಭಾಗವಹಿಸುತ್ತಿರುವ ದಿ ಜ್ಯುವೆಲರಿ ಷೋ ದೇಶದ ಸೆಳೆಯಲಿದೆ.

ಗೋಲ್ಡನ್ ಕ್ರೀಪರ್ ಸಂಸ್ಥೆಯ ಜಗದೀಶ ಬಿ.ಎನ್ ಮತ್ತು ಹೇಮಲತಾ ಜಗದೀಶ್ ಈ ಮೇಳ ಆಯೋಜಿಸಿದ್ದು, ಜನಪ್ರಿಯ ನಟಿ ಆರಾಧನ ಮೇಳಕ್ಕೆ ಚಾಲನೆ ನೀಡಲಿದ್ದಾರೆ.ಅಮೋಘ ಮತ್ತು ಮಹಿಳೆಯರ ಅಚ್ಚುಮೆಚ್ಚಿನ ಭಾರತೀಯ ಒಡವೆಗಳ ಉತ್ಸವಕ್ಕೆ ಕ್ಷಣಗಣನೆ ಆರಂಭವಾಗಿದ್ದು, ನಂಬಿಕಸ್ತ ಹೂಡಿಕೆಗೂ ಇದು ವೇದಿಕೆಯಾಗಿದೆ. ದೇಶದ ನುರಿತ ಆಭರಣ ವಿನ್ಯಾಸಕರು ತಯಾರಿಸಿರುವ ವೈವಿಧ್ಯಮಯ ಆಭರಣಗಳನ್ನು ಕಣ್ತುಂಬಿಕೊಳ್ಳಬಹುದಾಗಿದೆ.

ಚಿನ್ನದ ಆಭರಣಗಳು ಬಿಐಎಸ್ ಹಾಲ್ ಮಾರ್ಕ್ ಹೊಂದಿದ್ದು, ವಜ್ರಾಭರಣಗಳು ಅಂತರರಾಷ್ಟ್ರೀಯ ಜಿಐಎ/ಐಜಿಐ ಟ್ಯಾಗ್ ಹೊಂದಿವೆ. ಆಭರಣ ಮಳಿಗೆಗಳ ಸದಸ್ಯರು ಆಭರಣಗಳ ವೈಶಿಷ್ಟ್ಯತೆ ಕುರಿತು ಮಾಹಿತಿ ನೀಡಲಿದ್ದಾರೆ. ಗ್ರಾಹಕರ ಅಭಿರುಚಿ ಮತ್ತು ಬಜೆಟ್ ಗೆ ಅನುಗುಣವಾಗಿ ಚಿನ್ನ ಮತ್ತು ವಜ್ರದ ಆಭರಣಗಳು ದೊರೆಯಲಿವೆ.

ಬೆಂಗಳೂರಿನ ಅನನ್ಯ ಜ್ಯುವೆಲ್ಸ್, ಅಭೂಷಣ್, ಅರ್ಜುನ ವರ, ಗಜರಾಜ್, ಎಂ.ಪಿ. ಸ್ವರ್ಣ ಮಹಲ್, ನಿಕಾರ್, ನಿರ್ಮಲ್ ಜುವೆಲ್ಸ್, ಪಂಚ ಕೇಸರಿ ಬಡೇರ, ಪಿಎಂಜೆ, ರಾಜ್ ಡೈಮಂಡ್ಸ್, ಸಿಂಹ ಜುವೆಲ್ಸ್, ಶ್ರೀ ಗಣೇಶ ಡೈಮಂಡ್ಸ್, ವರಶ್ರೀ, ಕಳಸ, ಶ್ರೀ ಕೃಷ್ಣ ಡೈಮಂಡ್ಸ್, ಬಿ.ಎನ್.ಆರ್ ಗೋಲ್ಡ್, ಧವನಂ, ಸನ್ ರೈಸ್ ಆಭರಣ್, ಸಾಗರ್ ಜುವೆಲ್, ಎನ್.ಎಸ್, ಜುವೆಲ್ಸ್, ಸೃಷ್ಟಿ, ಅಮ್ರಪಾಲಿ, ಮಹೇಂದ್ರ ಡೈಮಂಡ್ಸ್, ಎಂ.ಆರ್. ಕೆ. ಜೀವಾ, ವಿವಾಂತ್, ಬ್ಲೋಬೈ ಕೀರ್ತಿಲಾಲ್, ವಿನ್ಯಾಸ, ಸಂಕೇಶ್ ಸುರಾನ, ಟ್ರೈ ದಿಯಾ, ವಂಡರ್ ಡೈಮಂಡ್ಸ್, ಕೋಹಿರಾ, ಎವಾಲ್ ಜುವೆಲ್ಸ್, ರೂಪಂ ಸಿಲ್ವರ್, ಸಿಲ್ವರ್ ಗ್ಯಾಲರಿ, ಮೈ ಸಿಲ್ವರ್, ಸ್ಯಾಂಚೀಸ್, ಕಿನಾಶೆ, ಟ್ವೈಲ್ ಔರಾ, ಮದನ್ ಜೆಮ್ಸ್, ತಾರ್ ಹ್ಯಾಂಡಿಕ್ರಾಫ್ಟ್ಸ್ ಮತ್ತಿತರ ಮಳಿಗೆಗಳು ಭಾಗವಹಿಸಲಿವೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಮಕ್ಕಳ ಭವಿಷ್ಯದ ಚಿಂತೆ, ನೆರೆಹೊರೆಯವರೊಂದಿಗೆ ಆತ್ಮೀಯತೆ, ಅನಾರೋಗ್ಯ, ವಸ್ತುಗಳ ಕಳವು

**ವೃಷಭ:** ಸರ್ಕಾರಿ ಅಧಿಕಾರಿಗಳಿಗೆ ಅನುಕೂಲ, ಆರ್ಥಿಕ ಚೇತರಿಕೆ, ಸ್ಥಿರಾಸ್ತಿ ವಾಹನದಿಂದ ಧನಾಗಮನ, ತಾಯಿಯಿಂದ ಸಹಕಾರ

**ಮಿಥುನ:** ಧೈರ್ಯದಿಂದ ಮುನ್ನಡೆಯಿರಿ, ಸರ್ಕಾರಿ ಕೆಲಸ ಕಾರ್ಯಗಳಿಗೆ ತಿರುಗಾಟ, ಧಾರ್ಮಿಕ ಆಚರಣೆಗಳು, ಆತ್ಮಸಾಕ್ಷಿಯಿಂದ ಜಯ

**ಕಟಕ:** ಅತಿ ಬುದ್ಧಿವಂತಿಕೆಯಿಂದ ಸಮಸ್ಯೆಗಳು, ಖರ್ಚುಗಳು ಮತ್ತು ನಷ್ಟಗಳು, ಪಾಪಕರ್ಮಗಳ ಕಾಟ

**ಸಿಂಹ:** ವ್ಯಾಪಾರ ವ್ಯವಹಾರದಲ್ಲಿ ಲಾಭ, ಆರ್ಥಿಕ ಅನುಕೂಲ, ಸ್ವಾಭಿಮಾನದ ನಡವಳಿಕೆ, ಆರೋಗ್ಯದತ್ತ ಗಮನ ಹರಿಸಿ

**ಕನ್ಯಾ:** ಆತುರದಿಂದ ನಷ್ಟ ಸಂಕಷ್ಟ, ರಾಜಕೀಯ ವ್ಯಕ್ತಿಗಳಿಂದ ತೊಂದರೆ, ದೂರ ಪ್ರದೇಶಕ್ಕೆ ತೆರಳುವ ಆಲೋಚನೆ, ಅಧಿಕಾರಿಗಳಿಂದ ತೊಂದರೆ

**ತುಲಾ:** ಹಳೆಯ ನೆನಪುಗಳಿಂದ ನೋವು, ಸರ್ಕಾರಿ ಕಾರ್ಯಜಯ, ದೂರ ಪ್ರಯಾಣ, ಪರಸ್ಥಳ ವಾಸ

**ವೃಶ್ಚಿಕ:** ವಿದ್ಯಾಭ್ಯಾಸಲ್ಲಿ ಪ್ರಗತಿ, ಅಧಿಕ ಲಾಭ ಪ್ರಶಂಸೆಗಳು, ಉದ್ಯೋಗದಲ್ಲಿ ಅನುಕೂಲ, ಅನಾರೋಗ್ಯದಿಂದ ಗುಣಮುಖ

**ಧನಸ್ಸು:** ತಂದೆಯಿಂ ಸಹಕಾರ, ಧಾರ್ಮಿಕ ಆಧ್ಯಾತ್ಮಿಕ ಚಿಂತನೆಗಳು, ಪುಣ್ಯಕ್ಷೇತ್ರ ದರ್ಶನ,

**ಮಕರ:** ಸಾಲಗಾರರು ಮತ್ತು ಶತ್ರುಗಳಿಂದ ನೋವು, ಅನಿರೀಕ್ಷಿತ ಸೋಲು ನಷ್ಟ ನಿರಾಸೆ,

**ಕುಂಭ:** ದಾಂಪತ್ಯದಲ್ಲಿ ಕಲಹಗಳು, ಪಾಲುದಾರಿಕೆಯಲ್ಲಿ ಸಮಸ್ಯೆ, ವ್ಯಾಪಾರ ವ್ಯವಹಾರದಲ್ಲಿ ತೊಂದರೆ,

**ಮೀನ:** ಸ್ಥಿರಾಸ್ತಿ ವಾಹನದ ಮೇಲೆ ಸಾಲ, ದಾಂಪತ್ಯದಲ್ಲಿ ಕಲಹಗಳು, ಗೌರವಕ್ಕೆ ಧಕ್ಕೆ ಆಗುವ ಸಂದರ್ಭ, ತಾಯಿಯ ಆರೋಗ್ಯ ವ್ಯತ್ಯಾಸ

## ಗುಲಾಮಗಿರಿಯ ಸ್ಮರಣೆ

ಗುಲಾಮಗಿರಿಯ ನೆನಪಿನ ದಿನ, ಅಥವಾ ಗುಲಾಮ ವ್ಯಾಪಾರ ಮತ್ತು ಅದರ ನಿರ್ಮೂಲನೆಗಾಗಿ ಅಂತರರಾಷ್ಟ್ರೀಯ ದಿನವನ್ನು ಪ್ರಪಂಚದಾದ್ಯಂತ ಆಗಸ್ಟ್ 23 ರಂದು ಆಚರಿಸಲಾಗುತ್ತದೆ. ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆ (ಯುನೆಸ್ಕೋ) ಅಟ್ಲಾಂಟಿಕ್ ಗುಲಾಮ ವ್ಯಾಪಾರವನ್ನು ಸ್ಮರಿಸಲು ಈ ದಿನವನ್ನು ಆಯ್ಕೆ ಮಾಡಿದೆ. ಗುಲಾಮರ ವ್ಯಾಪಾರವು ಮಾನವ ಇತಿಹಾಸದಲ್ಲಿ ಮಾನವ ಹಕ್ಕುಗಳ ಅತ್ಯಂತ ಭಯಾನಕ ಉಲ್ಲಂಘನೆಯಾಗಿದೆ. 400 ವರ್ಷಗಳಿಂದ, ಆಫ್ರಿಕಾದಿಂದ 15 ದಶಲಕ್ಷಕ್ಕೂ ಹೆಚ್ಚು ಪುರುಷರು, ಮಹಿಳೆಯರು ಮತ್ತು ಮಕ್ಕಳು ಅಟ್ಲಾಂಟಿಕ್ ಗುಲಾಮರ ವ್ಯಾಪಾರದ ಬಲಿಪಶುಗಳಾಗಿದ್ದಾರೆ. ಈ ಸಮಯದಲ್ಲಿ, ಜನರು ತಮ್ಮ ಮನೆ ಬುಡಕಟ್ಟುಗಳಿಂದ ತೆಗೆದುಕೊಳ್ಳಲ್ಪಟ್ಟರು ಮತ್ತು ಯಾವುದೇ ವೇತನವಿಲ್ಲದೆ ಕಠಿಣ ಪರಿಸ್ಥಿತಿಗಳಲ್ಲಿ ಕೆಲಸ ಮಾಡಲು ಒತ್ತಾಯಿಸಲಾಯಿತು. ಗುಲಾಮಗಿರಿಯ ನೆನಪಿನ ದಿನವು ಗುಲಾಮಗಿರಿಯ ಭೀಕರತೆಯನ್ನು ನೆನಪಿಸಿಕೊಳ್ಳುವುದು ಮತ್ತು ಅದರ ಬಲಿಪಶುಗಳನ್ನು ಗೌರವಿಸುವುದು ಮಾತ್ರವಲ್ಲ; ಇದು ಇಂದಿನ ಜಗತ್ತಿನಲ್ಲಿ ಗುಲಾಮಗಿರಿಗೆ ಕಾರಣವಾದ ವರ್ಣಭೇದ ನೀತಿಯನ್ನು ಸಂಪೂರ್ಣವಾಗಿ ರದ್ದುಗೊಳಿಸುವುದನ್ನು ಖಚಿತಪಡಿಸಿಕೊಳ್ಳಲು ಕೆಲಸ ಮಾಡುವುದು. ಕಾರಣವನ್ನು ಬೆಂಬಲಿಸಲು, ಖಛಿಊಟಚಿಡಿಠಿಠ ಎನ್ನುವುದು ಅವರ ಮುಂದಿನ ಶಿಕ್ಷಣಕ್ಕೆ ನೆರವು ಮತ್ತು ಬೆಂಬಲದ ಅಗತ್ಯವಿರುವ ವಿದ್ಯಾರ್ಥಿಗಳ ಜೀವನವನ್ನು ಸುಧಾರಿಸಲು ಸಹಾಯ ಮಾಡಲು ಪ್ರಪಂಚದಾದ್ಯಂತದ ವಿದ್ಯಾರ್ಥಿವೇತನಗಳ ಕುರಿತು ಮಾಹಿತಿಯನ್ನು ಒದಗಿಸುವ ವೇದಿಕೆಯಾಗಿದೆ. ಸ್ಲೇವ್ ಟ್ರೇಡ್ ಮತ್ತು ಅದರ ನಿರ್ಮೂಲನೆಗಾಗಿ ಅಂತರರಾಷ್ಟ್ರೀಯ ದಿನವನ್ನು ಯುನೈಟೆಡ್ ನೇಷನ್ಸ್ ಎಜುಕೇಶನಲ್, ಸೈಂಟಿಫಿಕ್ ಮತ್ತು ಕಲ್ಚರಲ್ ಆರ್ಗನೈಸೇಶನ್ (ಯುನೆಸ್ಕೋ) 1988 ರಲ್ಲಿ ತನ್ನ ಸಾಮಾನ್ಯ ಸಮ್ಮೇಳನದಲ್ಲಿ ರಚಿಸಿತು. ಮೊದಲ ಗುಲಾಮಗಿರಿ ಸ್ಮರಣಾರ್ಥ ದಿನವನ್ನು ಹೈಟಿಯಲ್ಲಿ 1998 ರಲ್ಲಿ ಮತ್ತು ಇತರ ದೇಶಗಳಲ್ಲಿ ಆಚರಿಸಲಾಯಿತು. 1999 ರಲ್ಲಿ ಸೆನೆಗಲ್ನಂತೆ ಇದನ್ನು ಅನುಸರಿಸಿತು. ಗಓಇಖಅಔ ಆಗಸ್ಟ್ 23 ಅನ್ನು ಗುಲಾಮಗಿರಿಯ ನೆನಪಿಗಾಗಿ ಅಧಿಕೃತ ದಿನವಾಗಿ ಆಯ್ಕೆ ಮಾಡಿತು ಏಕೆಂದರೆ ಅಟ್ಲಾಂಟಿಕ್ ಸಾಗರದ ವ್ಯಾಪಾರದ ಇತಿಹಾಸದಲ್ಲಿ ಅದರ ಪ್ರಾಮುಖ್ಯತೆ. 1791 ರಲ್ಲಿ ಆಗಸ್ಟ್ 22 ರ ರಾತ್ರಿಯಿಂದ ಆಗಸ್ಟ್ 23 ರ ಬೆಳಿಗ್ಗೆಯವರೆಗೆ, ಅಟ್ಲಾಂಟಿಕ್ ಗುಲಾಮ ವ್ಯಾಪಾರದ ಸಮಯದಲ್ಲಿ ಮೊದಲ ಪ್ರಮುಖ ಗುಲಾಮರ ದಂಗೆಯು ಆಧುನಿಕ-ಹೈಟಿಯ ಸೇಂಟ್ ಡೊಮಿಂಗ್ಯೂನಲ್ಲಿ ಸಂಭವಿಸಿತು. ದಂಗೆಯನ್ನು ಹೈಟಿಯ ಕ್ರಾಂತಿ ಎಂದು ಕರೆಯಲಾಯಿತು ಮತ್ತು ಇದು ಹಿಂದಿನ ಫ್ರೆಂಚ್ ವಸಾಹತು ಸ್ವಾತಂತ್ರ್ಯವನ್ನು ಪಡೆದಾಗ 1791 ರಿಂದ 1804 ರವರೆಗೆ 13 ವರ್ಷಗಳ ಕಾಲ ನಡೆಯಿತು. ಸೇಂಟ್ ಡೊಮಿಂಗ್ಯಾದ್ಯಂತ ಸಾವಿರಾರು ಗುಲಾಮರು ಕ್ರಾಂತಿಯಲ್ಲಿ ಎದ್ದು ತಮ್ಮ ಗುಲಾಮ ಯಜಮಾನರ ಮೇಲೆ ದಾಳಿ ಮಾಡಿದರು. ಇದು ಗುಲಾಮಗಿರಿಯ ಇತಿಹಾಸದಲ್ಲಿ ನಿರ್ಣಾಯಕ ಕ್ಷಣವಾಗಿತ್ತು ಮತ್ತು ಇದು ಪ್ರಪಂಚದಾದ್ಯಂತದ ಗುಲಾಮರ ವ್ಯಾಪಾರದ ನಿರ್ಮೂಲನದ ಮೇಲೆ ಪ್ರಮುಖ ಪ್ರಭಾವ ಬೀರಿತು. ಅಟ್ಲಾಂಟಿಕ್ ಗುಲಾಮ ವ್ಯಾಪಾರವು 15 ನೇ ಶತಮಾನದಲ್ಲಿ ಪೋರ್ಚುಗೀಸರು ತ್ರಿಕೋನ ಗುಲಾಮರ ವ್ಯಾಪಾರದಲ್ಲಿ ಮೊದಲ ಗುಲಾಮ ವ್ಯಾಪಾರಿಗಳಾಗಿ ಪ್ರಾರಂಭವಾಯಿತು. ತ್ರಿಕೋನ ವ್ಯಾಪಾರವು ಗುಲಾಮರ ವ್ಯಾಪಾರದಲ್ಲಿ ತೊಡಗಿರುವ ತ್ರಿಕೋನ ಉಲ್ಲೇಖಿಸುತ್ತದೆ

# 156 ಔಷಧಿಗಳನ್ನು ನಿಷೇಧಿಸಿದ ಕೇಂದ್ರ ಸರ್ಕಾರ

ಜ್ವರ, ಶೀತ, ಅಲರ್ಜಿ ಮತ್ತ ನೋವಿಗೆ ಬಳಸುವ ಬ್ಯಾಕ್ಟೀರಿಯಾ ವಿರೋಧಿ ಔಷಧಿಗಳು ಸೇರಿದಂತೆ ವ್ಯಾಪಕವಾಗಿ ಮಾರಾಟವಾಗುವ 156 ಸ್ಥಿರ-ಡೋಸ್ ಸಂಯೋಜನೆ (ಎಫ್ಡಿಸಿ) ಔಷಧಿಗಳನ್ನು ಸರ್ಕಾರ ನಿಷೇಧಿಸಿದೆ.

ಎಫ್ಡಿಸಿ ಔಷಧಿಗಳು ನಿಗದಿತ ಅನುಪಾತದಲ್ಲಿ ಎರಡು ಅಥವಾ ಹೆಚ್ಚು ಸಕ್ರಿಯ ಔಷಧೀಯ ಪದಾರ್ಥಗಳ ಸಂಯೋಜನೆಯನ್ನು ಹೊಂದಿರುತ್ತವೆ ಮತ್ತು ಅವುಗಳನ್ನು 'ಕಾಕ್ಟೈಲ್' ಔಷಧಿಗಳು ಎಂದೂ ಕರೆಯಲಾಗುತ್ತದೆ.

ಆಗಸ್ಟ್ 12 ರಂದು ಕೇಂದ್ರ ಆರೋಗ್ಯ ಸಚಿವಾಲಯ ಹೊರಡಿಸಿದ ಗೆಜೆಟ್ ಅಧಿಸೂಚನೆಯ ಪ್ರಕಾರ, ಉನ್ನತ ಫಾರ್ಮಾ ಕಂಪನಿಗಳು ತಯಾರಿಸಿದ ನೋವು ನಿವಾರಕ ಔಷಧಿಗಳಾಗಿ ಬಳಸುವ ಜನಪ್ರಿಯ ಸಂಯೋಜನೆಗಳಲ್ಲಿ ಒಂದಾದ



'ಅಸೆಕ್ಲೋಫೆನಾಕ್ 50 ಮಿಗ್ರಾಂ + ಪ್ಯಾರಸಿಟಮಾಲ್ 125 ಮಿಗ್ರಾಂ ಮಾತ್ರೆ' ಅನ್ನು ಸರ್ಕಾರ ನಿಷೇಧಿಸಿದೆ.

ಈ ಪಟ್ಟಿಯಲ್ಲಿ ಮೆಫೆನಾಮಿಕ್ ಆಸಿಡ್ + ಪ್ಯಾರಸಿಟಮಾಲ್ ಇಂಜೆಕ್ಷನ್, ಸೆಟಿರಿಜೈನ್ ಎಚ್ಸಿಎಲ್ + ಪ್ಯಾರಸಿಟಮಾಲ್ + ಫೆನೈಲೆಫ್ರಿನ್ ಎಚ್ಸಿಎಲ್, ಲೆವೊಸೆಟಿರಿಜೈನ್ + ಫೆನೈಲೆಫ್ರಿನ್ ಎಚ್ಸಿಎಲ್ + ಪ್ಯಾರಸಿಟಮಾಲ್, ಪ್ಯಾರಸಿಟಮಾಲ್ + ಕ್ಲೋರ್ಫೆನಿರಮೈನ್ ಮಾಲೇಟ್ + ಫಿನೈಲ್ ಪ್ರೊಪನೊಲಮೈನ್, ಮತ್ತು ಕ್ಯಾಮೈಲೋಫಿನ್ ಡೈಹೈಡ್ರೊಕ್ಲೋರೈಡ್ 25 ಮಿಗ್ರಾಂ + ಪ್ಯಾರಸಿಟಮಾಲ್ 300 ಮಿಗ್ರಾಂ ಸೇರಿವೆ.ಪ್ಯಾರಸಿಟಮಾಲ್, ಟ್ರಾಮಾಡೋಲ್, ಟೌರಿನ್ ಮತ್ತು ಕೆಫೀನ್ ಸಂಯೋಜನೆಯನ್ನು ಕೇಂದ್ರವು ನಿಷೇಧಿಸಿದೆ. ಟ್ರಾಮಾಡೋಲ್ ಓಪಿಯಾಡ್ ಆಧಾರಿತ ನೋವು ನಿವಾರಕವಾಗಿದೆ.

''ಫಿಕ್ಸೆಡ್ ಡೋಸ್ ಕಾಂಬಿನೇಷನ್ ಔಷಧದ ಬಳಕೆಯು ಮಾನವರಿಗೆ ಅಪಾಯವನ್ನು ಉಂಟುಮಾಡುವ ಸಾಧ್ಯತೆಯಿದೆ ಎಂದು ಕೇಂದ್ರ ಸರ್ಕಾರ ತೃಪ್ತಿ ಹೊಂದಿದೆ, ಆದರೆ ಈ ಔಷಧಿಗೆ ಸುರಕ್ಷಿತ ಪರ್ಯಾಯಗಳು ಲಭ್ಯವಿದೆ'' ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

# ದೇವಾಲಯಗಳನ್ನು ಒಡೆಯುತ್ತೇವೆ : ಪಾಕ್ ಟಿವಿ ನಿರೂಪಕನ ವಿವಾದಾತ್ಮಕ ಹೇಳಿಕೆ

**ನವದೆಹಲಿ:** ಭಾರತವನ್ನು ವಿರೋಧಿಸುವ ಪಾಕಿಸ್ತಾನದ ಟಿವಿ ನಿರೂಪಕ ಜೈದ್ ಹಮೀದ್ ಮತ್ತೊಮ್ಮೆ ಬೆಂಕಿ ಹಚ್ಚಿದ್ದಾನೆ. ಅವರು ಘಜ್ವಾ-ಎ-ಹಿಂದ್ ಬಗ್ಗೆ ಪ್ರಚೋದನಕಾರಿ ಹೇಳಿಕೆಗಳನ್ನು ನೀಡಿದ್ದಾನೆ. ಅವನ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ.ಈ ವೀಡಿಯೊವನ್ನು ಯಾವಾಗ ತಯಾರಿಸಲಾಗಿದೆ ಎಂದು ತಿಳಿದಿಲ್ಲ, ಆದರೆ ಇದು ಭಾರತದ ಬಗ್ಗೆ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದು, ಭಾರತವನ್ನು ಮುಸ್ಲಿಮರನ್ನು ಆಕ್ರಮಿಸಿಕೊಂಡ ನಂತರ, ಹಿಂದೂಗಳನ್ನು ಅಳಿಸಿ ಹಾಕುತ್ತೇವೆ ಎಂದು ಹೇಳಿದ್ದಾನೆ.

ಜೈದ್ ಹಮೀದ್ ವೀಡಿಯೊದಲ್ಲಿ ಬಹಳ ಭಯಾನಕ ಯುದ್ಧ ನಡೆಯಲಿದೆ, ಅದು ಅನೇಕ ವರ್ಷಗಳವರೆಗೆ ಇರುತ್ತದೆ ಎಂದು ಹೇಳುತ್ತಿದ್ದಾನೆ. ಇದು ಒಂದು ಬಾರಿ, ಕೊನೆಯ ಬಾರಿಗೆ ಮಾತ್ರ ಮುಸ್ಲಿಮರ ಭಾರತದ ನಿಯಂತ್ರಣಕ್ಕೆ ಬಂದರೆ, ನಾವು ಹಿಂದೂ ಧರ್ಮವನ್ನು ಅಳಿಸಿ ಹಾಕುತ್ತೇವೆ. ಅನ್ಯಧರ್ಮೀಯ ಜನರ ಕೊನೆಯ ತಳಿಯು ಭಾರತದಲ್ಲಿ ಮಾತ್ರ ಉಳಿದಿದೆ. ಅವರು ಭಾರತದಲ್ಲಿ ಸಾವಿರಾರು ಪ್ರತಿಮೆಗಳನ್ನು ಮಾಡಿದ್ದಾರೆ. ಮತ್ತೊಮ್ಮೆ, ಈ ಎಲ್ಲಾ ವಿಗ್ರಹಗಳನ್ನು ಒಡೆಯಲಾಗುತ್ತದೆ. ಮಹಮೂದ್ ಘಜ್ನವಿ ಸೋಮನಾಥ ದೇವಾಲಯವನ್ನು ನೆಲಸಮಗೊಳಿಸಿದಂತೆಯೇ ಎಲ್ಲಾ ದೇವಾಲಯಗಳನ್ನು ನೆಲಸಮಗೊಳಿಸಲಾಗುವುದು. ಈ ಅನ್ಯಧರ್ಮೀಯರನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗುತ್ತದೆ ಎಂದಿದ್ದಾನೆ.

# ಕೋಲ್ಕತ್ತಾ ವೈದ್ಯೆ ಗ್ಯಾಂಗ್ ರೇಪ್ :ಸಿಬಿಐ ತನಿಖೆ

ಕೋಲ್ಕತ್ತಾ: ಆರ್ ಜಿ ಕರ್ ಆಸ್ಪತ್ರೆಯಲ್ಲಿ ನಡೆದಿದ್ದ ವೈದ್ಯೆ ಮೇಲಿನ ರೇಪ್ ಆಂಡ್ ಮರ್ಡರ್ ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ ಟೀಂ ಕೆಲವು ಮಹತ್ವದ ಅಂಶಗಳನ್ನು ಕಂಡುಕೊಂಡಿದೆ. ಟ್ರೈನಿ ವೈದ್ಯೆ ಮೇಲೆ ಆರ್ ಜಿ ಕರ್ ಆಸ್ಪತ್ರೆಯ ಸೆಮಿನಾರ್ ನಲ್ಲೇ ರೇಪ್ ಮಾಡಿ ಕ್ರೂರವಾಗಿ ಮರ್ಡರ್ ಮಾಡಲಾಗಿತ್ತು. ಆಕೆಯ ಮೇಲೆ ನಡೆದ ಕೃತ್ಯ ಗಮನಿಸಿ ಇದು ಕೇವಲ ಒಬ್ಬ ಮಾಡಿರುವ ಕೆಲಸವಲ್ಲ ಎಂದು ಪೋಷಕರು ಆರೋಪಿಸಿದ್ದರು. ಆದರೆ ಈಗ ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ ಅಧಿಕಾರಿಗಳು ಇದು ಗ್ಯಾಂಗ್ ರೇಪ್ ಅಲ್ಲ ಎಂಬ ಅಭಿಪ್ರಾಯಕ್ಕೆ ಬಂದಿದ್ದಾರೆ. ಡಿಎನ್ ಎ ಪರೀಕ್ಷೆ ವರದಿಗಳ ಆಧಾರದಲ್ಲಿ ಸಿಬಿಐ ಅಧಿಕಾರಿಗಳು ಈ ಅಭಿಪ್ರಾಯಕ್ಕೆ ಬಂದಿದ್ದಾರೆ. ಆದರೆ ಗ್ಯಾಂಗ್ ರೇಪ್ ಅಲ್ಲ ಎಂಬ ಅಂತಿಮ ತೀರ್ಮಾನಕ್ಕೆ ಅಧಿಕಾರಿಗಳು ಇನ್ನೂ ಬಂದಿಲ್ಲ. ಆ ಸಾಧ್ಯತೆಗಳ ಬಗ್ಗೆ ಇನ್ನಷ್ಟು ಕೂಲಂಕುಷವಾಗಿ ತನಿಖೆ ನಡೆಸುತ್ತಿದ್ದಾರೆ. ಫಾರೆನ್ಸಿಕ್ ವರದಿ ಬಂದ ಬಳಿಕವಷ್ಟೇ ಅಂತಿಮ ನಿರ್ಧಾರಕ್ಕೆ ಬರಲಿದ್ದಾರೆ.ಹೀಗಾಗಿ ಈಗಿನ ವರದಿ ಪ್ರಕಾರ ಸಂಜಯ್ ರಾಯ್ ಒಬ್ಬನೇ ಈ ಕೃತ್ಯವೆಸಗಿರಬಹುದು ಎನ್ನಲಾಗಿದೆ. ಮೃತದೇಹದ ಪಕ್ಕ ಆತನ ಬ್ಲೂಟೂತ್ ಹೆಡ್ ಸೆಟ್ ಕೂಡಾ ಪತ್ತೆಯಾಗಿತ್ತು. ಅಲ್ಲದೆ ಆತ ಸೆಮಿನಾರ್ ಹಾಲ್ ನ ಒಳಗೆ ಹೋಗುವ ಮತ್ತು ಹೊರಬರುವ ದೃಶ್ಯಗಳು ಸಿಸಿಟಿವಿಯಲ್ಲಿ ದಾಖಲಾಗಿತ್ತು.

# ಚಂದ್ರಯಾನಕ್ಕೆ ವರ್ಷದ ಸಂಭ್ರಮ

**ನವದೆಹಲಿ:** ಭಾರತೀಯ ಬಾಹ್ಯಾಕಾಶ ಸಂಸ್ಥೆ ಇಸ್ರೋ ಸ್ವದೇಶಿ ನಿರ್ಮಿತ ಚಂದ್ರಯಾನ-3 ಬಾಹ್ಯಾಕಾಶ ನೌಕೆಯನ್ನು ಶ್ರೀ ಹರಿಕೋಟಾದಿಂದ ಕಳೆದ ವರ್ಷ ಜುಲೈ 14 ರಂದು ಉಡಾವಣೆಗೊಳಿಸುವ ಮೂಲಕ ಇತಿಹಾಸ ಸೃಷ್ಟಿಸಿತ್ತು. ಆಗಸ್ಟ್ 23 ರಂದು ಚಂದ್ರನ ಮೇಲ್ಮೈಯಲ್ಲಿ ಲ್ಯಾಂಡ್ ಆಗಿ ಇಂದಿಗೆ ವರ್ಷ ಪೂರೈಸಿದೆ.

ಭಾರತವು ಚಂದ್ರನ ದಕ್ಷಿಣ ಧ್ರುವದ ಬಳಿ ಇಳಿದ ಮೊದಲ ದೇಶವಾಗಿ ಹೊರಹೊಮಿದ ದಿನವಿದು. ಅಮೆರಿಕ, ರಷ್ಯಾ ಮತ್ತು ಚೀನಾ ಬಳಿಕ ಚಂದ್ರನ ಮೇಲೆ ನೌಕೆಯನ್ನು ಇಳಿಸಿದ ನಾಲ್ಕನೇ ದೇಶ ಎಂಬ ಕೀರ್ತಿಗೆ ಭಾರತ ಪಾತ್ರವಾಗಿದೆ. ಚಂದ್ರಯಾನ- 3 ಯೋಜನೆಯ ಒಟ್ಟಾರೆ ವೆಚ್ಚ ಸುಮಾರು 615 ಕೋಟಿ ರೂ. ಚಂದ್ರಯಾನ-2ರ ವೆಚ್ಚ ಸುಮಾರು 978 ಕೋಟಿ ರೂ ಆಗಿತ್ತು. ಭಾರತದ ಈ ಸಾಧನೆಯ ಬಳಿಕ ಉಪಗ್ರಹ ಉಡಾವಣೆ ಸೇರಿದಂತೆ ಹಲವು ವಿಚಾರಗಳಿಗೆ ವಿಶ್ವದ ಹಲವು ರಾಷ್ಟ್ರಗಳು ಭಾರತವನ್ನು ಅವಲಂಬಿಸಿವೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ಹೂಡಿಕೆ ಹೆಚ್ಚುತ್ತಿದೆ. ಚಂದ್ರಯಾನ-3 ಮಿಷನ್ ಯಶಸ್ವಿಯಾಗಿ ಪೂರ್ಣಗೊಂಡ ಆಗಸ್ಟ್ 23 ಅನ್ನು ರಾಷ್ಟ್ರೀಯ ಬಾಹ್ಯಾಕಾಶ ದಿನ ಎಂದು ಘೋಷಿಸಲಾಗಿದೆ. ನೌಕೆಯ ಪ್ರಗ್ಯಾನ್ ರೋವರ್ ಚಂದ್ರನ ದಕ್ಷಿಣ ಧ್ರುವದಲ್ಲಿ ಏಕರೂಪದ ಮಣ್ಣಿನ ಸಂಯೋಜನೆಯ ಕುರಿತು ಮಾಹಿತಿಯನ್ನು ನೀಡಿದ್ದರೆ, ವಿಕ್ರಮ್ ಲ್ಯಾಂಡರ್ ಚಂದ್ರನ ಮೇಲ್ಮೈಯ ತಾಪಮಾನ ಅಳೆಯುವ ಜೊತೆಗೆ ಭೂಕಂಪನ ಚಟುವಟಿಕೆಯನ್ನು ಅಧ್ಯಯನ ಮಾಡಿದೆ. ರೋವರ್ ಚಂದ್ರನ ಮೇಲ್ಮೈಯಲ್ಲಿ ಸಲ್ಫರ್ ಕ್ಯಾಲ್ಸಿಯಂ, ಅಲ್ಯೂಮಿನಿಯಂ, ಕಬ್ಬಿಣ ಮತ್ತು ಟೈಟಾನಿಯಂನಂಥ ಅಂಶಗಳನ್ನು ಪತ್ತೆ ಹಚ್ಚಿದೆ. ಸಂಬಂಧಿಸಿದ ಪೋಟೊಗಳನ್ನು ಭೂಮಿಗೆ ಕಳಿಸುತ್ತಿದೆ.



# ಶೇಖ್ ಹಸೀನಾ ರಾಜತಾಂತ್ರಿಕ ಪಾಸ್ ಪೋರ್ಟ್ ರದ್ದುಗೊಳಿಸಿದ ಬಾಂಗ್ಲಾದೇಶ

**ಢಾಕಾ:** ಈ ತಿಂಗಳ ಆರಂಭದಲ್ಲಿ ವಿದ್ಯಾರ್ಥಿ ನೇತೃತ್ವದ ದಂಗೆಯಿಂದಾಗಿ ದೇಶದಿಂದ ಪಲಾಯನ ಮಾಡಿದ ಬಾಂಗ್ಲಾದೇಶ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ಅನ್ನು ಮಧ್ಯಂತರ ಸರ್ಕಾರ ಗುರುವಾರ ರದ್ದುಗೊಳಿಸಿದೆ.

ಹಸೀನಾ ಅವರ ಪಾಸ್‌ಪೋರ್ಟ್, ಹಾಗೆಯೇ ಮಾಜಿ ಸಚಿವರು ಮತ್ತು ಮಾಜಿ ಸಂಸದರು ಇನ್ನು ಮುಂದೆ ಅವರ ಹುದ್ದೆಯಲ್ಲಿಲ್ಲದವರ ಪಾಸ್ ಪೋರ್ಟ್ ಅನ್ನು ಹಿಂಪಡೆಯಬೇಕಾಗಿದೆ ಎಂದು ಆಂತರಿಕ ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ಮಾಜಿ ಪ್ರಧಾನಿ, ಅವರ ಸಲಹೆಗಾರರು, ಮಾಜಿ ಕ್ಯಾಬಿನೆಟ್ ಮತ್ತು ವಿಸರ್ಜನೆಗೊಂಡ ರಾಷ್ಟ್ರೀಯ ಅಸೆಂಬ್ಲಿಯ ಎಲ್ಲಾ ಸದಸ್ಯರು



ಅವರು ಹೊಂದಿದ್ದ ಸ್ಥಾನಗಳ ಆಧಾರದ ಮೇಲೆ ನೀಡಲಾಗಿದ್ದ ರಾಜತಾಂತ್ರಿಕ ಪಾಸ್‌ಪೋರ್ಟ್‌ಗಳನ್ನು ಹಿಂಪಡೆಯಬೇಕು ಎಂದು ಸಚಿವಾಲಯ ಪ್ರಕಟಣೆ ತಿಳಿಸಿದೆ.

ಶೇಖ್ ಹಸೀನಾ ಅವರು ಆಗಸ್ಟ್ 5 ರಿಂದ ಭಾರತದಲ್ಲಿ ನೆಲೆಸಿದ್ದು, ಬಾಂಗ್ಲಾದೇಶದಲ್ಲಿ ಹೆಚ್ಚುತ್ತಿರುವ ಹಿಂಸಾಚಾರ ಮತ್ತು ಅವರ ಸುರಕ್ಷತೆಗೆ ಬೆದರಿಕೆಗಳ ಮಧ್ಯೆ ದೆಹಲಿಯಲ್ಲಿ ಆಶ್ರಯ ಪಡೆದಿದ್ದಾರೆ. ಶೇಖ್ ಹಸೀನಾ ವಿರುದ್ಧ ಇಲ್ಲಿಯವರೆಗೆ 44 ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ ಎಂದು ಪಾಸ್ ಪೋರ್ಟ್ ರದ್ದುಪಡಿಸಲು ಕಾರಣ ನೀಡಲಾಗಿದೆ. ಇದರೊಂದಿಗೆ ಇನ್ನೂ ಕೆಲವು ಪ್ರಕರಣಗಳು ದಾಖಲಾಗಬಹುದು.

# ನಗ್ನ ಚಿತ್ರ, ವಿಡಿಯೋ ಚಿತ್ರೀಕರಣ: ಅಮೇರಿಕಾದಲ್ಲಿ ಭಾರತೀಯ ಮೂಲದ ವೈದ್ಯ ಬಂಧನ

**ನವದೆಹಲಿ:** ಸೆಕ್ಸ್ ಅಪರಾಧದ ಆರೋಪದಲ್ಲಿ ಅಮೇರಿಕಾದಲ್ಲಿ ಭಾರತೀಯ ಮೂಲದ 40 ವರ್ಷದ ವೈದ್ಯನೋರ್ವನನ್ನು ಬಂಧಿಸಲಾಗಿದೆ.

ಹಲವು ವರ್ಷಗಳಿಂದ ಮಹಿಳೆಯರು ಮತ್ತು ಮಕ್ಕಳ ನಗ್ನ ಚಿತ್ರಗಳು, ವಿಡಿಯೋಗಳನ್ನು ಚಿತ್ರೀಕರಿಸಿಕೊಂಡಿದ್ದ ಔಮೈರ್ ಏಜಾಜ್ ಎಂಬ ವ್ಯಕ್ತಿಯನ್ನು ಬಂಧಿಸಲಾಗಿದೆ. ಆಸ್ಪತ್ರೆ ಕೊಠಡಿಗಳು, ಬಾತ್ ರೂಮ್, ಬಟ್ಟೆ ಬದಲಾಯಿಸುವ ಪ್ರದೇಶಗಳಲ್ಲಿ, ಕೊನೆಗೆ ಆತನ ಮನೆಯಲ್ಲೇ ಗೌಪ್ಯ ಕ್ಯಾಮರಾಗಳನ್ನು ಇರಿಸಿದ್ದ ಔಮೈರ್ ಏಜಾಜ್ ನನ್ನು ಆ.08 ರಂದು ಬಂಧಿಸಲಾಗಿತ್ತು.

ನಗ್ನ ಚಿತ್ರಗಳನ್ನು ಚಿತ್ರೀಕರಿಸಿದ್ದ ವಿಡಿಯೋಗಳೊಂದಿಗೆ ಆತನ ಪತ್ನಿ ಅಧಿಕಾರಿಗಳನ್ನು ಸಂಪರ್ಕಿಸಿದ್ದರ ಪರಿಣಾಮ ಔಮೈರ್ ಏಜಾಜ್ ನ ವಿಕೃತಿ ಬಹಿರಂಗವಾಗಿದೆ. ಆತನ ಬಂಧನಕ್ಕೂ ಮುನ್ನ



ಆತನಿಗೆ ಯಾವುದೇ ಕ್ರಿಮಿನಲ್ ಇತಿಹಾಸ ಇರಲಿಲ್ಲ. ಆತ ಪ್ರಜ್ಞಾಹೀನ ಅಥವಾ ನಿದ್ರಿಸುತ್ತಿರುವ ಹಲವಾರು ಮಹಿಳೆಯರ ನಗ್ನ ಚಿತ್ರಗಳನ್ನು ಚಿತ್ರೀಕರಿಸಿದ್ದಾನೆ ಎಂದು ಒಕ್ಲ್ಯಾಂಡ್ ಕೌಂಟಿ ಶೆರಿಫ್ ಮಂಗಳವಾರ ಹೇಳಿದ್ದಾರೆ.

ಏಜಾಜ್‌ನ ಅಪರಾಧಗಳ ಪ್ರಮಾಣವು ಪ್ರಸ್ತುತ ತಿಳಿದಿಲ್ಲ, ಆದರೆ ಸಂಪೂರ್ಣ ತನಿಖೆಗೆ ತಿಂಗಳುಗಳನ್ನು ತೆಗೆದುಕೊಳ್ಳುತ್ತದೆ ಎಂದು ಶೆರಿಫ್ ಮೈಕ್ ಬೌಚರ್ಡ್ ಹೇಳಿದ್ದಾರೆ. ಯುಎಸ್ ರಾಜ್ಯದ ಮಿಚಿಗನ್‌ನ ಓಕ್‌ಲ್ಯಾಂಡ್ ಕೌಂಟಿಯಲ್ಲಿರುವ ರೋಚೆಸ್ಟರ್ ಹಿಲ್ಸ್‌ನಲ್ಲಿರುವ ಅವರ ಮನೆಯಲ್ಲಿ ಪತ್ತೆಯಾದ ಸಾವಿರಾರು ವೀಡಿಯೊಗಳನ್ನು ತನಿಖಾಧಿಕಾರಿಗಳು ಪರಿಶೀಲಿಸಿರುವುದರಿಂದ ಇನ್ನೂ ಅನೇಕ ಬಲಿಪಶುಗಳು ಇರಬಹುದೆಂದು ಅಧಿಕಾರಿಗಳು ಶಂಕಿಸಿದ್ದಾರೆ.

# ಶ್ರೀಲಂಕಾ ಚುನಾವಣೆ ವಿಳಂಬಕ್ಕೆ ಅಧ್ಯಕ್ಷ ರನಿಲ್ ಕಾರಣ

ಶ್ರೀಲಂಕಾ ಅಧ್ಯಕ್ಷ ರನಿಲ್ ವಿಕ್ರಮ್ಸಿಂಘೆ ನೇತೃತ್ವದ ಸರಕಾರವು ಚುನಾವಣೆಗಳನ್ನು ವಿಳಂಬ ಮಾಡಿ ದೇಶದ ನಾಗರಿಕರ ಮೂಲಭೂತ ಹಕ್ಕುಗಳನ್ನು ಉಲ್ಲಂ ಸಿದೆ ಎಂದು ಅಲ್ಲಿನ ಸುಪ್ರೀಂ ಕೋರ್ಟ್ ಸರಕಾರವನ್ನು ತರಾಟೆ ತೆಗೆದುಕೊಂಡಿದೆ. ಅಲ್ಲದೆ ಬಹುಕಾಲದಿಂದ ಮುಂದೂಡುತ್ತಿರುವ ಸ್ಥಳೀ ಯ ಸಂಸ್ಥೆಗಳ ಚುನಾವಣೆಯನ್ನು ಶೀಘ್ರವೇ ನಡೆಸುವಂತೆ ಆದೇಶ ನೀಡಿದೆ. 340ಕ್ಕೂ ಅಧಿಕ ಸ್ಥಳೀಯ ಸಂಸ್ಥೆ ಗಳಿಗೆ ಕಳೆದ ವರ್ಷದಿಂದಲೂ ಚುನಾವಣೆ ಮುಂದೂ ಡಲಾಗುತ್ತಿರುವುದನ್ನು ಪ್ರಶ್ನಿಸಿ ವಿಪಕ್ಷಗಳು, ಸಿವಿಲ್ ಸೊಸೈಟಿ ಗುಂಪುಗಳು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಪೀಠ ಈ ಹೇಳಿಕೆಯನ್ನು ನೀಡಿದೆ. ಈ ವೇಳೆ ಚುನಾವಣೆ ಆಯೋಗ ದ ಸದಸ್ಯರು ಹಾಗೂ ಅಧ್ಯಕ್ಷ ರನಿಲ್ ವಿಕ್ರಮ್ಸಿಂಘೆ ಚುನಾವಣೆ ನಡೆಸುವಲ್ಲಿ ವಿಫಲರಾಗಿ ನಾಗರಿಕರ ಹಕ್ಕು ಉಲ್ಲಂಘಿಸಿದ್ದಾರೆ ಎಂಬುದನ್ನು ಗಮನಿಸಿದೆ.

# ಮಳೆ, ಪ್ರವಾಹಕ್ಕೆ ತತ್ತರಿಸಿದ ಬಾಂಗ್ಲಾದೇಶ

ಢಾಕಾ: ನಿರಂತರ ಸುರಿದ ಧಾರಾಕಾರ ಮಳೆ ಹಾಗೂ ಪ್ರವಾಹಕ್ಕೆ ಬಾಂಗ್ಲಾದೇಶ ತತ್ತರಿಸಿದ್ದು ದಕ್ಷಿಣ ಮತ್ತು ಪೂರ್ವದ ಕನಿಷ್ಠ 8 ಜಿಲ್ಲೆಗಳು ಜಲಾವೃತಗೊಂಡಿವೆ. ಪ್ರವಾಹದ ನಡುವೆ ಸಿಲುಕಿರುವ ಸಾವಿರಾರು ಜನರನ್ನು ರಕ್ಷಿಸುವ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅಧಿಕಾರಿಗಳು ಗುರುವಾರ ಮಾಹಿತಿ ನೀಡಿದ್ದಾರೆ. ಸುಮಾರು 2.9 ದಶಲಕ್ಷ ಜನರು ಬಾಧಿತರಾಗಿದ್ದಾರೆ. 70,000ಕ್ಕೂ ಅಧಿಕ ಜನರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದೆ. ಇದುವರೆಗೆ ಇಬ್ಬರು ಸಾವನ್ನಪ್ಪಿರುವ ಮಾಹಿತಿ ಲಭಿಸಿದೆ ಎಂದು ವಿಪತ್ತು ನಿರ್ವಹಣಾ ಇಲಾಖೆಯ ಹಿರಿಯ ಅಧಿಕಾರಿ ಮುಹಮ್ಮದ್ ನಜ್ಮುಲ್ರನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ. ರಕ್ಷಣಾ ಕಾರ್ಯಾಚರಣೆಗೆ ಸೇನೆ ಮತ್ತು ನೌಕಾಪಡೆಯ ಸಿಬ್ಬಂದಿಗಳನ್ನು ನಿಯೋಜಿಸಲಾಗಿದ್ದು ಪ್ರವಾಹದಲ್ಲಿ ಸಿಲುಕಿ ಅತಂತ್ರ ಸ್ಥಿತಿಯಲ್ಲಿರುವವರನ್ನು ರಕ್ಷಿಸಲು ಹೆಲಿಕಾಪ್ಟರ್ ಮತ್ತು ಸ್ಪೀಡ್ಬೋಟ್ಗಳನ್ನು ಬಳಸಲಾಗುತ್ತಿದೆ ಎಂದವರು ಹೇಳಿದ್ದಾರೆ. ಈ ಮಧ್ಯೆ, ಭಾರತವು ಉದ್ದೇಶಪೂರ್ವಕವಾಗಿ ತನ್ನ ಅಣೆಕಟ್ಟುಗಳಿಂದ ನೀರನ್ನು ಹೊರಬಿಡುವ ಮೂಲಕ ಬಾಂಗ್ಲಾದೇಶದಲ್ಲಿ ಪ್ರವಾಹ ಸಮಸ್ಯೆ ಸೃಷ್ಟಿಸುತ್ತಿದೆ ಎಂದು ಮಧ್ಯಂತರ ಸರಕಾರದ ಕ್ರೀಡಾ ಸಚಿವ ಆಸಿಫ್ ಮಹ್ಮೂದ್ ಆರೋಪಿಸಿದ್ದಾರೆ. ಆರೋಪವನ್ನು ನಿರಾಕರಿಸಿರುವ ಭಾರತದ ವಿದೇಶಾಂಗ ಸಚಿವಾಲಯ ಜಲಾನಯನ ಪ್ರದೇಶದಲ್ಲಿ ಕಳೆದ ಹಲವು ದಿನಗಳಿಂದ ಈ ವರ್ಷದ ಅತೀ ಹೆಚ್ಚು ಮಳೆಯಾಗುತ್ತಿದೆ.

# ವಿಶ್ವದ ಅತಿ ದೊಡ್ಡ 'ವಜ್ರ' ಬೋಟ್ಸ್ವಾನಾದಲ್ಲಿ ಪತ್ತೆ..!

ಬರೋಬ್ಬರಿ 2492 ಕ್ಯಾರಟ್ ನ ಬೃಹತ್ ವಜ್ರ ಬೋಟ್ಸ್ವಾನಾದಲ್ಲಿ ಪತ್ತೆಯಾಗಿದೆ. ವಿಶ್ವದ ಅತಿದೊಡ್ಡ ವಜ್ರಗಳಲ್ಲಿ ಇದು ಒಂದಾಗಿದೆ.

ಇದುವರೆಗೆ ಪತ್ತೆಯಾಗಿರುವ ಅತಿ ದೊಡ್ಡ ವಜ್ರಗಳಲ್ಲಿ ಒಂದಾಗಿರುವ ಇದನ್ನು ಗುರುವಾರ ಪ್ರದರ್ಶನಕ್ಕೆ ಇಡಲಾಗುವುದು. ಬೋಟ್ಸ್ವಾನಾ ಸರ್ಕಾರವು 2,492-ಕ್ಯಾರೆಟ್ ವಜ್ರದ ಶಿಲೆ ಗಣಿಯಿಂದ ಹೊರತೆಗೆಯಲಾದ ಎರಡನೇ ಅತಿದೊಡ್ಡ ವಜ್ರದ ಶಿಲೆ ಎಂದು ಹೇಳಿದೆ.

ಕೆನಡಾದ ಗಣಿ ಕಂಪನಿ ಲುಕಾರಾ ಡೈಮಂಡ್ ಕಾರ್ಪ್ ಬುಧವಾರ ಹೇಳಿಕೆಯೊಂದರಲ್ಲಿ ಬೋಟ್ಸ್ವಾನಾದ ಕರೋವೆ ಮೈನ್ನಿಂದ ''ಅಸಾಧಾರಣ'' ಒರಟು ವಜ್ರ ಪತ್ತೆಯಾಗಿದೆ ಎಂದು ತಿಳಿಸಿದೆ. ಇದು ''ಉತ್ತಮ-ಗುಣಮಟ್ಟದ'' ಕಲ್ಲು ಇದನ್ನು ಎಕ್ಸ್-ರೇ ತಂತ್ರಜ್ಞಾನವನ್ನು ಬಳಸಿ ಕಂಡುಹಿಡಿಯಲಾಯಿತು ಎಂದು ಹೇಳಲಾಗಿದೆ.



ಈ ಅಸಾಮಾನ್ಯ 2,492-ಕ್ಯಾರೆಟ್ ವಜ್ರದ ಪತ್ತೆಯಿಂದ ನಾವು ಭಾವಪರವಶರಾಗಿದ್ದೇವೆ ಎಂದು ಲುಕಾರಾ ಅಧ್ಯಕ್ಷ ಮತ್ತು ಸಿಇಒ ವಿಲಿಯಂ ಲ್ಯಾಂಬ್ ಹೇಳಿದ್ದಾರೆ. 100 ವರ್ಷಗಳಿಗಿಂತಲೂ ಹೆಚ್ಚು ಅವಧಿಯಲ್ಲಿ ಕಂಡುಬಂದ ಅತಿ ದೊಡ್ಡ ವಜ್ರ ಇದಾಗಿದೆ. 1905 ರಲ್ಲಿ ದಕ್ಷಿಣ ಆಫ್ರಿಕಾದಲ್ಲಿ ಕುಲ್ಲಿನಾನ್ ವಜ್ರವು ಪತ್ತೆಯಾದ ನಂತರ ಗಣಿಯಿಂದ ಅಗೆದ ಎರಡನೇ ಅತಿದೊಡ್ಡ ವಜ್ರ ಇದಾಗಿದೆ. ಕುಲ್ಲಿನಾನ್ ವಜ್ರ 3,106 ಕ್ಯಾರೆಟ್ಗಳಷ್ಟಿತ್ತು ಮತ್ತು ಅವುಗಳಲ್ಲಿ ಕೆಲವು ರತ್ನಗಳಾಗಿ ಕತ್ತರಿಸಲ್ಪಟ್ಟವು. ಅವು ಬ್ರಿಟಿಷ್ ಕ್ರೌನ್ ಜ್ಯುವೆಲ್ ನ ಭಾಗವಾಗಿದೆ. 1800 ರ ದಶಕದ ಉತ್ತರಾರ್ಧದಲ್ಲಿ ಬ್ರೆಜಿಲ್ ನಲ್ಲಿ ದೊಡ್ಡ ಕಪ್ಪು ವಜ್ರವನ್ನು ಕಂಡುಹಿಡಿಯಲಾಯಿತು. ಆದರೆ ದದು ನೆಲದ ಮೇಲೆ ಕಂಡುಬಂದಿತು. ಉಲ್ಕಾಶಿಲೆಯ ಭಾಗವಾಗಿದೆ ಎಂದು ನಂಬಲಾಗಿದೆ. ಹೊಸದಾಗಿ ಪತ್ತೆಯಾದ ವಜ್ರವನ್ನು ಬೋಟ್ಸ್ವಾನಾ ಅಧ್ಯಕ್ಷ ಮೊಕ್ವೀಟ್ಸಿ ಮಸಿಸಿ ಅವರ ಕಚೇರಿಯಲ್ಲಿ ಜಗತ್ತಿಗೆ ಪ್ರಸ್ತುತಪಡಿಸಲಾಗುವುದು ಎಂದು ಬೋಟ್ಸ್ವಾನನ್ ಸರ್ಕಾರ ತಿಳಿಸಿದೆ. ಮಸಿಸಿ ಇದನ್ನು ವೀಕ್ಷಿಸುವವರಲ್ಲಿ ಮೊದಲಿಗರಾಗಿರುತ್ತಾರೆ.

# ಭಾರತವು ಪ್ರಜಾಪ್ರಭುತ್ವದ ವಿಶ್ವಶಕ್ತಿಯನ್ನು ತೋರಿಸಿದೆ: ಪ್ರಧಾನಿ ನರೇಂದ್ರ ಮೋದಿ

**ವಾರ್ಸಾ :** ಸಂಘರ್ಷವನ್ನು ಪರಿಹರಿಸಲು ಸಂವಾದ ಮತ್ತು ರಾಜತಾಂತ್ರಿಕತೆಯ ಪ್ರಾಮುಖ್ಯತೆಯನ್ನು ಪುನರುಚ್ಚರಿಸಿದ ಪ್ರಧಾನಿ ನರೇಂದ್ರ ಮೋದಿ ಭಾರತವು ಶಾಶ್ವತ ಶಾಂತಿಯ ಪ್ರತಿಪಾದಕವಾಗಿದೆ ಎಂದಿದ್ದಾರೆ.

ಎರಡು ರಾಷ್ಟ್ರಗಳ ಪ್ರವಾಸದ ಮೊದಲ ಹಂತದಲ್ಲಿ ಬುಧವಾರ ಪೋಲ್ಯಾಂಡ್ಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಗುರುವಾರ ಪೋಲ್ಯಾಂಡಿನಲ್ಲಿರುವ ಭಾರತೀಯ ಸಮುದಾಯದ ಜತೆ ಸಂವಾದ ನಡೆಸಿದರು.

ಭಾರತದ ರಾಜತಾಂತ್ರಿಕತೆ ಮತ್ತು ಅಂತರಾಷ್ಟ್ರೀಯ ಸಂಬಂಧಗಳ ನೀತಿಯನ್ನು ಎತ್ತಿಹಿಡಿದ ಪ್ರಧಾನಿ ಮೋದಿ 'ಇಂದಿನ ಭಾರತವು ಎಲ್ಲರೊಂದಿಗಿದೆ ಮತ್ತು ಎಲ್ಲರ ಹಿತಾಸಕ್ತಿಗಳ ಬಗ್ಗೆ ಯೋಚಿಸುತ್ತಿದೆ. ಭಾರತವು ಭಗವಾನ್ ಬುದ್ಧನ ಪರಂಪರೆಯ ನಾಡು. ಆದ್ದರಿಂದ ಭಾರತವು ಯುದ್ಧದ ಮೇಲೆ ವಿಶ್ವಾಸ ಹೊಂದಿಲ್ಲ, ಆದ್ದರಿಂದ ಈ ಪ್ರದೇಶದಲ್ಲಿ ಶಾಂತಿಗಾಗಿ ಪ್ರತಿಪಾದಿಸುತ್ತಿದೆ ಎಂದರು. ಆಂತರಿಕ ಸಂಘರ್ಷವನ್ನು ಪರಿಹರಿಸುವ ಭಾರತದ ಪರಿಕಲ್ಪನೆಯನ್ನು ಒತ್ತಿಹೇಳಿದ ಮೋದಿ 'ಭಾರತದ ಪರಿಕಲ್ಪನೆ ಸ್ಪಷ್ಟವಾಗಿದೆ. ಇದು ಯುದ್ಧದ ಯುಗವಲ್ಲ ಮತ್ತು ಮಾನವೀಯತೆಯ ದೊಡ್ಡ ಸವಾಲುಗಳನ್ನು ಎದುರಿಸಲು ಒಂದಾಗುವ ಸಮಯ. ಹೀಗಾಗಿ ಭಾರತವು ಸಂಘರ್ಷವನ್ನು ಪರಿಹರಿಸಲು ಮಾತುಕತೆ ಮತ್ತು ರಾಜತಾಂತ್ರಿಕತೆಯನ್ನು ನಂಬುತ್ತದೆ ಎಂದರು.

ವಿದೇಶದಲ್ಲಿ ನೆಲೆಸಿರುವ ಭಾರತೀಯರ ಸಾಧನೆಯನ್ನು ಶ್ಲಾಘಿಸಿದ ಮೋದಿ ' ವಿಶ್ವದ ಯಾವುದೇ ಪ್ರದೇಶಕ್ಕೆ ಹೋದರೂ ಭಾರತೀಯರು ಗರಿಷ್ಠ ಪ್ರಯತ್ನಗಳನ್ನು ಮಾಡುವುದನ್ನು ಕಾಣಬಹುದು.



ಅವರು ತಮ್ಮ ಪ್ರಯತ್ನಗಳ ಮೂಲಕ ದೇಶಕ್ಕೆ ವಿಶೇಷ ಮನ್ನಣೆಗಳನ್ನು ತರುತ್ತಿದ್ದಾರೆ' ಎಂದರು. ಇದು ಸುಮಾರು 40 ವರ್ಷಗಳ ನಂತರ ಪೋಲ್ಯಾಂಡ್ಗೆ ಭಾರತೀಯ ಪ್ರಧಾನಿಯ ಪ್ರಥಮ ಭೇಟಿಯಾಗಿದೆ.

ಬಳಿಕ ಪೋಲ್ಯಾಂಡ್ ಪ್ರಧಾನಿ ಡೊನಾಲ್ಡ್ ಟಸ್ಕ್ ಜತೆ ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸುವ ಮಾರ್ಗಗಳ ಕುರಿತು ಚರ್ಚೆ ನಡೆಸಿದರು. ಬಳಿಕ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪೋಲ್ಯಾಂಡ್ ಪ್ರಧಾನಿ ಟಸ್ಕ್ ' ಇತಿಹಾಸವು ನಮ್ಮ ರಾಷ್ಟ್ರಗಳಿಗೆ ಕಾನೂನನ್ನು ಗೌರವಿಸುವ, ಗಡಿಗಳನ್ನು ಗೌರವಿಸುವ, ಪ್ರಾದೇಶಿಕ ಸಮಗ್ರತೆಯ ಮಹತ್ವವನ್ನು ಕಲಿಸಿದೆ. ಯುದ್ಧವನ್ನು ಶಾಂತಿಯುತ, ನ್ಯಾಯಯುತ, ತ್ವರಿತ ರೀತಿಯಲ್ಲಿ ಅಂತ್ಯಗೊಳಿಸಲು ವೈಯಕ್ತಿಕವಾಗಿ ಪ್ರಯತ್ನಿಸುವಲ್ಲಿ ತನ್ನ ಬದ್ಧತೆಯನ್ನು ಮೋದಿ ಪುನರುಚ್ಚರಿಸಿದ್ದಾರೆ ' ಎಂದರು.

# ಎಂಪಾಕ್ಸ್ ಸೋಂಕು ಪ್ರಕರಣ ಥೈಲ್ಯಾಂಡ್ನಲ್ಲಿ ಪತ್ತೆ

ಬ್ಯಾಂಕಾಕ್ : ಏಶ್ಯಾದ ಪ್ರಥಮ ಮಾರಣಾಂತಿಕ ಎಂಪಾಕ್ಸ್ ವೈರಸ್ ತಳಿ ಥೈಲ್ಯಾಂಡ್ನ ವ್ಯಕ್ತಿಯಲ್ಲಿ ದೃಢಪಟ್ಟಿರುವುದಾಗಿ ವರದಿಯಾಗಿದೆ. ಆಫ್ರಿಕಾದಿಂದ ಬ್ರಿಟನ್ಗೆ ಪ್ರಯಾಣಿಸಿ ಅಲ್ಲಿಂದ ಆಗಸ್ಟ್ 14ರಂದು ಬ್ಯಾಂಕಾಕ್ ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಆಗಿದ್ದ ವ್ಯಕ್ತಿಯನ್ನು ಪರೀಕ್ಷೆ ನಡೆಸಿದಾಗ ಎಂಪಾಕ್ಸ್ ಸೋಂಕು ಪತ್ತೆಯಾಗಿತ್ತು. ಪ್ರಯೋಗಾಲಯಗಳಲ್ಲಿ ಹಲವು ಪರೀಕ್ಷೆಗಳ ಬಳಿಕ ಈತ ಎಂಪಾಕ್ಸ್ ಕ್ಲಾಡ್ 1ಬಿ ಸೋಂಕಿಗೆ ಒಳಗಾಗಿರುವುದು ದೃಢಪಟ್ಟಿದೆ. ಈತನ ಜತೆ ನಿಕಟ ಸಂಪರ್ಕದಲ್ಲಿದ್ದ 43 ಜನರ ಮೇಲೆ ನಿಗಾ ಇರಿಸಲಾಗಿದ್ದು ಇದುವರೆಗೆ ಯಾವುದೇ ರೋಗ ಲಕ್ಷಣ ವರದಿಯಾಗಿಲ್ಲ. 21 ದಿನ ಅವರ ಮೇಲೆ ನಿಗಾ ಮುಂದುವರಿಸಲಾಗುವುದು ಎಂದು ಥೈಲ್ಯಾಂಡ್ನ ರೋಗ ನಿಯಂತ್ರಣ ಇಲಾಖೆಯ ಅಧಿಕಾರಿ ಹೇಳಿದ್ದಾರೆ. 2022ರಿಂದ ಥೈಲ್ಯಾಂಡ್ನಲ್ಲಿ ಎಂಪಾಕ್ಸ್ ಕ್ಲಾಡ್2 ಸೋಂಕಿನ 800 ಪ್ರಕರಣ ಪತ್ತೆಯಾಗಿದೆ. ಆದರೆ ಎಂಪಾಕ್ಸ್ ಕ್ಲಾಡ್ 1ಬಿ ತಳಿ ಇದೇ ಮೊದಲ ಬಾರಿ ವರದಿಯಾಗಿದೆ.




# ಫಿಲಡೆಲ್ಫಿ ಕಾರಿಡಾರ್ ನಿಂದ ಸೇನೆ ಹಿಂಪಡೆಯುವುದಿಲ್ಲ: ನೆತನ್ಯಾಹು

**ಜೆರುಸಲೇಮ್:** ಗಾಝಾ ಮತ್ತು ಈಜಿಪ್ಟ್ ನಡುವಿನ ಗಡಿಭಾಗದ ಫಿಲಡೆಲ್ಫಿ ಕಾರಿಡಾರ್ ನಿಂದ ಇಸ್ರೇಲ್ ಪಡೆಗಳನ್ನು ಹಿಂಪಡೆಯಲು ಇಸ್ರೇಲ್ ಸಮ್ಮತಿಸಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕಚೇರಿ ಹೇಳಿದೆ.

ಸಚಿವ ಸಂಪುಟದಲ್ಲಿ ನಿರ್ಧರಿಸಿದ ರೀತಿಯಲ್ಲಿ ಯುದ್ಧದ ಎಲ್ಲಾ ಗುರಿಗಳನ್ನೂ ಸಾಧಿಸಲು ಇಸ್ರೇಲ್ ಬದ್ಧವಾಗಿದೆ. ಗಾಝಾ ಮತ್ತೆ ಎಂದಿಗೂ ಇಸ್ರೇಲ್ನ ಭದ್ರತೆಗೆ



ಬೆದರಿಕೆಯಾಗದು ಎಂಬುದನ್ನು ಖಚಿತಪಡಿಸಲಿದ್ದೇವೆ. ಇದಕ್ಕೆ ದಕ್ಷಿಣದ ಗಡಿಯನ್ನು ಭದ್ರಪಡಿಸುವ ಅಗತ್ಯವಿದೆ ಎಂದು ನೆತನ್ಯಾಹು ಅವರ ಕಚೇರಿಯ ಹೇಳಿಕೆ ತಿಳಿಸಿದೆ. ಬುಧವಾರ ಬೆಂಜಮಿನ್ ನೆತನ್ಯಾಹುಗೆ ದೂರವಾಣಿ ಕರೆ ಮಾಡಿದ ಅಮೆರಿಕ ಅಧ್ಯಕ್ಷ ಜೋ ಬೈಡನ್ 'ಗಾಝಾ ಕದನ ವಿರಾಮ ಒಪ್ಪಂದ ಹಾಗೂ ಒತ್ತೆಯಾಳು ಬಿಡುಗಡೆ ಕುರಿತ ಮಾತುಕತೆಯ ಪ್ರಗತಿಯ ಬಗ್ಗೆ ಚರ್ಚಿಸಿದರು ಎಂದು ಮಾಧ್ಯಮಗಳು ವರದಿ ಮಾಡಿವೆ.

ಈ ಮಧ್ಯೆ, ಕದನ ವಿರಾಮ ಒಪ್ಪಂದದ ವಿಷಯದಲ್ಲಿ ಇಸ್ರೇಲ್-ಹಮಾಸ್ ನಡುವಿನ ಭಿನ್ನಾಭಿಪ್ರಾಯವನ್ನು ನಿವಾರಿಸಲು ಅಮೆರಿಕ ಮುಂದಿರಿಸಿದ ಹೊಸ ಪ್ರಸ್ತಾಪದ ಬಗ್ಗೆ ಸಂಧಾನ ಮಾತುಕತೆಯ ಪ್ರಮುಖ ಮಧ್ಯವರ್ತಿ ಈಜಿಪ್ಟ್‌ನ ಅಧಿಕಾರಿಯೊಬ್ಬರು ಸಂದೇಹ ವ್ಯಕ್ತಪಡಿಸಿದ್ದಾರೆ. ಈ ಹೊಸ ಪ್ರಸ್ತಾಪವನ್ನು ಹಲವಾರು ಕಾರಣಗಳಿಗಾಗಿ ಹಮಾಸ್ ಒಪ್ಪದು. ಅಮೆರಿಕನ್ನರು ಭರವಸೆಯನ್ನು ನೀಡುತ್ತಿದ್ದಾರೆ ಆದರೆ ಗ್ಯಾರಂಟಿಯನ್ನಲ್ಲ. ಹಮಾಸ್ ಇದನ್ನು ಖಂಡಿತಾ ಒಪ್ಪದು. ಯಾಕೆಂದರೆ ಈ ಪ್ರಸ್ತಾಪದ ಪ್ರಕಾರ, 6 ವಾರಗಳ ಯುದ್ಧ ವಿರಾಮಕ್ಕೆ ಪ್ರತಿಯಾಗಿ ಹಮಾಸ್ ನಾಗರಿಕ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸಬೇಕು. ಆದರೆ ಶಾಶ್ವತ ಕದನ ವಿರಾಮದ ಉಲ್ಲೇಖವೇ ಇದರಲ್ಲಿಲ್ಲ' ಎಂದು ಸಂಧಾನ ಮಾತುಕತೆಯಲ್ಲಿ ಈಜಿಪ್ಟ್ ನಿಯೋಗದಲ್ಲಿದ್ದ ಅಧಿಕಾರಿಯನ್ನು ಉಲ್ಲೇಖಿಸಿ 'ಅಸೋಸಿಯೇಟೆಡ್ ಪ್ರೆಸ್' ವರದಿ ಮಾಡಿದೆ.

# ಬ್ರಿಜ್ ಭೂಷಣ್ ಪ್ರಕರಣ: ಕುಸ್ತಿಪಟುವಿಗೆ ತಕ್ಷಣ ಭದ್ರತೆ ಮರುಸ್ಥಾಪಿಸುವಂತೆ ದೆಹಲಿ ಕೋರ್ಟ್ ಆದೇಶ

**ನವದೆಹಲಿ:** ಭಾರತೀಯ ಕುಸ್ತಿ ಫೆಡರೇಷನ್ (ಡಬ್ಲ್ಯುಎಫ್ಐ) ಮಾಜಿ ಅಧ್ಯಕ್ಷ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧ ಲೈಂಗಿಕ ದೌರ್ಜನ್ಯದ ಆರೋಪ ಮಾಡಿರುವ ಮಹಿಳಾ ಕುಸ್ತಿಪಟುವಿನ ಭದ್ರತೆಯನ್ನು ತಕ್ಷಣ ಮರುಸ್ಥಾಪಿಸುವಂತೆ ದೆಹಲಿ ನ್ಯಾಯಾಲಯ ಗುರುವಾರ ನಗರ ಪೊಲೀಸರಿಗೆ ನಿರ್ದೇಶನ ನೀಡಿದೆ.

ರೌಸ್ ಅವೆನ್ಯೂ ನ್ಯಾಯಾಲಯದ ಹೆಚ್ಚುವರಿ ಮುಖ್ಯ ನ್ಯಾಯಿಕ ಮ್ಯಾಜಿಸ್ಟ್ರೇಟ್ ಪ್ರಿಯಾಂಕಾ ರಜಪೂತ್ ಅವರು ಈ ಆದೇಶವನ್ನು ಹೊರಡಿಸಿದ್ದಾರೆ. ಅಲ್ಲದೆ ಬ್ರಿಜ್ ಭೂಷಣ್ ವಿರುದ್ಧದ ಪ್ರಕರಣದಲ್ಲಿ ಅವರು ಹೇಳಿಕೆ ನೀಡಲು ಶುಕ್ರವಾರ ನ್ಯಾಯಾಲಯಕ್ಕೆ ಹಾಜರಾಗಲಿರುವ ಕಾರಣ ಕುಸ್ತಿಪಟುವಿನ ಸುರಕ್ಷತೆಯ ಅಗತ್ಯವನ್ನು ಒತ್ತಿ ಹೇಳಿದ್ದಾರೆ.

ಬ್ರಿಜ್ ಭೂಷಣ್ ವಿರುದ್ಧದ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಸಾಕ್ಷಿ ಹೇಳಲು ಹೊರಟಿದ್ದ ಮಹಿಳಾ ಕುಸ್ತಿಪಟುಗಳ ಭದ್ರತೆಯನ್ನು ದೆಹಲಿ ಪೊಲೀಸರು ಹಿಂಪಡೆದಿದ್ದಾರೆ ಎಂದು ಕುಸ್ತಿಪಟು ವಿನೇಶ್ ಪೋಗಟ್ ಅವರು ಆರೋಪಿಸಿದ್ದರು. ಇದರ ಬೆನ್ನಲ್ಲೇ ತಮ್ಮ ಭದ್ರತೆಯನ್ನು ಹಠಾತ್ ಹಿಂಪಡೆಯಲಾಗಿದೆ ಎಂದು ಆರೋಪಿಸಿ ಮೂವರು ಕುಸ್ತಿಪಟುಗಳ ಪರವಾಗಿ ಹಿರಿಯ ವಕೀಲೆ ರೆಬೆಕಾ ಜಾನ್ ಅವರು ಅರ್ಜಿ ಸಲ್ಲಿಸಿದ್ದರು.

ಭದ್ರತೆಯನ್ನು ಹಠಾತ್ ತೆಗೆದುಹಾಕುವುದರಿಂದ ಕ್ರೀಡಾಪಟುಗಳ ಸುರಕ್ಷತೆಗೆ ಗಂಭೀರ ಅಪಾಯವನ್ನುಂಟುಮಾಡುತ್ತದೆ ಎಂದು ಜಾನ್ ಹೇಳಿದ್ದರು.

ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ, ಭದ್ರತೆ ಹಿಂತೆಗೆತದ ಹಿಂದಿನ ಕಾರಣಗಳ ಬಗ್ಗೆ ಶುಕ್ರವಾರದೊಳಗೆ ವಿವರವಾದ ವಿವರಣೆಯನ್ನು ನೀಡುವಂತೆ ಪೊಲೀಸರಿಗೆ ಸೂಚಿಸಿದೆ.

ಮಧ್ಯಂತರ ಕ್ರಮವಾಗಿ, ಸಾಕ್ಷಿಗಳ ಪಟ್ಟಿಯಲ್ಲಿ ಸಂತ್ರಸ್ತೆ ಸಂಖ್ಯೆ 4 ಎಂದು ಗುರುತಿಸಲಾದ ದೂರುದಾರರಿಗೆ ತಕ್ಷಣ ಮತ್ತು ಸೂಕ್ತವಾಗಿ ಭದ್ರತೆಯನ್ನು ಮರುಸ್ಥಾಪಿಸುವಂತೆ ಮ್ಯಾಜಿಸ್ಟ್ರೇಟ್ ಪ್ರಿಯಾಂಕಾ ಅವರು ಪೊಲೀಸರಿಗೆ ಆದೇಶಿದ್ದಾರೆ.

ಬ್ರಿಜ್ ಭೂಷಣ್ ವಿರುದ್ಧ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಲಿರುವ ಮಹಿಳಾ ಕುಸ್ತಿಪಟುಗಳ ಭದ್ರತೆಯನ್ನು ದೆಹಲಿ ಪೊಲೀಸರು ಹಿಂಪಡೆದಿದ್ದಾರೆ ಎಂದು ಎಕ್ಸ್‌ನಲ್ಲಿ ವಿನೇಶ್ ಫೋಗಟ್ ಪೋಸ್ಟ್ ಮಾಡಿದ್ದರು.

# ಫಾಂಟಾ ಹೆಲಿಪ್ಯಾಡ್ ಬಳಿ ಅವಶೇಷಗಳಡಿ ಸಿಲುಕಿ ನಾಲ್ವರು ನೇಪಾಳಿ ಪ್ರಜೆಗಳು ಸಾವು

**ರುದ್ರಪ್ರಯಾಗ್(ಉತ್ತರಾಖಂಡ):** ಶುಕ್ರವಾರ ನಸುಕಿನ ಜಾವ ರುದ್ರಪ್ರಯಾಗದ ಫಾಂಟಾ ಹೆಲಿಪ್ಯಾಡ್‌ಗೆ ಸಮೀಪವಿರುವ ಖಾಟ್ ಗಡೇರಾ ಬಳಿ ಅವಶೇಷಗಳಡಿಯಿಂದ ನಾಲ್ಕು ಮೃತದೇಹಗಳನ್ನು ಹೊರತೆಗೆಯಲಾಗಿದೆ. ಮಧ್ಯರಾತ್ರಿ 1:20 ರ ಸುಮಾರಿಗೆ ಘಟನೆಯ ಬಗ್ಗೆ ಜಿಲ್ಲಾ ವಿಪತ್ತು ರಕ್ಷಣಾ ಪಡೆಗೆ ತಿಳಿಸಲಾಯಿತು. ತಕ್ಷಣ ರಕ್ಷಣಾ ತಂಡ ಸ್ಥಳಕ್ಕೆ ಧಾವಿಸಿತು. ರುದ್ರಪ್ರಯಾಗದ ವಿಪತ್ತು ನಿರ್ವಹಣಾ ಅಧಿಕಾರಿ ನಂದನ್ ಸಿಂಗ್ ರಾಜ್ವರ್ ಅವರು ನಾಲ್ವರು ಮೃತಪಟ್ಟಿದ್ದಾರೆ ಎಂದು ಖಚಿತಪಡಿಸಿದ್ದಾರೆ. ವರದಿಗಳ ಪ್ರಕಾರ, ಅವರೆಲ್ಲರೂ ನೇಪಾಳಿ ಪ್ರಜೆಗಳಾಗಿದ್ದು, ತೆರವು ಕಾರ್ಯ ನಡೆಯುತ್ತಿದೆ. ಅವರ ಮೃತದೇಹಗಳನ್ನು ಡಿಡಿಆರ್‌ಎಫ್ ತಂಡವು ರುದ್ರಪ್ರಯಾಗಕ್ಕೆ ತರುತ್ತಿದೆ ಎಂದು ರುದ್ರಪ್ರಯಾಗ ವಿಪತ್ತು ನಿರ್ವಹಣಾ ಅಧಿಕಾರಿ ನಂದನ್ ಸಿಂಗ್ ರಾಜ್ವರ್ ತಿಳಿಸಿದ್ದಾರೆ. ಎಕ್ಸ್ ಪೋಸ್ಟ್‌ನಲ್ಲಿ ಚಮೋಲಿ ಪೊಲೀಸರು



ನಿರ್ಬಂಧಿಸಲಾದ ಬದರಿನಾಥ್ ರಾಷ್ಟ್ರೀಯ ಹೆದ್ದಾರಿಯ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ಭಾರೀ ಮಳೆಯ ನಂತರ, ನಂದಪ್ರಯಾಗ, ಚಿಂಕಾ, ಗುಲಾಬ್‌ಕೋಟಿ, ಪಗಲ್‌ನಾಲಾ ಮತ್ತು ಕಾಂಚನಾಲಾ (ಬದ್ರಿನಾಥ್) ಬಳಿ ಅವಶೇಷಗಳಿಂದಾಗಿ ಬದರಿನಾಥ್ ರಾಷ್ಟ್ರೀಯ ಹೆದ್ದಾರಿಯನ್ನು ನಿರ್ಬಂಧಿಸಲಾಗಿದೆ ಎಂದು ಬರೆದಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಿನಿಮಾಗೆ ಬ್ರೇಕ್ ಕೊಟ್ಟು ಜಂಗಲ್‌ನಲ್ಲಿ ಪೂಜಾ ಹೆಗ್ಡೆ ಸುತ್ತಾಟ



ಕರಾವಳಿ ಬೆಡಗಿ ಪೂಜಾ ಹೆಗ್ಡೆ ಸದ್ಯ ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸಿನಿಮಾಗೆ ಕೆಲಸಕ್ಕೆ ಬ್ರೇಕ್ ಕೊಟ್ಟು ವಿದೇಶದ ಜಂಗಲ್‌ನಲ್ಲಿ ನಟಿ ಸುತ್ತಾಟ ನಡೆಸಿದ್ದಾರೆ. ಟ್ರೆಕ್ಕಿಂಗ್‌ನ ಸುಂದರ ಫೋಟೋಗಳನ್ನು ಪೂಜಾ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದ ನಟಿ ಸಿನಿಮಾಗೆ ಕೊಂಚ ಬ್ರೇಕ್ ಕೊಟ್ಟು ನಟಿ ವಿದೇಶಕ್ಕೆ ಹಾರಿದ್ದಾರೆ. ಕಾಡಿನ ಗ್ರೀನರಿ ಮಧ್ಯೆ ನಿಂತು ಪ್ರಕೃತಿಯನ್ನು ನೋಡಿ ಖುಷಿಪಟ್ಟಿರುವ ಚೆಂದದ ಫೋಟೋಗಳನ್ನು ನಟಿ ಶೇರ್ ಮಾಡಿದ್ದಾರೆ. ಈ ವೇಳೆ, ಶರ್ಟ್ ಮತ್ತು ಶಾರ್ಟ್ ಜೀನ್ಸ್ ಧರಿಸಿ ಮಿಂಚಿದ್ದಾರೆ.

ಅಂದಹಾಗೆ, ನಟಿಯ ಖಾಸಗಿ ವಿಚಾರಕ್ಕೆ ಬರೋದಾದ್ರೆ, ಬಾಲಿವುಡ್ ಹೀರೋ ರೋಹನ್ ಮೆಹ್ರಾ ಜೊತೆ ಪೂಜಾ ಹೆಸರು ಕೇಳಿ ಬರುತ್ತಿದೆ. ಕೆಲ ತಿಂಗಳುಗಳ ಹಿಂದೆ ನಟಿಯ ಕುಟುಂಬದ ಜೊತೆ ರೋಹನ್ ಕಾಣಿಸಿಕೊಂಡಿದ್ದರು. ಇದು ಇಬ್ಬರ ಡೇಟಿಂಗ್ ಸುದ್ದಿ ಮತ್ತಷ್ಟು ಪುಷ್ಠಿ ನೀಡಿತ್ತು.

ಇನ್ನೂ ಶಾಹಿದ್ ಕಪೂರ್ ಜೊತೆ 'ದೇವ' ಸಿನಿಮಾದಲ್ಲಿ ಪೂಜಾ ನಾಯಕಿಯಾಗಿ ನಟಿಸಿದ್ದಾರೆ. ಸುನೀಲ್ ಶೆಟ್ಟಿ ಪುತ್ರನ ಜೊತೆ ಸಿನಿಮಾ, ತಮಿಳು ನಟ ಸೂರ್ಯ ನಟನೆಯ 44ನೇ ಚಿತ್ರಕ್ಕೂ ಇವರೇ ನಾಯಕಿಯಾಗಿದ್ದಾರೆ.



# ಆಪರೇಷನ್ ಲಂಡನ್ ಕೆಫೆ ಚಿತ್ರದ ಟೀಸರ್ ರಿಲೀಸ್






ಕವೀಶ್ ಶೆಟ್ಟಿ ಮತ್ತು ಮೇಘಾ ಶೆಟ್ಟಿ ಕಾಂಬಿನೇಷನ್‌ನ ಕನ್ನಡ, ಮರಾಠಿ, ಹಿಂದಿ, ತೆಲುಗು, ತಮಿಳು ಹಾಗೂ ಮಲಯಾಳಂ ಭಾಷೆಗಳಲ್ಲಿ ನಿರ್ಮಾಣವಾಗುತ್ತಿರುವ 'ಆಪರೇಷನ್ ಲಂಡನ್ ಕೆಫೆ' ಚಿತ್ರದ ಚಿತ್ರೀಕರಣ ಈಗಾಗಲೇ ಮುಕ್ತಾಯಗೊಂಡು ಪೋಸ್ಟ್ ಪ್ರೊಡಕ್ಷನ್ ಕೆಲಸ ಬಿರುಸಿನಿಂದ ಸಾಗಿದೆ. ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿರುವ ಈ ಚಿತ್ರದ ಟೀಸರ್ ಬಿಡುಗಡೆಯಾಗಿ ಸೋಷಿಯಲ್ ಮೀಡಿಯಾದಲ್ಲಿ ಪ್ರೇಕ್ಷಕರಿಂದ ಭರ್ಜರಿ ಫಲಿತಾಂಶವನ್ನು ಕಾಣುತ್ತಿದೆ.

ಟೀಸರ್ ಬಿಡುಗಡೆ ಮಾಡಿದ ಚಿತ್ರತಂಡ ಇದೆ ಮೊದಲ ಬಾರಿ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಬಗ್ಗೆ ಇನ್ನೂ ಹೆಚ್ಚಿನ ಮಾಹಿತಿ ಹಂಚಿಕೊಂಡಿದೆ.

ಮೊದಲು ಮಾತನಾಡಿದ ನಿರ್ದೇಶಕ ಸಡಗರ ರಾಘವೇಂದ್ರ, ನಾನು ಕನ್ನಡದ ಹೆಸರಾಂತ ನಿರ್ದೇಶಕರ ಜತೆ ಹಲವಾರು ವರ್ಷಗಳಿಂದ ಕೆಲಸ ಮಾಡಿದ ನಂತರ ಇದೇ ಮೊದಲ ಬಾರಿಗೆ ತನ್ನ ಚೊಚ್ಚಲ ಚಿತ್ರದ ನಿರ್ದೇಶನ ಮಾಡಿದ್ದೇನೆ. ಈ ಚಿತ್ರದ ನಾಯಕನಾಗಿ ನಟಿಸಿರುವ ಕವೀಶ್ ಶೆಟ್ಟಿ ಈ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದಾರೆ. ಈ ಸಂದರ್ಭದಲ್ಲಿ ಅವರಿಗೆ ಹಾಗೂ ಚಿತ್ರದ ನಿರ್ಮಾಪಕರಿಗೆ ಧನ್ಯವಾದ ತಿಳಿಸುತ್ತೇನೆ ಎಂದರು.

ಇನ್ನು ಇದೊಂದು ನಕ್ಸಲಿಸಂ ಬೇಸ್ ಆಗಿಟ್ಟುಕೊಂಡು ಹೆಣೆದಿರುವ ಕಥೆ. ಹಾಗಂತ ನಕ್ಸಲಿಸಂನ ವೈಭವಿಕರಿಸಿಲ್ಲ. ಯಾವುದೇ ಒಬ್ಬ ವ್ಯಕ್ತಿಯ ಕುರಿತಾದ ಚಿತ್ರವೂ ಇದಲ್ಲ. ಇದು ಆಫ್ಟರ್ 'ಆಪರೇಷನ್ ಲಂಡನ್ ಕೆಫೆ'. ನೀವು ಮೊದಲು ನೋಡುವುದು ಚಿತ್ರದ ಪ್ರೀಕ್ವೆಲ್. ಮೊದಲ ಭಾಗ ಆನಂತರ ಬರಲಿದೆ.

ಆ ಚಿತ್ರದ ಕುರಿತು ಈಗಾಗಲೇ ಕಾರ್ಯ ಆರಂಭವಾಗಿದೆ. ಕನ್ನಡ ಹಾಗೂ ಮರಾಠಿ ಎರಡೂ ಭಾಷೆಯಲ್ಲಿ ನೇರವಾಗಿ ಚಿತ್ರೀಕರಣ ಮಾಡಲಾಗಿದೆ. ಉಳಿದಂತೆ ಹಿಂದಿ, ತೆಲುಗು, ತಮಿಳು ಹಾಗೂ ಮಲೆಯಾಳಂನಲ್ಲೂ ಚಿತ್ರ ಬಿಡುಗಡೆಯಾಗಲಿದೆ. ಕನ್ನಡ ಕಲಾವಿದರು ಮರಾಠಿ ಕಲಿತು, ಮರಾಠಿ ಕಲಾವಿದರು ಕನ್ನಡ ಕಲಿತು ಅಭಿನಯಿಸಿರುವುದು ಈ ಚಿತ್ರದ ವಿಶೇಷ.

'ಮುಂಗಾರು ಮಳೆ 2' ಚಿತ್ರದಿಂದ ನನ್ನ ಸಿನಿ ಜರ್ನಿ ಆರಂಭವಾಯಿತು. ನಂತರ 2020 ರಲ್ಲಿ 'ಜಿಲ್ಕಾ' ಚಿತ್ರದಲ್ಲಿ ನಟಿಸಿದ್ದೆ. ಸಡಗರ ರಾಘವೇಂದ್ರ ಅವರ ಕಾರ್ಯವೈಖರಿಯನ್ನು ಹತ್ತಿರದಿಂದ ಕಂಡಿದ್ದ ನನಗೆ ಅವರ ಮೊದಲ ನಿರ್ದೇಶನದಲ್ಲಿ ನನ್ನದೊಂದು ಚಿತ್ರ ಮಾಡುವ ಆಸೆಯಿತ್ತು. ಈ ಚಿತ್ರದ ಮೂಲಕ ಅದು ಈಡೇರಿದೆ. ವಿಜಯ ಕುಮಾರ್ ಶೆಟ್ಟಿ, ರಮೇಶ್ ಕೊಠಾರಿ, ಹವರಾಲ್ ಹಾಗೂ ದೀಪಕ್ ರಾಣೆ ಈ ಚಿತ್ರ ನಿರ್ಮಾಣ ಮಾಡಿದ್ದಾರೆ. ಮೇಘಾ ಶೆಟ್ಟಿ ನಾಯಕಿಯಾಗಿ ಅಭಿನಯಿಸಿದ್ದಾರೆ ಎಂದು ನಾಯಕ ಕವೀಶ್ ಶೆಟ್ಟಿ ತಿಳಿಸಿದರು.

ನಾನು ಮರಾಠಿ ಕಲಿತು ಈ ಚಿತ್ರದಲ್ಲಿ ಅಭಿನಯಿಸಿದ್ದೇನೆ. ನಿರ್ದೇಶಕರಾಗಿ ಸಡಗರ ರಾಘವೇಂದ್ರ ಅವರು ತಮ್ಮ ಮೊದಲ ನಿರ್ದೇಶನದಲ್ಲೇ ಉತ್ತಮವಾಗಿ ಕೆಲಸ ಮಾಡಿದ್ದಾರೆ. ಒಳ್ಳೆಯ ತಂಡದ ಜತೆಗೆ ಕೆಲಸ ಮಾಡಿರುವ ಖುಷಿಯಿದೆ ಎಂದರು ಮೇಘಾ ಶೆಟ್ಟಿ.

ಇಂಡಿಯನ್ ಫಿಲ್ಮ್ ಫ್ಯಾಕ್ಟರಿ ಮತ್ತು ದೀಪಕ್ ರಾಣೆ ಫಿಲಂ ಲಾಂಛನದಡಿಯಲ್ಲಿ ಈ ಚಿತ್ರವನ್ನು ನಿರ್ಮಿಸುತ್ತಿರುವ ವಿಜಯ್ ಕುಮಾರ್ ಶೆಟ್ಟಿ ಹವರಾಲ್, ರಮೇಶ್ ಕೊಠಾರಿ ಮತ್ತು ದೀಪಕ್ ರಾಣೆ ಮಾತನಾಡಿ ಈ ಚಿತ್ರಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಿ ಎಂದರು.

ಛಾಯಾಗ್ರಾಹಕ ಎನ್.ಡಿ. ನಾಗಾರ್ಜುನ್, ಸಾಹಸ ನಿರ್ದೇಶಕ ಮಾಸ್ ಮಾದ ಹಾಗೂ ಚಿತ್ರದಲ್ಲಿ ನಟಿಸಿರುವ ಅರ್ಜುನ್ ಕಾಪಿಕ್ಕಾಡ್, ವಿರಾಟ್ ಮಡಕೆ ಮುಂತಾದವರು 'ಆಪರೇಷನ್ ಲಂಡನ್ ಕೆಫೆ' ಹಾಗೂ ತಮ್ಮ ಪಾತ್ರದ ಬಗ್ಗೆ ಮಾತನಾಡಿ, ಚಿತ್ರದ ಮೇಕಿಂಗ್ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಕಳರಿಪಯಟ್ಟು ಕಲಿಕೆಯ ಫೋಟೋ ಹಂಚಿಕೊಂಡ ರಿಷಬ್ ಶೆಟ್ಟಿ

ರಾಷ್ಟ್ರಪ್ರಶಸ್ತಿ ವಿಜೇತ ರಿಷಬ್ ಶೆಟ್ಟಿ ಅವರು 'ಕಾಂತಾರ ಚಾಪ್ಟರ್ 1'ರ ಕುರಿತು ಬಿಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಈ ಸಿನಿಮಾದಲ್ಲಿ ಕಳರಿಪಯಟ್ಟು ಕಲಿಯುತ್ತಿರುವ ಲುಕ್‌ನಲ್ಲಿ ರಿಷಬ್ ಶೆಟ್ಟಿ ಕಾಣಿಸಿಕೊಂಡಿದ್ದಾರೆ. ಇದನ್ನು ಸೋಷಿಯಲ್ ಮೀಡಿಯಾದಲ್ಲಿ ರಿಷಬ್ ಹಂಚಿಕೊಂಡಿದ್ದಾರೆ.

ಇತ್ತೀಚೆಗೆ ರಿಷಬ್ ಕಳರಿಪಯಟ್ಟು ಕಲಿಯುತ್ತಿದ್ದಾರೆ ಎಂಬ ಮಾಹಿತಿ ಹೊರಬಿದ್ದಿತ್ತು. ಪಾತ್ರಕ್ಕಾಗಿ ಸಕಲ ತಯಾರಿ ಮಾಡಿಕೊಳ್ತಿದ್ದಾರೆ ಎನ್ನಲಾಗಿತ್ತು. ಈಗ ಚಿತ್ರದಲ್ಲಿನ ಕಳರಿಪಯಟ್ಟು ಕಲಿಕೆಯಲ್ಲಿ ನಿರತರಾಗಿರುವ ಲುಕ್ ಅನಾವರಣ ಆಗಿದೆ. ಇದರಿಂದ ಅಭಿಮಾನಿಗಳಿಗೆ ಚಿತ್ರದ ಮೇಲಿನ ನಿರೀಕ್ಷೆ ಡಬಲ್ ಆಗಿದೆ.

ಅಂದಹಾಗೆ, ಕಾಂತಾರ 1 ಸಿನಿಮಾವು ಆಗಸ್ಟ್ ಕೊನೆಯ ವಾರದಲ್ಲಿ 4ನೇ ಹಂತದ ಚಿತ್ರೀಕರಣ ನಡೆಯಲಿದ್ದು, ಕಂಪ್ಲಿಟ್ ಹೈವೋಲ್ಟೇಜ್ ಆ್ಯಕ್ಷನ್ ದೃಶ್ಯಗಳು ಶೂಟ್ ಮಾಡಲಾಗುತ್ತದೆ. ಚಿತ್ರವು ಪೂರ್ಣಗೊಳ್ಳುವ ಹಂತದಲ್ಲಿದೆ. ಅದಕ್ಕಾಗಿ ತೆರೆಮರೆಯಲ್ಲಿ ಭಾರೀ ತಯಾರಿ ನಡೆಯುತ್ತಿವೆ.



'ಕಾಂತಾರ ಚಾಪ್ಟರ್ 1' ಸಿನಿಮಾ ಕಾಂತಾರದ ಹಿಂದಿನ ಕತೆಯಾಗಿದೆ. ಕದಂಬ ಯುಗದ ಪಂಜುರ್ಲಿ ದೇವತೆಯ ಕಥೆಯನ್ನು ಇದು ಹೊಂದಿದೆ. ಹೊಂಬಾಳೆ ಸಂಸ್ಥೆ ನಿರ್ಮಾಣದ ಬಹುನಿರೀಕ್ಷಿತ ಚಿತ್ರವು 2025ರ ಆರಂಭದಲ್ಲಿ ಚಿತ್ರಮಂದಿರಗಳಿಗೆ ಬರುವ ನಿರೀಕ್ಷೆಯಿದೆ.

# 2025ರ ಭಾರತ- ಇಂಗ್ಲೆಂಡ್ ವೇಳಾಪಟ್ಟಿ ಬಿಡುಗಡೆಗೊಳಿಸಿದ ಬಿಸಿಸಿಐ

ರೋಹಿತ್ ಶರ್ಮಾ ನೇತೃತ್ವದ ಭಾರತೀಯ ಪುರುಷರ ಕ್ರಿಕೆಟ್ ತಂಡವು 5 ಪಂದ್ಯಗಳ ಟೆಸ್ಟ್ ಸರಣಿಗಾಗಿ ಮುಂದಿನ ವರ್ಷ ಇಂಗ್ಲೆಂಡ್‌ಗೆ ಪ್ರಯಾಣಿಸಲಿದೆ. ಸರಣಿಯ ಮೊದಲ ಪಂದ್ಯ ಜೂನ್ 20 ರಂದು ಲೀಡ್ಸ್‌ನ ಹೆಡಿಂಗ್ಲಿ ಅಂಗಳದಲ್ಲಿ ಆಂಭವಾಗಲಿದೆ.

2023–25ನೇ ಸಾಲಿನ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ಪಂದ್ಯವು ಮುಂದಿನ ಜೂನ್‌ನಲ್ಲಿ ನಡೆಯಲಿದ್ದು, ಬಳಿಕ ಭಾರತ–ಇಂಗ್ಲೆಂಡ್ ಸರಣಿ ಆರಂಭವಾಗಲಿದೆ. ಉಣಯ ತಂಡಗಳಿಗೂ ಇದು 4ನೇ ಆವೃತ್ತಿಯ ವಿಶ್ವ ಟೆಸ್ಟ್ ಚಾಂಪಿನ್ ಶಿಪ್ ಋತುವಿನ (2025–27) ಮೊದಲ ಸರಣಿಯಾಗಲಿದೆ.

5 ಪಂದ್ಯಗಳ ಟೆಸ್ಟ್ ಸರಣಿಗೆ ಲೀಡ್ಸ್, ಬರ್ಮಿಂಗ್ಹ್ಯಾಮ್, ಲಾರ್ಡ್ಸ್, ಮ್ಯಾಂಚೆಸ್ಟರ್ ಮತ್ತು ಓವಲ್ ಕ್ರೀಡಾಂಗಣಗಳು ಆತಿಥ್ಯ ವಹಿಸಲಿವೆ. ಸರಣಿಯ ವೇಳಾಪಟ್ಟಿಯನ್ನು ಬಿಸಿಸಿಐ ಗುರುವಾರ ತನ್ನ ಅಧಿಕೃತ ಎಕ್ಸ್‌ನಲ್ಲಿ ಪ್ರಕಟಿಸಿದೆ. ಬರೋಬ್ಬರಿ 1 ತಿಂಗಳ ಕಾಲ ಈ ಸರಣಿ ನಡೆಯಲಿದೆ.

2007 ರಲ್ಲಿ ಪಟೌಡಿ ಟ್ರೋಫಿಯಲ್ಲಿ ಮೈಕೆಲ್ ವಾನ್ ನೇತೃತ್ವದ ತಂಡವನ್ನು ಭಾರತ ಸೋಲಿಸಿದ ಬಳಿಕ ಇಂಗ್ಲೆಂಡ್‌ನಲ್ಲಿ ಇದುವರೆಗೂ ಟೆಸ್ಟ್ ಸರಣಿಯನ್ನು ಗೆದ್ದಿಲ್ಲ. ಆ ಪ್ರವಾಸದ ಸಮಯದಲ್ಲಿ, ರಾಹುಲ್ ದ್ರಾವಿಡ್ ನೇತೃತ್ವದ ಭಾರತವು ನಾಟಿಂಗ್ ಹ್ಯಾಮ್‌ನ ಟ್ರೆಂಟ್ ಬ್ರಿಡ್ಜ್‌ನಲ್ಲಿ ನಡೆದ 2ನೇ ಟೆಸ್ಟ್‌ನಲ್ಲಿ ಇಂಗ್ಲೆಂಡ್ ತಂಡವನ್ನು 7 ವಿಕೆಟ್‌ಗಳಿಂದ ಸೋಲಿಸಿ ಸರಣಿ ಗೆದ್ದುಕೊಂಡಿತ್ತು. ಒಟ್ಟು ಮೂರು ಪಂದ್ಯಗಳ ಸರಣಿ ಇದಾಗಿತ್ತು. 2 ಪಂದ್ಯಗಳು ಡ್ರಾ ಆಗಿದ್ದವು.

ಇನ್ನೂ ಪ್ರಸಕ್ತ ವರ್ಷದಲ್ಲಿ ತವರಿನಲ್ಲಿ ನಡೆದ ಇಂಗ್ಲೆಂಡ್ ವಿರುದ್ಧ ಟೆಸ್ಟ್ ಸರಣಿಯನ್ನು ಭಾರತ 4–1 ಅಂತರದಲ್ಲಿ ಗೆದ್ದುಕೊಂಡಿತ್ತು.



# ಮೀಡಿಯಾ, ಸಾರ್ವಜನಿಕರು ಬೈದ್ರೂ ನೀರಿನ ದರ ಏರಿಸಿಯೇ ಏರಿಸುತ್ತೇವೆ

**ಬೆಂಗಳೂರು:** ಮೀಡಿಯಾದವರು, ಸಾರ್ವಜನಿಕರು ಬೈದರೂ, ವಿರೋಧ ಪಕ್ಷದವರಾದರು ವಿರೋಧ ಮಾಡಿದರೂ ನಾವು ನೀರಿನ ದರ ಹೆಚ್ಚಳ ಮಾಡಿಯೇ ಮಾಡುತ್ತೇವೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಖಡಕ್ ಆಗಿಯೇ ಹೇಳಿದ್ದಾರೆ.

ವಿಧಾನಸೌಧದ ಮುಂಭಾಗದಲ್ಲಿ ನಡೆಯುತ್ತಿರುವ ಕಾರ್ಯಕ್ರಮದಲ್ಲಿ 110 ಹಳ್ಳಿಗಳಿಗೆ ಕಾವೇರಿ ನೀರಿನ ಸಂಪರ್ಕ ಕಲ್ಪಿಸುವ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಈ ವೇಳೆ ನೀರು ಮತ್ತು ಪವರ್ ಈ ಎರಡು ಪ್ರಮುಖವಾಗಿದ್ದು, ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರ ಅವಧಿಯಲ್ಲಿ ನಾನು ನಗರಾಭಿವೃದ್ಧಿ ಸಚಿವನಾಗಿದ್ದಾಗ ನೀರು ಸರಬರಾಜು ಖಾಸಗೀಕರಣ ಚರ್ಚೆ ನಡೆದಿತ್ತು. ನಮ್ಮ ರಾಜ್ಯದಲ್ಲಿ ಇದು ಕಷ್ಟವಾಗಲಿದೆ ಎಂದು ಮಾಹಿತಿ ನೀಡಿದ್ದೆ. ಇದಕ್ಕೆ ಸಾಕಷ್ಟು ವಿರೋಧ ವ್ಯಕ್ತವಾಗಿತ್ತು. ನಂತರ ಯೋಜನೆ ಕೈ ಬಿಟ್ಟಿದ್ದೆವು. ಈಗ ನಾನು ಸಚಿವನಾದ ಮೇಲೆ ಮತ್ತೆ ಕೆಲವರು ಖಾಸಗೀಕರಣದ ಬಗ್ಗೆ ಬಂದು ಮಾತಾಡಿದ್ದರು. ನಾನು ಇದು ಆಗಲ್ಲ ಎಂದು ಹೇಳಿದ್ದೇನೆ ಎಂದಿದ್ದಾರೆ.



ನೀರಿನ ದರ ಹಲವು ವರ್ಷಗಳಿಂದ ಏರಿಸಿಲ್ಲ. ಬೆಂಗಳೂರಲ್ಲಿ 1.40 ಕೋಟಿ ಜನಸಂಖ್ಯೆ ಇದೆ. ಮೇಕೆದಾಟು ಯೋಜನೆ ಮೇಲೆ ನನಗೆ ಭರವಸೆ ಇದೆ. ಆದಷ್ಟು ಬೇಗ ಅದು ಆಗಲಿದೆ. ಶರಾವತಿ ಕುಡಿಯುವ ನೀರಿನ ಯೋಜನೆಯು ಇದೆ. ಅದಕ್ಕೆ ಆ ಭಾಗದಲ್ಲಿ ವಿರೋಧವಿದೆ. ಎತ್ತಿನ ಹೊಳೆ ಯೋಜನೆಯು ಒಂದು ಹಂತದಲ್ಲಿ ಇದೆ ಎಂದು ತಿಳಿಸಿದ್ದಾರೆ.

ನೀರಾವರಿ ಯೋಜನೆಯಲ್ಲಿ ಹೊಸ ಬಿಲ್ ತಂದಿದ್ದೇವೆ. ನೀರಿನ ಕಾಲುವೆಗಳ ಅಕ್ಕಪಕ್ಕ ಅರ್ಧ ಕಿಮೀ ವ್ಯಾಪ್ತಿಯಲ್ಲಿ ಯಾರು ಬೋರ್ ವೆಲ್ ಹಾಕುವಂತಿಲ್ಲ. ಯಾರು ಕಾಲುವೆಗಳಿಂದ ನೇರವಾಗಿ ನೀರು ಟ್ಯಾಪ್ ಮಾಡುವಂತಿಲ್ಲ. ಇದಕ್ಕೆ ರಾಜ್ಯಪಾಲರು ಸಹಿ ಹಾಕಿದ್ದಾರೆ. ಹೊಸ ಕಾನೂನು ಬಂದಿದೆ ಎಂದು ಮಾಹಿತಿ ನೀಡಿದ್ದಾರೆ.

ಬಿಡಬ್ಲ್ಯೂಎಸ್‌ಎಸ್‌ಬಿ ಅವರು ನೀರಿನ ದರದ ಬಗ್ಗೆ ಮಾಹಿತಿಯನ್ನು ನೀಡುವಂತೆ ಸೂಚಿಸಿದ್ದಾರೆ. ಎಷ್ಟು ನೀರಿಗೆ ಖರ್ಚಾಗುತ್ತಿದೆ. ಎಷ್ಟು ಜನ ನೀರಿನ ಬಿಲ್ ಕಟ್ಟಿಲ್ಲ, ಎಷ್ಟು ವರ್ಷಗಳಿಂದ ನೀರಿನ ದರ ಹೆಚ್ಚಳ ಮಾಡಿಲ್ಲ ಎಲ್ಲ ಮಾಹಿತಿ ಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕಾರ್ಯಕ್ರಮದಲ್ಲಿ ಮಳೆ ಕೊಯ್ಲು ಜಾಗೃತಿ ಅಭಿಯಾನ, ವರುಣಮಿತ್ರ ತರಬೇತಿ ಹಾಗೂ ಯುನೈಟೆಡ್ ನೇಷನ್ ಇನೋವೇಷನ್ ಪ್ರಾಜೆಕ್ಟ್ ಫಾರ್ ವಾಟರ್ ಸೆಕ್ಯುರಿಟಿ ಇನ್ ಬೆಂಗಳೂರು ಸಿಟಿ ಯೋಜನೆಗೆ ಅವರು ಚಾಲನೆ ನೀಡಿದರು. 110 ಹಳ್ಳಿಗಳಿಗೆ ಕಾವೇರಿ ನೀರು ಒದಗಿಸುವ ಯೋಜನೆ ಅಡಿ, ಬೊಮ್ಮನಹಳ್ಳಿ, ರಾಜರಾಜೇಶ್ವರಿ ನಗರ, ಟಿ.ದಾಸರಹಳ್ಳಿ, ಬ್ಯಾಟರಾಯನಪುರ ಹಾಗೂ ಮಹದೇವಪುರ ವಿಧಾನಸಭೆಗೆ ಸೇರಿರುವ ಹಳ್ಳಿಗಳಿಗೆ ಕಾವೇರಿ ನೀರನ್ನು ನೀಡಲಾಗುತ್ತದೆ.

### ಮೊದಲ ಟೆಸ್ಟ್‌ನಲ್ಲೇ 41 ವರ್ಷದ ದಾಖಲೆ ಉಡೀಸ್

# 9ನೇ ಕ್ರಮಾಂಕದಲ್ಲಿ ಲಂಕಾ ಆಟಗಾರನ ಸಾಧನೆ

ಶ್ರೀಲಂಕಾದ ಕ್ರಿಕೆಟ್ ಆಟಗಾರ ಮಿಲನ್ ರಥನಾಯಕೆ ತನ್ನ ಚೊಚ್ಚಲ ಟೆಸ್ಟ್ ಪಂದ್ಯದಲ್ಲಿಯೇ ದಾಖಲೆ ನಿರ್ಮಿಸಿದ್ದಾರೆ.

ಮ್ಯಾಂಚೆಸ್ಟರ್‌ನಲ್ಲಿ ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯ ನಡೆಯುತ್ತಿದ್ದು, ರಥನಾಯಕೆ ತನ್ನ ಚೊಚ್ಚಲ ಟೆಸ್ಟ್ ಪಂದ್ಯವನ್ನಾಡಿದರು. ಪ್ರಭಾತ್ ಜಯಸೂರ್ಯ ಔಟಾದ ನಂತರ 9ನೇ ಕ್ರಮಾಂಕದಲ್ಲಿ ಇಳಿದ ಅವರು 135 ಎಸೆತದಲ್ಲಿ 72 ರನ್ ಸಿಡಿಸಿದರು. ಈ ಮೂಲಕ 41 ವರ್ಷದ ನಂತರ 1983ರ ಭಾರತದ ವಿಶ್ವಕಪ್ ಸ್ಟಾರ್ ಕ್ರಿಕೆಟಿಗ ಬಲ್ವಿಂದರ್ ಸಿಂಧು ಅವರ ಹೆಸರಿನಲ್ಲಿದ್ದ ದಾಖಲೆ ಮುರಿದರು.

ಬಲ್ವಿಂದರ್ ಸಿಂಧು 1983ರಲ್ಲಿ ಪಾಕಿಸ್ತಾನದ ವಿರುದ್ಧ ಹೈದರಾಬಾದ್‌ನಲ್ಲಿ ನಡೆದ ಟೆಸ್ಟ್‌ನಲ್ಲಿ 9ನೇ ಕ್ರಮಾಂಕದಲ್ಲಿ ಬ್ಯಾಟ್ ಮಾಡಿ 71 ರನ್ ಸಿಡಿಸಿ ದಾಖಲೆ ನಿರ್ಮಿಸಿದ್ದರು. ಈಗ ಶ್ರೀಲಂಕಾದ ಆಟಗಾರ ಮಿಲನ್ ರಥನಾಯಕೆ ಕೂಡ 9ನೇ ಕ್ರಮಾಂಕದಲ್ಲಿ ಬ್ಯಾಟ್‌ಗೆ ಇಳಿದು 72 ರನ್ ಸಿಡಿಸಿ ಔಟಾದರು.




9ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಇಳಿದ ರಥನಾಯಕೆ ನಾಯಕ ಧನಂಜಯ್ ಜೊತೆ 63 ರನ್ ಜೊತೆಯಾಟವಾಡಿದ್ದರು. ನಂತರ ಧನಂಜಯ್ 8ನೇ ವಿಕೆಟ್ ಒಪ್ಪಿಸಿ ಪೆವಿಲಿಯನ್‌ಗೆ ಮರಳಿದರು. ಕೊನೆಗೆ ಶೋಯಬ್ ಬಶೀರ್ ಎಸೆದ ಸ್ಪಿನ್ ಬೌಲಿಂಗ್‌ಗೆ ಕ್ಯಾಚ್ ಕೊಟ್ಟು ಔಟಾದರು.

ನಾಯಕ ಧನಂಜಯ್ ಡಿಸಿಲ್ವಾ 84 ಎಸೆತದಲ್ಲಿ 74 ರನ್ (8 ಬೌಂಡರಿ), ಮಿಲನ್ ರಥನಾಯಕೆ 135 ಎಸೆತದಲ್ಲಿ 72 ರನ್ (2 ಸಿಕ್ಸ್, 6 ಬೌಂಡರಿ), ಕುಸಾಲ್ ಮೆಂಡಿಸ್ 34 ಎಸೆತದಲ್ಲಿ 24 ರನ್ (4 ಬೌಂಡರಿ) ಗಳಿಸಿದರು. ಇನ್ನುಳಿದ ಆಟಗಾರರು ಹೆಚ್ಚು ಹೊತ್ತು ಕ್ರಿಸ್‌ನಲ್ಲಿ ನಿಲ್ಲದೇ ಪೆವಿಲಿಯನ್ ಸೇರಿದರು.

ಶ್ರೀಲಂಕಾ ತನ್ನ ಮೊದಲ ಇನ್ನಿಂಗ್‌ನಲ್ಲಿ 74 ಓವರ್‌ಗೆ 236 ರನ್ ಗಳಿಸಿ ಆಲೌಟ್ ಆಗಿದೆ. ಕ್ರಿಸ್ ವೋಕ್ಸ್ ಮತ್ತು ಶೋಯಬ್ ಬಶೀರ್ ತಲಾ 3 ವಿಕೆಟ್ ಕಬಳಿಸಿ ಮಿಂಚಿದರೆ, ಗಟ್ ಅಸ್ಕಿನ್ಸನ್ 2 ಮತ್ತು ಮಾರ್ಕ್ ವುಡ್ 1 ವಿಕೆಟ್ ಪಡೆದರು.

### ಜನ ಪೀಡಕರಂತೆ ವರ್ತಿಸುವ ಡಿಕೆ ಶಿವಕುಮಾರ್

# ನೀರಿನ ದರ ಏರಿಕೆಗೆ ಬಿಜೆಪಿ ಆಕ್ರೋಶ

**ಬೆಂಗಳೂರು:** ನೀರಿನ ದರ ಏರಿಕೆ ಮಾಡುವ ಸಂಬಂಧ ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆಗೆ ಪ್ರತಿಪಕ್ಷ ಬಿಜೆಪಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಟೀಕಾ ಪ್ರಹಾರ ನಡೆಸಿದೆ. ಈ ಬಗ್ಗೆ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿರುವ ಕರ್ನಾಟಕ ಬಿಜೆಪಿ, ಮೂರು ಬಿಟ್ಟವರು ಊರಿಗೆ ದೊಡ್ಡವರು. ಡಿಕೆ ಶಿವಕುಮಾರ್ ಜನರ ಪೀಡಕರಂತೆ ವರ್ತಿಸುತ್ತಿದ್ದಾರೆ ಎಂದಿದೆ.

'ಜನರ ಪೀಡಕರಂತೆ ವರ್ತಿಸುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅಂಥವರನ್ನು ನೋಡಿಯೇ 'ಮೂರು ಬಿಟ್ಟವರು ಊರಿಗೆ ದೊಡ್ಡವರು' ಎನ್ನುವ ನಾಣ್ನುಡಿ ಬರೆದಂತೆ ತೋರುತ್ತಿದೆ. ದಿನಕ್ಕೊಂದು ಬೆಲೆ ಏರಿಕೆಯ ಬರೆ ಎಳೆಯುತ್ತಿರುವ ಕಾಂಗ್ರೆಸ್ ಸರ್ಕಾರ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಮ್ಮ ದರ್ಪದ ಮಾತುಗಳನ್ನು ಆಡುತ್ತಲೇ ಇದೀಗ ಕುಡಿಯುವ ನೀರಿನ ಬೆಲೆ ಏರಿಕೆ ಮಾಡಿ ಬೆಂಗಳೂರಿಗರ ಜೇಬಿಗೆ ಕತ್ತರಿ ಪ್ರಯೋಗಕ್ಕೆ ಮುಂದಾಗಿದ್ದಾರೆ. ಬೆಂಗಳೂರಿಗೆ ಬದುಕು ಕಟ್ಟಿಕೊಳ್ಳಲು ಬಂದಿರುವ ಜನಸಾಮಾನ್ಯರು ಬೆಲೆ ಏರಿಕೆಯ ಭೂತವಾಗಿರುವ ಈ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೀದಿಗಿಳಿಯುವ ಕಾಲ ದೂರವಿಲ್ಲ' ಎಂದು ಬಿಜೆಪಿ ಉಲ್ಲೇಖಿಸಿದೆ.



'ದರ ಏರಿಕೆ, ಗುಂಡಿ ಭಾಗ್ಯ, ಅವ್ಯವಸ್ಥೆಯೇ ಕೊಡುಗೆ'

ಕಾಂಗ್ರೆಸ್ ಬರೀ ದರ ಏರಿಕೆಯನ್ನಷ್ಟೇ ಬೆಂಗಳೂರು ಜನಕ್ಕೆ ನೀಡಿದೆ ಎಂದು ಶಾಸಕ ಅಶ್ವತ್ಥ್ ನಾರಾಯಣ ಟೀಕಿಸಿದರು. ಬೆಂಗಳೂರಿನಲ್ಲಿ 'ಟಿವಿ9'ಗೆ ಪ್ರತಿಕ್ರಿಯೆ ನೀಡಿದ ಅವರು, ಬೆಂಗಳೂರಿಗೆ ಈ ಸರ್ಕಾರ ಕೊಟ್ಟಿದ್ದು ಏನು? ಬೆಂಗಳೂರಿನವರಿಗೆ ಕೊಟ್ಟಿದ್ದು ದರ ಏರಿಕೆ, ಗುಂಡಿ ಭಾಗ್ಯ, ಅವ್ಯವಸ್ಥೆ. ರಸ್ತೆಯಲ್ಲಿ ಯಾರೂ ಓಡಾಡದಂತಹ ಪರಿಸ್ಥಿತಿ ನಿರ್ಮಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ನೀರಿನ ದರ ಏರಿಕೆ ನಿರ್ಧಾರ ಕೈಬಿಡಬೇಕು ಎಂದು ಆಗ್ರಹಿಸಿದರು.

ಬೆಂಗಳೂರಿನಲ್ಲಿ ಬಡ, ಮಧ್ಯಮ ವರ್ಗದ ಜನ ಹೆಚ್ಚು ಇದ್ದಾರೆ. ಜನ ಬದುಕಬೇಕಾ, ಸಾಯಬೇಕಾ, ಸರ್ಕಾರಕ್ಕೆ ಕರುಣೆ ಇಲ್ವಾ ಎಂದು ಬೆಂಗಳೂರಿನಲ್ಲಿ ಬಿಜೆಪಿ ಎಂಎಲ್‌ಸಿ ರವಿಕುಮಾರ್ ವಾಗ್ದಾಳಿ ನಡೆಸಿದ್ದಾರೆ.

ಎಲ್ಲದರ ಬೆಲೆ ಏರಿಕೆ ಮಾಡುತ್ತಿದ್ದರೆ ಜನರು ಏನು ಮಾಡಬೇಕು? ಯಾವುದೇ ಕಾರಣಕ್ಕೂ ನೀರಿನ ದರ ಹೆಚ್ಚಳ ಮಾಡಬಾರದು. ನೀರಿನ ದರ ಏರಿಕೆ ಮಾಡಿದರೆ ಬಿಜೆಪಿ ವಿರೋಧಿಸಲಿದೆ. ನೀರಿನ ದರ ಹೆಚ್ಚಿಸಿದರೆ ಬೆಂಗಳೂರಿನ ಜನ ಶಾಪ ಹಾಕುತ್ತಾರೆ ಎಂದು ಅವರು ಹೇಳಿದ್ದಾರೆ.

ವಿಧಾನಸೌಧದ ಗ್ರ್ಯಾಂಡ್ ಸ್ಟೆಪ್ ಮುಂಭಾಗದಲ್ಲಿ ನಡೆದ ಕಾವೇರಿ ಸಂಪರ್ಕ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಡಿಕೆ ಶಿವಕುಮಾರ್, ಯಾರು ಏನೇ ಅಂದರೂ ತಲೆಕೆಡಿಸಿಕೊಳ್ಳಲ್ಲ, ನೀರಿನ ದರ ಹೆಚ್ಚಿಸಿಯೇ ಸಿದ್ಧ ಎಂದಿದ್ದಾರೆ. ಇದರ ಬೆನ್ನಲ್ಲೇ ಪ್ರತಿಪಕ್ಷ ಬಿಜೆಪಿ ಅವರ ವಿರುದ್ಧ ಮುಗಿಬಿದ್ದಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com